ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 144

18–11–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 144

# ಪ್ರಧಾನಿ ಮೋದಿ ಭೇಟಿಯಾದ ಸಿಎಂ ಸಿದ್ದರಾಮಯ್ಯ ರಾಯಚೂರಿಗೆ ಏಮ್ಸ್, ಪ್ರವಾಹ ಪರಿಹಾರಕ್ಕೆ ಮನವಿ

**ನವದೆಹಲಿ:** ದೆಹಲಿ ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ರಾಜ್ಯಕ್ಕೆ ಸಂಬಂಧಿಸಿದಂತೆ ಬಹುದಿನಗಳಿಂದ ಬಾಕಿಯಿರುವ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಮಾಡಿದ್ದಾರೆ.

ಇಂದು ಸಂಜೆ ಪ್ರಧಾನಿ ಮೋದಿ ಭೇಟಿ ಬಳಿಕ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ, ಕಬ್ಬು ಬೆಲೆ ನಿಗದಿ, 2,100 ಕೋಟಿ ರೂ.ಗಳಿಗೂ ಹೆಚ್ಚು ಪ್ರವಾಹ ಪರಿಹಾರ ಬಿಡುಗಡೆ ಮತ್ತು ನಿರ್ಣಾಯಕ ನೀರಾವರಿ ಯೋಜನೆಗಳಿಗೆ ಅನುಮೋದನೆ ನೀಡುವಂತೆ ಮನವಿ ಸಲ್ಲಿಸಿರುವುದಾಗಿ ತಿಳಿಸಿದರು.



ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆ: ರಾಯಚೂರಿನಲ್ಲಿ ಏಮ್ಸ್ ಸ್ಥಾಪನೆಗೆ ಅನುಮೋದನೆ ನೀಡುವಂತೆ ಪ್ರಧಾನಿ ಮೋದಿ ಅವರಿಗೆ ಮನವಿ ಸಲ್ಲಿಸಿದ್ದೇನೆ. ರಾಯಚೂರು ಜಿಲ್ಲೆಯು ಆರೋಗ್ಯ ರಕ್ಷಣೆ, ಶಿಕ್ಷಣ ಹಾಗೂ ತಲಾ ಆದಾಯದ ಮಟ್ಟದಲ್ಲಿ ಆರಂಭಿಕ ಹಂತದಲ್ಲಿದೆ. ದಲಿತರು ಹಾಗೂ ಹಿಂದುಳಿದ ವರ್ಗಗಳು ಹೆಚ್ಚಿನ ಸಂಖ್ಯೆಯಲ್ಲಿರುವ ಜಿಲ್ಲೆಯ ಜನರಿಗೆ ಗುಣಮಟ್ಟದ ರೆಫರೆಲ್ ವೈದ್ಯಕೀಯ ಕೇಂದ್ರದ ಅಗತ್ಯತೆಯನ್ನು ಪೂರೈಸಲು ರಾಯಚೂರು ಜಿಲ್ಲೆಯಲ್ಲಿ ಏಮ್ಸ್ ಸ್ಥಾಪನೆಗೆ ಅನುಮೋದನೆಯನ್ನು ನೀಡುವಂತೆ ಮನವಿಪತ್ರದಲ್ಲಿ ಕೋರಲಾಗಿದೆ ಎಂದರು.

ಕರ್ನಾಟಕ ಸರ್ಕಾರವು ರಾಯಚೂರಿನಲ್ಲಿ AIIMS ಸ್ಥಾಪನೆಗೆ ಅನುಮೋದನೆ ಕೋರಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯಕ್ಕೆ ವಿವರವಾದ ಯೋಜನಾ ವರದಿಯನ್ನು ಈಗಾಗಲೇ ಸಲ್ಲಿಸಿದೆ. ಯೋಜನೆಗೆ ಅವಶ್ಯವಾದ ಭೂಮಿಯ ಲಭ್ಯತೆ, ಸಂಪರ್ಕ ವ್ಯವಸ್ಥೆ ಮತ್ತು ಸ್ಥಳೀಯ ಆಡಳಿತದ ಬೆಂಬಲ ಸೇರಿದಂತೆ AIIMS ನಂತಹ ರಾಷ್ಟ್ರೀಯ ಮಟ್ಟದ ಸಂಸ್ಥೆಯನ್ನು ಜಿಲ್ಲೆಯಲ್ಲಿ ಸ್ಥಾಪಿಸಲು ಪೂರಕ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಮನವಿ ಪತ್ರದಲ್ಲಿ ಕೋರಲಾಗಿದೆ.

**ಪ್ರವಾಹ ಪರಿಹಾರಕ್ಕೆ ಮನವಿ:** ರಾಜ್ಯದಲ್ಲಿ ಒಟ್ಟು 14,58,000 ಹೆಕ್ಟೇರ್ ಬೆಳೆ ಹಾನಿಯಾಗಿದ್ದು, ಆ ಕುರಿತು ನಾವು ಜಂಟಿ ಸಮೀಕ್ಷೆ ಮಾಡಿಸಿದ್ದೇವೆ. ರಾಜ್ಯದಲ್ಲಿ ಒಟ್ಟು 3,560 ಕೋಟಿ ನಷ್ಟವಾಗಿದ್ದು, ಮಳೆಯಿಂದಾಗಿ ಮೂಲಸೌಕರ್ಯಗಳಿಗೂ ಹಾನಿಯಾಗಿರುವ ಬಗ್ಗೆ ಪ್ರಧಾನಮಂತ್ರಿಯವರಿಗೆ ಮನವರಿಕೆ ಮಾಡಿದ್ದೇವೆ. ಇದಲ್ಲದೇ ಸಾವಿರಾರ ಮನೆಗಳು, ರಸ್ತೆ ಹಾಗೂ ಶಾಲೆ ಗಳು ಹಾನಿಗೀಡಾಗಿದ್ದು ಎನ್.ಡಿ.ಆರ್ ಎಫ್ ವತಿಯಿಂದ ಪರಿಹಾರವನ್ನು ಕೋರಿ ಎರಡು ಮನವಿ ಪತ್ರಗಳನ್ನು ಸಲ್ಲಿಸಲಾಗಿದೆ. ಕೇಂದ್ರ ಸರ್ಕಾರ 2,136 ಕೋಟಿ ರೂ.ಗಳ ಪರಿಹಾರ ಬಿಡುಗಡೆ ಮಾಡಬೇಕು ಎಂದು ಸಿಎಂ ಆಗ್ರಹಿಸಿದರು.


### ಕಬ್ಬು ಬೆಳೆಗೆ ದರ ನಿಗದಿ

ಕಬ್ಬು ಬೆಳೆಗಾರರ ಸಮಸ್ಯೆ ಬಗ್ಗೆಯೂ ಪ್ರಧಾನಿ ಮೋದಿಯವರಿಗೆ ಮಾಹಿತಿ ನೀಡಲಾಗಿದೆ. ಎಫ್‌ಆರ್‌ಪಿ ನಿಗದಿ ಮಾಡುವುದು ಕೇಂದ್ರ ಸರ್ಕಾರ. ಟನ್‌ಗೆ 3,500 ರೂ. ಕೊಡಬೇಕು ಎಂದು ರೈತರ ಬೇಡಿಕೆ ಇದ್ದು, ರಾಜ್ಯದಲ್ಲಿ 81 ಸಕ್ಕರೆ ಕಾರ್ಖಾನೆಗಳಿವೆ. ರೈತ ಮುಖಂಡರು, ಕಾರ್ಖಾನೆ ಮಾಲೀಕರ ಜೊತೆ ಸಭೆ ನಡೆಸಿ ಪ್ರತಿ ಟನ್ ಕಬ್ಬಿಗೆ 3,300 ರೂ. ನಿಗದಿ ಮಾಡಿದ್ದೆವು. ಸರ್ಕಾರದ ದರ ಒಪ್ಪಿಕೊಂಡು ರೈತರು ಪ್ರತಿಭಟನೆ ಹಿಂಪಡೆದರು. ಆದರೆ, ಸಕ್ಕರೆಗೆ ದರ ನಿಗದಿ ಮಾಡುವುದು ಸಹ ಕೇಂದ್ರ ಸರ್ಕಾರ. ಕೆಜಿ ಸಕ್ಕ–ರೆಗೆ 41 ರೂ. ಮಾಡುವಂತೆ ಬೇಡಿಕೆ ಇದ್ದು, ಆ ಬಗ್ಗೆಯೂ ಪ್ರಧಾನಮಂತ್ರಿಗೆ ಮನವಿ ಮಾಡಿದ್ದೇನೆ ಎಂದು ಸಿಎಂ ಹೇಳಿದ್ದಾರೆ.

### ಪ್ರಮುಖ ನೀರಾವರಿ ಯೋಜನೆಗಳು

ರಾಜ್ಯದ ಪ್ರಮುಖ ನೀರಾವರಿ ಹಾಗೂ ಕುಡಿಯುವ ನೀರಿನ ಯೋಜನೆಗಳಿಗೆ ಕೇಂದ್ರದಿಂದ ಬಾಕಿ ಇರುವ ತೀರುವಳಿಗಳನ್ನು ದೊರಕಿಸಲು ಪ್ರಧಾನಮಂತ್ರಿಗಳು ಮಧ್ಯಪ್ರವೇಶ ಮಾಡಬೇಕು. ಪ್ರಧಾನಮಂತ್ರಿಗಳಿಗೆ ಸಲ್ಲಿಸಿರುವ ಮನವಿ ಪತ್ರದಲ್ಲಿ ಸಮತೋಲನ ಅಣೆಕಟ್ಟು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ತೀರುವಳಿಗಳನ್ನು ನೀಡುವಂತೆ ಕೇಂದ್ರ ಜಲ ಆಯೋಗಕ್ಕೆ ನಿರ್ದೇಶಿಸಬೇಕು ಎಂದರು.

## ಬಾಂಗ್ಲಾದೇಶ ಹಿಂಸಾಚಾರ: ಮಾಜಿ ಪ್ರಧಾನಿ ಶೇಖ್ ಹಸೀನಾಗೆ ಗಲ್ಲು ಶಿಕ್ಷೆ



**ಢಾಕಾ:** ಮಾನವ ಹಕ್ಕು ಉಲ್ಲಂಘನೆ ಪ್ರಕರಣದಲ್ಲಿ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರನ್ನು ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧ ನ್ಯಾಯಮಂಡಳಿ (ICT-BD) ದೋಷಿ ಎಂದು ತೀರ್ಪು ನೀಡಿದ್ದು ಅವರಿಗೆ ಗಲ್ಲು ಶಿಕ್ಷೆ ವಿಧಿಸಿ ಆದೇಶ ನೀಡಿದೆ.

ಬಾಂಗ್ಲಾದೇಶದ ಅಂತಾರಾಷ್ಟ್ರೀಯ ಅಪರಾಧ ನ್ಯಾಯಮಂಡಳಿಯ ತ್ರಿಸದಸ್ಯ ನ್ಯಾಯಪೀಠವು ಶೇಖ್ ಹಸೀನಾ ಅವರ ಮೇಲಿರುವ ಆರೋಪ ಸಾಬೀತಾಗಿದೆ ಎಂದು ಪ್ರಕಟಿಸಿದ್ದು ಶೇಖ್ ಹಸೀನಾ ಮಾನವ ಹಕ್ಕುಗಳ ಅಪರಾಧ ಎಸಗಿದ್ದಾರೆ. ಇದು ಗರಿಷ್ಠ ಶಿಕ್ಷೆಗೆ ಅರ್ಹವಾಗಿರುವ ಪ್ರಕರಣ ಎಂದು ತೀರ್ಪಿನಲ್ಲಿ ಉಲ್ಲೇಖಿಸಿದೆ.

ಕಳೆದ ವರ್ಷ ವಿದ್ಯಾರ್ಥಿಗಳ ನೇತೃತ್ವದಲ್ಲಿ ದೇಶವ್ಯಾಪಕವಾಗಿ ಭುಗಿಲೆದ್ದ ದಂಗೆಗಳ ಮೇಲಿನ 'ಮಾರಕ ದಮನ'ಕ್ಕೆ ಹಸೀನಾ ನೇರ ಸೂಚನೆ ನೀಡಿದ್ದಾಗಿ ನ್ಯಾಯಾಲಯವು ಹೇಳಿದೆ. ಶೇಖ್ ಹಸೀನಾ ಅವರ ಈ ನಡೆಯಿಂದ ಬಾಂಗ್ಲಾದೇಶದಲ್ಲಿ ಸಾಕಷ್ಟು ಹಿಂಸಾಚಾರ ನಡೆದಿತ್ತು. ನೂರಾರು ಪ್ರಜೆಗಳು ಸಾವನ್ನಪ್ಪಿದ್ದರು. ಈ ಪ್ರಕರಣದಲ್ಲಿ ಶೇಖ್ ಹಸೀನಾರನ್ನು ಪ್ರಮುಖ ಆರೋಪಿಯಾಗಿಸಲಾಗಿತ್ತು.

ಈ ಆದೇಶಗಳನ್ನು ಹೊರಡಿಸುವ ಮೂಲಕ ಶೇಖ್ ಹಸೀನಾ ಮತ್ತು ಪೊಲೀಸ್ ಐಜಿ ಅವರ ನಿಷ್ಕ್ರಿಯತೆಯ ಮೂಲಕ ವಿದ್ಯಾರ್ಥಿಗಳನ್ನು ಹತ್ಯೆ ಮಾಡಲಾಗಿದೆ. ಈ ಹತ್ಯೆಗಳು ಪ್ರಧಾನಿ ಶೇಖ್ ಹಸೀನಾ ಅವರ ಆದೇಶ ಮತ್ತು ಅವರ ಅರಿವಿನಲ್ಲೇ ನಡೆದಿದೆ. ಇಂತಹ ಕೃತ್ಯಗಳನ್ನು ಎಸಗುವ ಮೂಲಕ ಮಾನವೀಯತೆಯ ವಿರುದ್ಧ ಅಪರಾಧಗಳನ್ನು ಮಾಡಿದ್ದಾರೆ ಎಂದು ಕೋರ್ಟ್ ಹೇಳಿದೆ. ಇದೀಗ ತಿಂಗಳುಗಳ ಕಾಲ ನಡೆದ ವಿಚಾರಣೆಯಲ್ಲಿ ಉತ್ಪಾದಿಸಲಾದ ಸಾಕ್ಷ್ಯಗಳು, ಭದ್ರತಾ ಸಿಬ್ಬಂದಿಯ ಹೇಳಿಕೆಗಳು ಮತ್ತು ತನಿಖಾ ವರದಿಗಳ ಆಧಾರದಲ್ಲಿ ನ್ಯಾಯಾಲಯವು ಹಸೀನಾ ಅವರ ಪಾತ್ರವನ್ನು ಉಲ್ಲೇಖಿಸಿದೆ.

## ತಾ. ಪಂ. ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ

**ದಾವಣಗೆರೆ:** ದಾವಣಗೆರೆ ತಾಲ್ಲೂಕು ಪಂಚಾಯತ್ ಪ್ರಸಕ್ತ ಸಾಲಿನ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯನ್ನು ಮಾಯಕೊಂಡ ಶಾಸಕರಾದ ಕೆ.ಎಸ್ ಬಸವಂತಪ್ಪನವರ ಅಧ್ಯಕ್ಷತೆಯಲ್ಲಿ ನವಂಬರ್ 19 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರಾಮಭೋವಿ ತಿಳಿಸಿದ್ದಾರೆ.

## ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆ

**ದಾವಣಗೆರೆ :** ವಿಶ್ವ ವಿಕಲಚೇತನರ ದಿನಾಚರಣೆ ಪ್ರಯುಕ್ತ ನವಂಬರ್ 21 ರಂದು ಬೆಳಿಗ್ಗೆ 11 ಗಂಟೆಗೆ ಗುಂಡಿ ಸರ್ಕಲ್ ಹತ್ತಿರದ ಮೋತಿ ವೀರಪ್ಪ ಕಾಲೇಜು ಮೈದಾನದಲ್ಲಿ ವಿಕಲಚೇತನರಿಗೆ ಕ್ರೀಡಾ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ್ ಕ್ರೀಡಾಕೂಟ ಉದ್ಘಾಟಿಸುವರು. ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ ಅಧ್ಯಕ್ಷತೆ ವಹಿಸುವರು. ಮೋತಿ ವೀರಪ್ಪ ಕಾಲೇಜಿನ ಪ್ರಾಂಶುಪಾಲರಾದ ಶಿವಾನಂದ ಆರ್ ಕುಡಪಲಿ ಭಾಗವಹಿಸುವರು.

## ಒಂಟಿ ಮಹಿಳೆ ಭೀಕರ ಕೊಲೆ

**ಬೆಂಗಳೂರು:** ಪತಿಯಿಂದ ದೂರವಾಗಿ ಒಂಟಿಯಾಗಿದ್ದ ಮಹಿಳೆಯನ್ನು ಮಾರಕಾಸ್ತ್ರಗಳಿಂದ ಹೊಡೆದು ಬರ್ಬರವಾಗಿ ಕೊಲೆಮಾಡಿರುವ ದುರ್ಘಟನೆ ಬೊಮ್ಮನಹಳ್ಳಿಯ ಹೊಂಗಸಂದ್ರದಲ್ಲಿ ನಡೆದಿದೆ. ಹೊಂಗಸಂದ್ರದ ಮುನಿಸುಬ್ಬ ರೆಡ್ಡಿ ಲೇಔಟ್‌ನಲ್ಲಿರುವ ಅಪಾರ್ಟ್‌ಮೆಂಟ್‌ನ ಫ್ಲಾಟ್‌ನಲ್ಲಿ ಒಂಟಿಯಾಗಿ ವಾಸಿಸುತ್ತಿದ್ದ ಪ್ರಮೋದಾ(35) ಕೊಲೆಯಾದವರು, ಅನೈತಿಕ ಸಂಬಂಧವೇ ಈ ಭೀಕರ ಹತ್ಯೆಗೆ ಕಾರಣವಾಗಿರುವ ಶಂಕೆ ವ್ಯಕ್ತವಾಗಿದೆ.



ಉತ್ತರ ಕನ್ನಡ ಜಿಲ್ಲೆಯ ಶಿರಸಿ ಮೂಲದ ಪ್ರಮೋದಾ, ಗಾರ್ಮೆಂಟ್ಸ್‌ನಲ್ಲಿ ಉದ್ಯೋಗಿಯಾಗಿದ್ದರು, ಸ್ವಂತ ಸಹೋದರಿಯ ಪತಿ ಸುರೇಶನನ್ನೇ ಮದುವೆಯಾಗಿದ್ದ ಪ್ರಮೋದಾಗೆ ಇಬ್ಬರು 16 ವರ್ಷದ ಮಗಳು ಸೇರಿ ಇಬ್ಬರು ಮಕ್ಕಳಿದ್ದಾರೆ.

ಕಳೆದ ಕೆಲವು ಸಮಯದಿಂದ ಪತಿಯಿಂದ ದೂರಾಗಿ ಪ್ರತ್ಯೇಕವಾಗಿ ವಾಸವಿದ್ದರು. ಕಳೆದ ಮೂರು ತಿಂಗಳಿನಿಂದ ಹೊಂಗಸಂದ್ರದ ಮುನಿಸುಬ್ಬ ರೆಡ್ಡಿ ಲೇಔಟ್‌ನಲ್ಲಿರುವ ಅಪಾರ್ಟ್‌ಮೆಂಟ್‌ನ ಫ್ಲಾಟ್‌ನಲ್ಲಿ ಒಂಟಿಯಾಗಿ ವಾಸಿಸುತ್ತಿದ್ದರು. ಆಕೆಯನ್ನು ಮಾರಕಾಸ್ತ್ರಗಳಿಂದ ಹೊಡೆದು ಕೊಲೆ ಮಾಡಲಾಗಿದ್ದು, ಆರೋಪಿಗಳು ಸ್ಥಳದಿಂದ ಪರಾ–ರಿಯಾಗಿದ್ದಾರೆ. ಘಟನಾ ಸ್ಥಳಕ್ಕೆ ಬೊಮ್ಮನಹಳ್ಳಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಸೆಂಟ್ ಜಾನ್ಸ್ ಆಸ್ಪತ್ರೆಗೆ ರವಾನಿಸಿ ಪ್ರಕರಣವನ್ನು ದಾಖಲಿಸಿ ಹಂತಕನ ಪತ್ತೆಗೆ ಕಾರ್ಯಾಚರಣೆ ಕೈಗೊಂಡಿದ್ದಾರೆ.

### ಸೌದಿ ಅರೇಬಿಯಾದಲ್ಲಿ ಉಮ್ರಾ ಯಾತ್ರೆಗೆ ತೆರಳಿದ್ದ ಬಸ್ ಅಪಘಾತ

# ದುರಂತದಲ್ಲಿ ಭಾರತೀಯ ಮೂಲದ 42 ಯಾತ್ರಾರ್ಥಿಗಳು ದುರ್ಮರಣ

**ರಿಯಾದ್:** ಸೌದಿ ಅರೇಬಿಯಾದಲ್ಲಿ ಉಮ್ರಾ ಯಾತ್ರಾರ್ಥಿಗಳನ್ನು ಹೊತ್ತುಯ್ಯುತ್ತಿದ್ದ ಬಸ್ ಸೋಮವಾರ ಮುಂಜಾನೆ ಮದೀನಾ ಸಮೀಪದ ಮುಹ್ರಾಸ್/ಮುಫ್ರಿಹಾತ್ ಎಂಬಲ್ಲಿ ಅಪಘಾತಕ್ಕಿಡಾಗಿದೆ. ಇದರಲ್ಲಿ ಭಾರತೀಯ ಮೂಲದ ಹೈದರಾಬಾದ್‌ನಿಂದ ಹೊರಟಿದ್ದ 42 ಮಂದಿ ಮೃತಪಟ್ಟಿರಬಹುದು ಎಂದು ಶಂಕಿಸಲಾಗಿದೆ. ಇನ್ನು, ಮೃತರ ಪೈಕಿ ಹೆಚ್ಚಿನವರು ಹೈದರಾಬಾದ್‌ನ ಮಹಿಳೆಯರು ಮತ್ತು ಮಕ್ಕಳಾಗಿರಬಹುದು ಎಂದು ಪ್ರಾಥಮಿಕ ವರದಿಗಳು ತಿಳಿಸಿವೆ.



ಮೆಕ್ಕಾದಿಂದ ಮದೀನಾಗೆ ಉಮ್ರಾ ಯಾತ್ರಾರ್ಥಿಗಳನ್ನು ಕರೆದುಕೊಂಡು ಹೋಗುತ್ತಿದ್ದ ಬಸ್, ಡೀಸೆಲ್ ಟ್ಯಾಂಕರ್ ಒಂದಕ್ಕೆ ಡಿಕ್ಕಿ ಹೊಡೆದು ಬೆಂಕಿಗೆ ಆಹುತಿಯಾಗಿದೆ. ಈ ದುರಂತವು ಸೋಮವಾರ ಮುಂಜಾನೆ (ಭಾರತೀಯ ಕಾಲಮಾನ ಸುಮಾರು 1:30ಕ್ಕೆ) ಸಂಭವಿಸಿದೆ. ಅಪಘಾತ ಸಂಭವಿಸಿದಾಗ ಹೆಚ್ಚಿನ ಪ್ರಯಾಣಿಕರು ನಿದ್ರೆಯಲ್ಲಿದ್ದ ಕಾರಣ, ಬೆಂಕಿ ಹೊತ್ತಿಕೊಂಡಾಗ ತಪ್ಪಿಸಿಕೊಳ್ಳಲು ಅವರಿಗೆ ಹೆಚ್ಚು ಸಮಯ ಸಿಗಲಿಲ್ಲ ಎಂದು ತಿಳಿದು ಬಂದಿದೆ.

ಘಟನಾ ಸ್ಥಳಕ್ಕೆ ಸೌದಿ ನಾಗರಿಕ ರಕ್ಷಣಾ ದಳ ಮತ್ತು ಪೊಲೀಸರು ತಕ್ಷಣ ಧಾವಿಸಿದ್ದಾರೆ. ಭಾರತೀಯ ಅಧಿಕಾರಿಗಳು ಮತ್ತು ಉಮ್ರಾ ಏಜೆನ್ಸಿ ಪ್ರತಿನಿಧಿಗಳು ಕೂಡ ಸ್ಥಳಕ್ಕೆ ತಲುಪಿದ್ದು, ಮೃತದೇಹಗಳ ಗುರುತಿಸುವಿಕೆ ಮತ್ತು ಮಾಹಿತಿ ಸಂಗ್ರಹಣೆಯಲ್ಲಿ ಸಹಾಯ ಮಾಡುತ್ತಿದ್ದಾರೆ. ಬಸ್ ಸಂಪೂರ್ಣವಾಗಿ ಸುಟ್ಟು ಕರಕಲಾಗಿರುವುದರಿಂದ ಮೃತದೇಹಗಳನ್ನು ಗುರುತಿಸುವುದು ಅತ್ಯಂತ ಕಷ್ಟಕರವಾಗಿದೆ ಎಂದು ರಕ್ಷಣಾ ತಂಡಗಳು ತಿಳಿಸಿವೆ. ಈ ದುರಂತದಲ್ಲಿ ಒಬ್ಬ ವ್ಯಕ್ತಿ ಪಾರಾಗಿದ್ದಾರೆ ಎಂದು ಹೇಳಲಾಗುತ್ತಿದೆ, ಆದರೆ ಅವರ ಸ್ಥಿತಿ ಬಗ್ಗೆ ಮಾಹಿತಿ ಲಭ್ಯವಾಗಿಲ್ಲ. ಇತ್ತ ಹೈದರಾಬಾದ್‌ನಲ್ಲಿ, ಉಮ್ರಾ ಯಾತ್ರಾರ್ಥಿಗಳ ಸಂಬಂಧಿಕರು ಆತಂಕಕ್ಕೊಳಗಾಗಿದ್ದು, ತಮ್ಮ ಕುಟುಂಬದವರನ್ನು ಯಾತ್ರೆಗೆ ಕರೆದು–ಕೊಂಡು ಹೋಗಿದ್ದ ಪ್ರವಾಸ ಆಯೋಜ–ಕರು ಮತ್ತು ಅಧಿಕಾರಿಗಳನ್ನು ಸಂಪರ್ಕಿಸುತ್ತಿದ್ದಾರೆ ಎಂಬ ಮಾಹಿತಿ ತಿಳಿದು ಬಂದಿದೆ. ಈ ದುರಂತವು ಯಾತ್ರಾರ್ಥಿಗಳ ಕುಟುಂಬಗಳಿಗೆ ತೀವ್ರ ಆಘಾತವನ್ನು ನೀಡಿದೆ.

## ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಎಐಕೆಎಸ್ ಪ್ರತಿಭಟನೆ

**ದಾವಣಗೆರೆ.17:** ರಾಜ್ಯದ ಬಹುತೇಕ ಭಾಗದ ರೈತರ ಸಮಸ್ಯೆ ಹಾಗೂ ರೈತರ ವಿವಿಧ ತುರ್ತು ಬೇಡಿಕೆಗಳನ್ನು ಈಡೇರಿಸಲು ರಾಜ್ಯ ಸರ್ಕಾರದ ಗಮನ ಸೆಳೆಯಲು ಅಖಿಲ ಭಾರತ ಕಿಸಾನ್ ಸಭಾದ ದಾವಣಗೆರೆ ಜಿಲ್ಲಾ ಸಮಿತಿಯ ಪದಾಧಿಕಾರಿಗಳು ನಗರದ ಜಯದೇವ ವೃತ್ತದಲ್ಲಿ ಪ್ರತಿಭಟನೆ ನಡೆಸಿ, ಉಪ ವಿಭಾಗಾಧಿಕಾರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಹೆಚ್.ಜಿ.ಉಮೇಶ್ ಅವರಗೆರೆ, ರಾಜ್ಯದ ಹಲವೆಡೆ ಅಕಾಲಿಕ ಮಳೆಯ ಅತಿವೃಷ್ಟಿಯಿಂದ ಬಹುತೇಕ ವಾಣಿಜ್ಯ ಹಾಗೂ ಆಹಾರ ಬೆಳೆಗಳು ನಾಶವಾಗಿ ರೈತರು ನಷ್ಟ ಅನುಭವಿಸುತ್ತಿದ್ದು, ಇಂತಹ ಹಾನಿಗೊಳಗಾದ ಎಲ್ಲಾ ರೈತರ ಬೆಳೆಗಳನ್ನು ಸರ್ಕಾರ ಸಮೀಕ್ಷೆ ನಡೆಸಿ, ರೈತರಿಗೆ ಆದ ನಿಜವಾದ ನಷ್ಟಕ್ಕೆ ಪರಿಹಾರ ನೀಡಲು ರಾಜ್ಯ ಸರ್ಕಾರ ವಿಳಂಬ ಮತ್ತು ನಿರ್ಲಕ್ಷ್ಯವನ್ನು ಕೈ ಬಿಟ್ಟು, ಕೂಡಲೇ ನಷ್ಟಕ್ಕೊಳಗಾದ ಬೆಳೆಯ ಮತ್ತು ಪರಿಹಾರ ಮೊತ್ತದ ವಿವರಗಳುಳ್ಳ ಪಟ್ಟಿಯನ್ನು ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಪ್ರಕಟಿಸಿ, ಪರಿಹಾರದ ಮೊತ್ತವನ್ನು ಕೂಡಲೇ ಪಾವತಿಸಲು ಕ್ರಮ ಕೈಗೊಳ್ಳಬೇಕು ಎಂದರು.

ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ರೈತರ ಬೆಳೆಗಳಿಗೆ ಸಾಮಾನ್ಯ ಬೆಂಬಲ ಬೆಲೆ ಪ್ರಕಟಿಸಿ ಕೆಲವು ಬೆಳೆಗಳ ಖರೀದಿಗೆ ದಿನಾಂಕ ನಿಗದಿ ಮಾಡಿ ರೈತರ ನೋಂದಾವಣಿ ಆರಂಭಿಸಿದ್ದರೂ ಖರೀದಿ ಕೇಂದ್ರಗಳ ಪಟ್ಟಿ ಬಿಡುಗಡೆ ಮಾಡಿದ್ದರು ಸಹ ಇದುವರೆಗೂ ಖರೀದಿ ಪ್ರಕ್ರಿಯೆ ಆರಂಭವಾಗಿರುವುದಿಲ್ಲ ಎಂದು ದೂರಿದರು.

ಆದ್ದರಿಂದ ಈಗಾಗಲೇ ಅಳಿದುಳಿದ ಬೆಳೆ ಕಟಾವು ಮುಗಿದಿದ್ದು, ರೈತರು ದಾಸ್ತಾನು ಮಾಡಿಟ್ಟುಕೊಳ್ಳಲು ಶಕ್ತಿ ಹಾಗೂ ಅನುಕೂಲವಿಲ್ಲದ ಕಾರಣ ಖಾಸಗಿ ವರ್ತಕರು ಮತ್ತು ದಲ್ಲಾಳಿಗಳ ಮಾರುವ ಒತ್ತಡಕ್ಕೆ ಸಿಲುಕಿದ್ದಾ–ರೆ. ಮಾತ್ರವಲ್ಲ ಇನ್ನೂ ಕಟಾವು ಮಾಡಬೇಕಿರುವ ಬೆಳೆಗಳಿಗೆ ಖರೀದಿ ಕೇಂದ್ರಗಳಿಲ್ಲದೆ ಖಾಸಗಿ ವ್ಯಾಪಾರಿಗಳನ್ನ ಅವಲಂಬಿಸುವ ದುಸ್ಥಿತಿಯಲ್ಲಿದ್ದಾರೆ. ಆದ್ದರಿಂದ ಸರ್ಕಾರಗಳು ಕೂಡಲೇ ಇನ್ನೊಂದು ವಾರದ ಒಳಗೆ ಘೋಷಿಸಿರುವ ಬೆಂಬಲ ಬೆಲೆಯಲ್ಲಿ ರೈತರಿಂದ ಕೊಂಡುಕೊಳ್ಳಲು ಖರೀದಿ ಕೇಂದ್ರಗಳನ್ನ ಕಾರ್ಯಾರಂಭ ಮಾಡಲು ಆದೇಶ ಮತ್ತು ಸೂಚನೆ ನೀಡಬೇಕು ಎಂದು ಒತ್ತಾಯಿಸಿದರು.

ಸರ್ಕಾರಿ ಭೂಮಿಯಲ್ಲಿ ಸಾಗುವಳಿ ಮಾಡಿರುವ ಭೂರಹಿತ ರೈತರ ಭೂಮಿಯ ಹಕ್ಕುಪತ್ರ ನೀಡುವ ಅಕ್ರಮ ಸಕ್ರಮ ಸಮಿತಿಗಳಲ್ಲಿ ರಾಜ್ಯಾದ್ಯಂತ ಲಕ್ಷಾಂತರ ಅರ್ಜಿಗಳು ಇನ್ನೂ ವಿಲೇವಾರಿಯಾಗದೆ ಸಂಬಂಧಿತ ಸಮಿತಿಗಳನ್ನು ನೇಮಿಸದೆ ಹತ್ತಾರು ವರ್ಷಗಳಿಂದ ಸರ್ಕಾರಗಳು ನಿರ್ಲಕ್ಷ್ಯ ತೋರಿಸಿದೆ. ರೈತರಿಗೆ ಭೂ ಒಡೆತನ ತ್ರಿಶಂಕು ಸ್ಥಿತಿಯಂತಾಗಿದೆ. ಆದ್ದ–ರಿಂದ ರಾಜ್ಯ ಸರ್ಕಾರ ಈ ದಿವ್ಯ ನಿರ್ಲಕ್ಷ್ಯವನ್ನು ಕೈ ಬಿಟ್ಟು ಬಗರ್ ಹುಕುಂ ಭೂಮಿಗೆ ಹಕ್ಕುಪತ್ರ ನೀಡುವ ಎಲ್ಲಾ ಪ್ರಕ್ರಿಯೆಗಳನ್ನು ಮೊದಲ ಆದ್ಯತೆ–ಯಾಗಿ ಪೂರ್ಣಗೊಳಿಸಬೇಕು ಸೇರಿದಂತೆ ಇತರೆ ಬೇಡಿಕೆಗೆ ಈಡೇರಿಕೆಗೆ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಆವರಗೆರೆ ಚಂದ್ರು, ಸತೀಶ್ ಅರವಿಂದ್, ಐರಣಿ ಚಂದ್ರು, ಸಿದ್ದೇಶ್ ಹಾಲೇಕಲ್ಲು, ಕೆ.ಬಾನಪ್ಪ, ಟಿ.ಹೆಚ್.ರುದ್ರೇಶ್ ಲೋಕಿಕೆರೆ, ಮಾದಿಹಳ್ಳಿ ಮಂಜುನಾಥ್, ಸುರೇಶ್ ಯರಗುಂಟೆ, ವಿ.ಲಕ್ಷ್ಮಣ್, ಎ.ಮರಿಯಪ್ಪ, ಕೆ.ಎಂ.ನಾಗರಾಜ್, ಜಿ.ಬಿ.ವಸಂತ ಕುಮಾರ್, ಶಿವಕುಮಾರ್ ಡಿ.ಶೆಟ್ಟರ್, ರಮೇಶ್ ದಾಸರ್, ಎಸ್. ಜಯಪ್ಪ, ಯಲ್ಲಪ್ಪ, ಪವಿತ್ರಾ, ಚಂದ್ರಮ್ಮ, ಕರಿಬಸಪ್ಪ ಇತರರು ಇದ್ದರು.

# ಪ್ರತಿಯೊಬ್ಬರೂ ರಕ್ತ ಹೀನತೆಯಾಗದಂತೆ ಎಚ್ಚರವಹಿಸಿ : ಶಾಸಕ ಡಿ.ಜಿ.ಶಾಂತನಗೌಡ

**ಹೊನ್ನಾಳಿ :** ಮನುಷ್ಯರಲ್ಲಿ ವಿಶೇಷವಾಗಿ ಮಕ್ಕಳಲ್ಲಿ ಅನೀಮಿಯಾ (ರಕ್ತಹೀನತೆ) ಬಹಳವಾಗಿ ಕಂಡುಬರುತ್ತಿದ್ದು ಇದು ವಿವಿಧ ರೀತಿಯ ಕಾಯಿಲೆಗಳಿಗೆ ದಾರಿಮಾಡಿಕೊಡುತ್ತದೆ ಈ ಕಾರಣ ರಕ್ತ ಹೀನತೆಯಾಗದಂತೆ ಎಚ್ಚರವಹಿಸಬೇಕಾಗಿದೆಎಂದು ಶಾಸಕ ಡಿ.ಜಿ.ಶಾಂತನಗೌಡ ಹೇಳಿದರು.




ಪಟ್ಟಣದ ಸಮೀಪದ ಸಾಯಿ ಗುರುಕುಲ ವಸತಿಯುತ ಶಾಲೆಯಲ್ಲಿ ಸೋಮವಾರ ಸ್ಪೂರ್ತಿ ಸಂಸ್ಥೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆವತಿಯಿಂದ ಹಮ್ಮಿಕೊಂಡಿದ್ದಅನೀಮಿಯಾ (ರಕ್ತಹೀನತೆ )ತಡೆಗಟ್ಟುವಕುರಿತುಜಾಗೃತಿ ಹಾಗೂ ರಕ್ತತಪಾಸಣ ಶಿಬಿರವನ್ನು ಗಿಡಕ್ಕೆ ನೀರೆರೆಯುವ ಮೂಲಕ ಚಾಲನೆಗೊಳಿಸಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಭಾರತದಲ್ಲಿ ಶೇಕಡ 50ರಷ್ಟು ಜನರಕ್ತಹೀನತೆಯಿಂದ ಬಳಲುತ್ತಿದ್ದು, ಮಹಿಳೆಯರು ಮತ್ತು ಮಕ್ಕಳಲ್ಲಿ ರಕ್ತಹೀನತೆ ಸಾಮಾನ್ಯವಾಗಿ ಹೆಚ್ಚು ಕಂಡುಬರುತ್ತದೆರಕ್ತ ಹೀನತೆಯನ್ನು ನಿಯಂತ್ರಿಸಲು ಪೌಷ್ಟಕಆಹಾರದಜೊತೆಯಲ್ಲಿ ನಿತ್ಯವೂ ವ್ಯಾಯಾಮಗಳನ್ನು ಮಾಡಬೇಕು ಮತ್ತು ಆಗಾಗ ವೈದ್ಯರ ಬಳಿ ರಕ್ತ ಪರೀಕ್ಷೆ ಮಾಡಿಸಿಕೊಂಡು ರಕ್ತದಲ್ಲಿ ಹಿಮೋಗ್ಲೋಬಿನ್ ಪ್ರಮಾಣವನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.

ಸ್ಪೂರ್ತಿ ಸಂಸ್ಥೆಯಮುಖ್ಯಕಾರ್ಯನಿರ್ವಹಣಾಧಿಕಾರಿ ಕೆ.ಬಿ.ರೂಪ್ಲನಾಯ್ಕ ಅವರು ಪ್ರಾಸ್ತವಿಕವಾಗಿ ಮಾತನಾಡಿ, ರಾಜ್ಯದಲ್ಲಿ ಸುಮಾರು 3 ಲಕ್ಷಕ್ಕೂ ಅಧಿಕ ಜನರು ರಕ್ತಹೀನತೆಯಿಂದ ಬಳಲುತ್ತಿದ್ದಾರೆ, ಅವಳಿ ತಾಲೂಕಿನಲ್ಲಿ 5283 ಮಕ್ಕಳ ರಕ್ತ ಪರೀಕ್ಷೆ ನೆಡೆಸಲಾಗಿದೆ ಎಂದ ಅವರು ಶ್ರೀಮದ್ ರಾಜಚಂದ್ರಆಸ್ಪತ್ರೆ ಮತ್ತು ಸಂಶೋಧನಾಕೇಂದ್ರಗುಜರಾತ್, ಜಿಲ್ಲಾ ಪಂಚಾಯಿತ್‌ಆರೋಗ್ಯ ಮತ್ತುಕುಟುಂಬ ಕಲ್ಯಾಣ ಇಲಾಖೆ ಗ್ರಾಮೀಣಅಭಿವೃದ್ಧಿ ಸಂಸ್ಥೆ, ಸ್ಪಂದನ ಸ್ವಯಂ ಸೇವಾಸಂಸ್ಥೆ ವಿಜಯಪುರ, ಹಾಗೂ ಭಾರತೀಯ ಸುರಾಜ್ಯ ಸಂಸ್ಥೆ, ಕನ್ನೂರ ಇವುಗಳ ಸಂಯುಕ್ತಾಶ್ರಂ ಮದಲ್ಲಿರಾಜ್ಯದಲ್ಲಿಅನೀಮಿಯಾತಡೆಗಟ್ಟುವ ಬಗ್ಗೆ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಎಂದು ಮಾಹಿತಿ ನೀಡಿದರು.

# ಹಿರಿಯ ನಾಗರೀಕರನ್ನು ಅಸಡ್ಡೆಯಿಂದ ನೋಡದೆ ಗೌರವದಿಂದ ಕಾಣಲು ಹಿರಿಯ ಸಿವಿಲ್ ನ್ಯಾಯಾಧೀಶ ಮಹಾವೀರ ಮ.ಕರೆಣ್ಣನವರ್ ಸಲಹೆ

**ದಾವಣಗೆರೆ:** ಅರವತ್ತು ವರ್ಷ ಮೇಲ್ಪಟ್ಟವರು ಹಿರಿಯ ನಾಗರಿಕರಾಗಿದ್ದು, ತಮ್ಮ ಸ್ವಂತ ಗಳಿಕೆ ಅಥವಾ ತಮ್ಮ ಒಡೆತನದ ಆಸ್ತಿಯಿಂದ ತಮ್ಮನ್ನು ಪೋಷಿಸಿಕೊಳ್ಳಲು ಸಾಧ್ಯವಾಗದ ಪಾಲಕರು ಹಿರಿಯ ನಾಗರಿಕರ ಪಾಲನೆ–ಪೋಷಣೆ ಮತ್ತು ಸಂರಕ್ಷಣಾ ಕಾಯ್ದೆಯಡಿ ಪರಿಹಾರ ಪಡೆಯಲು ಅರ್ಹರಾಗಿರುತ್ತಾರೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ್ ತಿಳಿಸಿದರು.

ಸೋಮವಾರ (ನ.17) ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಹಾಗೂ ಹಿರಿಯ ನಾಗರಿಕರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಪಾಲಕರ ಪೋಷಕರ ಸಂರಕ್ಷಣಾ ಕಾಯ್ದೆ–2007ರ ಅರಿವು ಕಾರ್ಯಕ್ರಮದ ಉದ್ಘಾಟಿಸಿ ಅವರು ಮಾತನಾಡಿದರು.




ಕುಟುಂಬದಲ್ಲಿ ಹಿರಿಯ ನಾಗರಿಕರನ್ನು ಅಸಡ್ಡೆಯಿಂದ ನೋಡದೆ ಗೌರವ, ಆದರಗಳಿಂದ ಕಾಣಬೇಕು. ತಂದೆ–ತಾಯಿ ನಮ್ಮ ದೇವರಿದ್ದಂತೆ. ಯಾರೇ ಆಗಲಿ ತಮ್ಮ ಹೆತ್ತವರನ್ನು ದೇವರಂತೆ ಕಾಣಬೇಕು. ಮಕ್ಕಳು ಅಥವಾ ಮೊಮ್ಮಕ್ಕಳು ತಮ್ಮ ಪಾಲಕರನ್ನು ಪೋಷಿಸುವ ಜವಾಬ್ದಾರಿ ಹೊಂದಿರುತ್ತಾರೆ. ಅಥವಾ ಅವರ ರಕ್ತ ಸಂಬಂಧಿಯೂ ಸಹ ಹಿರಿಯ ನಾಗರಿಕರನ್ನು ನೋಡಿಕೊಳ್ಳಲು ಬದ್ಧರಾಗಿರುತ್ತಾ–ರೆ. ಆದರೆ ಇಂತಹ ಹೆತ್ತವರು ಅಥವಾ ಹಿರಿಯ ನಾಗರಿಕರು ಯಾರ ರಕ್ಷಣೆಗೂ ಒಳಪಡದಿದ್ದರೆ, ಈ ಕಾಯ್ದೆಯಡಿಯಲ್ಲಿ ರಚಿಸಲಾದ ನ್ಯಾಯಮಂಡಳಿಯ ಸಹಾಯ ಪಡೆದು, ಅರ್ಜಿ ಸಲ್ಲಿಸಿ ಜೀವನಾಂಶದ ಪರಿಹಾರ ಪಡೆಯಬಹುದು ಎಂದರು.

ಹಿರಿಯ ನಾಗರಿಕರ ಪಾಲನೆ, ಪೋಷಣೆ ಮತ್ತು ಸಂರಕ್ಷಣಾ ಕಾಯ್ದೆಯಡಿ ಲಭ್ಯವಿರುವ ಸವಲತ್ತುಗಳನ್ನು ಅರ್ಹ ಫಲಾನುಭವಿಗಳು ಪಡೆಯಬಹುದಾಗಿದೆ. ಹಿರಿಯ ನಾಗರಿಕರು ಕುಟುಂಬದಲ್ಲಿ ತಮ್ಮ ಮಕ್ಕಳಿಗೆ ಭಾಗಾಂಶ, ದಾನಪತ್ರ, ವಿಲ್ ಇತರ ದಾಖಲೆಗಳನ್ನು ವರ್ಗಾವಣೆ ಮಾಡಿ ಬಳಿಕ ಅಂತಹ ಮಕ್ಕಳಿಂದ ಸರಿಯಾದ ಪೋಷಣೆ, ರಕ್ಷಣೆ ಸಿಗದೆ ಕಿರುಕುಳಕ್ಕೆ ಒಳಗಾದಾಗ ತಮ್ಮ ವ್ಯಾಪ್ತಿಯಲ್ಲಿ ಇರುವ ಉಪ–ವಿಭಾಗಾಧಿಕಾರಿಗಳನ್ನು ಭೇಟಿ ಮಾಡಿ ಸಮಸ್ಯೆ ತಿಳಿಸಿ ನಂತರ ಸೂಕ್ತ ದಾಖಲೆಗಳನ್ನು ರದ್ದು ಮಾಡುವ ಅಧಿಕಾರ ಆ ಅಧಿಕಾರಿಗಳಿಗಿದೆ. ಸಂಬಂಧಪಟ್ಟ ಆಸ್ತಿಯು ಮತ್ತೆ ವಾರಸುದಾರರ ಹೆಸರಿಗೆ ಲಭಿಸುತ್ತದೆ. ಪ್ರತಿಯೊಬ್ಬ ಹಿರಿಯ ನಾಗರಿಕರು ಆತ್ಮಸ್ಥೈರ್ಯ ಕಳೆದುಕೊಳ್ಳದೆ ಧೈರ್ಯವಾಗಿ ಜೀವನ ನಡೆಸುವಂತೆ ಮನವಿ ಮಾಡಿದ ಅವರು, ನಿಮಗೆ ಏನೇ ಸಮಸ್ಯೆಯಿದ್ದರೂ ಸಂಬಂಧಿಸಿದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಥವಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಭೇಟಿ ಮಾಡುವಂತೆ ಸಲಹೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಉಪನಿರ್ದೇಶಕ ರಾಜಾನಾಯ್ಕ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಕೆ.ಕೆ ಪ್ರಕಾಶ, ಕಾರ್ಮಿಕ ಅಧಿಕಾರಿ ಪ್ರಸನ್ನ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತ, ಡಿಡಿಪಿಐ ಕೊಟ್ರೇಶ್ ಉಪಸ್ಥಿತರಿದ್ದರು.

## ರಾಶಿ ಭವಿಷ್ಯ

### ಮೇಷ ರಾಶಿ

ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ. ನೀವು ನಿಮ್ಮ ತಂತ್ರಗಳನ್ನು ಅಳವಡಿಸಿದಲ್ಲಿ ಇಂದು ಸ್ವಲ್ಪ ಹೆಚ್ಚುವರಿ ಹಣ ಸಂಪಾದಿಸುತ್ತೀರಿ. ನಿಮ್ಮ ಅತಿಥಿಗಳ ಜೊತ ಒರಟಾಗಿ ನಡೆದುಕೊಳ್ಳಬೇಡಿ.

### ವೃಷಭ ರಾಶಿ

ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವೈಯಕ್ತಿಕ ಸಂಬಂಧಗಳನ್ನು ದುರ್ಬಳಕೆ ಮಾಡುವುದು ನಿಮ್ಮ ಪತ್ನಿಗೆ ಕೋಪ ಬರಿಸುತ್ತದೆ. ನೀವು ವಿವಾಹಿತರಾಗಿದ್ದರೆ ನಿಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಿ ಏಕೆಂದರೆ ನೀವು ಅದನ್ನು ಮಾಡದಿದ್ದರೆ ಅವರ ಆರೋಗ್ಯವು ಹದಗೆಡಬಹುದು ಮತ್ತು ಅವರ ಆರೋಗ್ಯದ ಮೇಲೆ ಬಹಳಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ.

### ಮಿಥುನ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ನಿಮ್ಮ ಮನೆಯ ಪರಿಸರದಲ್ಲಿ ಒಳ್ಳೆಯ ಬದಲಾವಣೆಗಳನ್ನು ಮಾಡುತ್ತೀರಿ. ಮೊಂಬತ್ತಿ ಬೆಳಕಿನಲ್ಲಿ ಪ್ರೀತಿಪಾತ್ರರ ಜೊತೆ ಆಹಾರ ಹಂಚಿಕೊಳ್ಳುವುದು.

### ಕರ್ಕ ರಾಶಿ

ನೀವು ಇದು ಒಳ್ಳೆಯ ಆರೋಗ್ಯ ಹೊಂದಿರುವುದರಿಂದ ಅದು ನಿಮಗೆ ಯಶಸ್ಸು ನೀಡುವ ಸಾಧ್ಯತೆಯಿದೆ. ಆದರೆ ನಿಮ್ಮ ಶಕ್ತಿಯನ್ನು ನಾಶಪಡಿಸುವ ಎಲ್ಲವನ್ನೂ ನೀವಿಂದು ತಪ್ಪಿಸಬೇಕು.
ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ದೂರದ ಸಂಬಂಧಿಗಳಿಂದ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷದ ಕ್ಷಣಗಳನ್ನು ತರುವುದು.

### ಸಿಂಹ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಹಣದ ಲಾಭ ನಿಮ್ಮ ನಿರೀಕ್ಷೆಯಂತಿರುವುದಿಲ್ಲ.
ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ಇಂದು ನೀವು ಕುರುಡುಪ್ರೀತಿಯನ್ನು ಪಡೆಯಲು ಸಾಧ್ಯವಾಗುತ್ತದೆ. ಯಾರಾದರೂ ಇಂದು ಕೆಲಸದಲ್ಲಿ ನಿಮಗೆ ಸಂತೋಷವಾಗುವ ಏನನ್ನಾದರೂ ಮಾಡಬಹುದು. ಇಂದು ನೀವು ಮನೆಯ ಕಿರಿಯ ಸದಸ್ಯರೊಂದಿಗೆ ಉದ್ಯಾನವನ ಅಥವಾ ಶಾಪಿಂಗ್ ಮಾಲ್‌ಗೆ ಹೋಗಬಹುದು.

### ಕನ್ಯಾ ರಾಶಿ

ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೊರತೆಗೆ ಕಾರಣವಾಗುತ್ತದೆ. ನಿಮ್ಮ ಕುಟುಂಬದ ಸದಸ್ಯರು ನಿಮ್ಮ ಪ್ರಯತ್ನ ಮತ್ತು ಸಮರ್ಪಣೆಯನ್ನು ಪ್ರಶಂಸಿಸುತ್ತಾರೆ ನಿಮ್ಮ ಪ್ರೇಮಿಯೆಡೆಗೆ ಸೇಡು ಹೊಂದುವುದು ಯಾವುದೇ ಫಲ ತರುವುದಿಲ್ಲ ಅದರ ಬದಲಿಗೆ ನೀವು ಶಾಂತರಾಗಿರಬೇಕು ಮತ್ತು ನಿಮ್ಮ ಪ್ರೇಮಿಗೆ ನಿಮ್ಮ ನಿಜವಾದ ಪ್ರೀತಿಯನ್ನು ವಿವರಿಸಬೇಕು.

### ತುಲಾ ರಾಶಿ

ಮಾತನಾಡುವ ಮುನ್ನ ಯೋಚಿಸಿ. ತಿಳಿಯದೆ ನಿಮ್ಮ ಅಭಿಪ್ರಾಯಗಳು ಬೇರೊಬ್ಬರ ಭಾವನೆಗಳಿಗೆ ಧಕ್ಕೆಯುಂಟು ಮಾಡಬಹುದು. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ಮತ್ತು ಇಂದು ತುಂಬಾ ಖರ್ಚು ಮಾಡಬೇಡಿ. ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಇಂದು ನಿಮ್ಮ ಪ್ರೀತಿಪಾತ್ರರು ತನ್ನ ಮನಸ್ಥಿತಿಯನ್ನು ನಿಮ್ಮ ಮುಂದೆ ಇಡಲು ಸಾಧ್ಯವಾಗುವುದಿಲ್ಲ ಇದರಿಂದಾಗಿ ನೀವು ಅಸಮಾಧಾನಗೊಳ್ಳಬಹುದು.

### ವೃಶ್ಚಿಕ ರಾಶಿ

ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ನಿಮ್ಮ ತಾಯಿಯ ಬದಿಯಿಂದ ಇಂದು ಹಣಕಾಸಿನ ಲಾಭವನ್ನು ಪಡೆಯುವ ಪೂರ್ಣ ಸಾಧ್ಯತೆ ಇದೆ.ನಿಮ್ಮ ಮಾಮ ಅಥವಾ ತಾತ ನಿಮಗೆ ಆರ್ಥಿಕ ಬೆಂಬಲ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಮನ್ಮಥನು ನಿಮ್ಮ ಜೀವನದಲ್ಲಿ ಪ್ರೀತಿಯ ಮಳೆ ಸುರಿಸುತ್ತ ನಿಮ್ಮೆಡೆಗೆ ನುಗ್ಗುತ್ತಿದ್ದಾನೆ.

### ಧನು ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು.

### ಮಕರ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ.
ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಸ್ನೇಹಿರೊಂದಿಗಿನ ಸಂಜೆ ಹೆಚ್ಚು ಮನರಂಜನೀಯವಾಗಿರುತ್ತದೆ ಮತ್ತು ಸಂತೋಷದಿಂದ ತುಂಬಿರುತ್ತದೆ. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ. ಹೌದು,ನೀವು ಅದೃಷ್ಟವಂತರು.


### ಕುಂಭ ರಾಶಿ

ನೀವು ಧೀರ್ಘಕಾಲೀನ ಅನಾರೋಗ್ಯದಿಂದ ಬಳಲಬಹುದು. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ಮಕ್ಕಳು ನಿಮ್ಮ ನಿರೀಕ್ಷೆಗಳನ್ನು ಪೂರೈಸಲು ವಿಫಲವಾಗಿ ನಿಮಗೆ ನಿರಾಶೆಯುಂಟುಮಾಡಬಹುದು. ನಿಮ್ಮ ಕನಸು ನನಸಾಗಿಸಲು ನೀವು ಅವರನ್ನು ಪ್ರೋತ್ಸಾಹಿಸಬೇಕು. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ.

### ಮೀನ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಇಂದು ಷೇರು ಮಾರುಕಟ್ಟೆಯಲ್ಲಿ ಹಣವನ್ನು ಹೂಡಿಕೆ ಮಾಡುವವರು ತಮ್ಮ ಹಣವನ್ನು ಕಳೆದುಕೊಳ್ಳಬಹುದು.
ಸಮಯಕ್ಕೆ ನೀವು ಜಾಗರೂಕರಾಗಿದ್ದರೆ ಅದು ನಿಮಗೆ ಉತ್ತಮವಾಗಿರುತ್ತದೆ. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ. ನಿಮ್ಮ ಕಣ್ಣೀರನ್ನು ಒಬ್ಬ ವಿಶೇಷ ಸ್ನೇಹಿತ ಒರೆಸಬಹುದು. ಕೆಲವರಿಗೆ ವ್ಯಾಪಾರ ಮತ್ತು ಶಿಕ್ಷಣ ಪ್ರಯೋಜನ ತರುತ್ತದೆ. ಸಂತಸದ ಪ್ರಯಾಣ ತೃಪ್ತಿಕರವಾಗಿರುತ್ತದೆ

# ಮಕ್ಕಳನ್ನು ಅಂಕ ಗಳಿಕೆಗೆ ಸೀಮಿತಗೊಳಿಸುವುದು ಸಲ್ಲದು



**ಚಿಕ್ಕಮಗಳೂರು:** ಮಕ್ಕಳನ್ನು ಅಂಕ ಗಳಿಕೆಗೆ ಸೀಮಿತಗೊಳಿಸದೆ ಅವರಲ್ಲಿ ಪರಿಸರದ ಕಾಳಜಿ, ನೈಜತೆ, ಪ್ರಾಯೋಗಿಕತೆ ಹಾಗೂ ವಿಶ್ಲೇಷಣಾತ್ಮಕತೆಯ ಚಿಂತನೆಗಳನ್ನು ಬೆಳೆಸುವಲ್ಲಿ ಪೋಷಕರು ಪಾತ್ರ ವಹಿಸಬೇಕು ಎಂದು ಸಾಹಿತಿ ಡಾ.ಬೆಳವಾಡಿ ಮಂಜುನಾಥ್ ಸಲಹೆ ನೀಡಿದರು.

ನಗರದ ಸಂಜೀವಿನಿ ವಿದ್ಯಾಸಂಸ್ಥೆಯಲ್ಲಿ ಶುಕ್ರವಾರ ಸಂಜೆ ನಡೆದ ಮಕ್ಕಳ ದಿನಾಚರಣೆ ಹಾಗೂ ಪೋಷಕರ ದಿನಾಚರಣೆಯಲ್ಲಿ ಅವರು ಮಾತನಾಡಿದರು. ಮಗುವನ್ನು ಇನ್ನೊಂದು ಮಗುವಿಗೆ ಹೋಲಿಸಿ ನೋಡುವುದು ಕೂಡ ಸಮಂಜಸವಲ್ಲ.

ಶಾಲೆಗೆ ಮಕ್ಕಳನ್ನು ಕರೆತರುವಾಗ ಶಾಲಾ ಬ್ಯಾಗ್‌ಗಳನ್ನು ಹೊತ್ತು ತರುವುದು, ಚಿಕ್ಕಪುಟ್ಟ ಕೆಲಸಗಳನ್ನು ತಾವೇ ಮಾಡಿಕೊಡುವುದು ಸೂಕ್ತವಲ್ಲ; ಬದಲಾಗಿ ಅಂತಹ ಎಲ್ಲ ತಮ್ಮ ಕೆಲಸ ತಾವೇ ಮಾಡಿಕೊಳ್ಳುವುದನ್ನು ಅವರಲ್ಲಿ ರೂಢಿಸಬೇಕು ಎಂದು ಹೇಳಿದರು.

ಬಹುತೇಕ ಸಂದರ್ಭಗಳಲ್ಲಿ ಮಕ್ಕಳಿಗೆ ಸುಳ್ಳು ಹೇಳುವುದನ್ನು ಕಲಿಸುವುದೇ ಪೋಷಕರು ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಸಮಾಜದಲ್ಲಿ ಮೂರು ವರ್ಗದ ಪೋಷಕರನ್ನು ಕಾಣಬಹುದು. ಮಕ್ಕಳನ್ನು ತುಂಬಾ ಕಾಳಜಿ ಮತ್ತು ಪ್ರೀತಿ ಮಾಡುವವರು, ಕಾಳಜಿ ಮತ್ತು ಪ್ರೀತಿ ತೋರದೇ ಇರುವವರು ಹಾಗೂ ದಂಡನೆ ಮತ್ತು ಪ್ರೀತಿಯಲ್ಲಿ ಸಮಾನತೆ ತೋರುವವರು. ಈ ಮೂರು ವರ್ಗದಲ್ಲಿ ದಂಡನೆ ಮತ್ತು ಪ್ರೀತಿ ಎರಡನ್ನೂ ನೀಡುವ ಪೋಷಕರ ಅವಶ್ಯಕತೆ ಇಂದಿನ ಸಮಾಜಕ್ಕೆ ಇದೆ ಎಂದು ತಿಳಿಸಿದರು. 40 ನಿಮಿಷಗಳ ತರಗತಿಯ ಬೋಧನಾ ಅವಧಿಯಲ್ಲಿ ಮಗುವಿಗೆ ವೈಜ್ಞಾನಿಕವಾಗಿ 9 ನಿಮಿಷಗಳ ಕಲಿಕೆಯನ್ನು ಮಾತ್ರ ನೆನಪಿನಲ್ಲಿಟ್ಟುಕೊಳ್ಳಲು ಸಾಧ್ಯ. ಮಗುವಿನ ಪ್ರತೀ ಕಾರ್ಯಗಳಿಗೂ ಶಿಕ್ಷಕರನ್ನು ದೂಷಿಸುವ ಮೊದಲು ಮಕ್ಕಳೊಂದಿಗೆ ತಮ್ಮ ವರ್ತನೆ ಹೇಗಿದೆ ಅವರಿಗೆ ಮನೆಯಲ್ಲಿ ಎಂತಹ ಮೌಲ್ಯಯುತ ಶಿಕ್ಷಣ ನೀಡುತ್ತಿದ್ದೇವೆ ಎಂಬ ಬಗ್ಗೆ ಅವಲೋಕನ ಮಾಡಿಕೊಳ್ಳಬೇಕು ಎಂದರು.

ತಮ್ಮ ಮಕ್ಕಳು ಮುಂದೆ ಏನಾಗಬೇಕು ಎಂಬ ಬಗ್ಗೆ ಪೋಷಕರಲ್ಲೇ ಗುರಿ ಇರಬೇಕಿದ್ದು, ಆ ಗುರಿ ಈಡೇರಿಕೆಯ ಬಗ್ಗೆ ಅವರಲ್ಲಿ ಆಸಕ್ತಿ ಮೂಡಿಸಬೇಕು. ಮಕ್ಕಳ ಜೊತೆಗೆ ಪೋಷಕರು ಮುಕ್ತವಾಗಿ ಮಾತನಾಡಬೇಕಲ್ಲದೆ, ಸ್ವತಃ ಮೊಬೈಲ್ ಬಳಕೆಯನ್ನು ಕಡಿಮೆ ಮಾಡಬೇಕು. ಮಕ್ಕಳಲ್ಲಿ ಶಿಸ್ತು ಬೆಳೆಸಬೇಕು. ಮಗುವಿನ ಉತ್ತಮ ಅಥವಾ ಅಸಹಜ ನಡವಳಿಕೆಗಳ ಬೆಳವಣಿಗೆಯ ಅಡಿಪಾಯ ಮನೆಯೇ ಹೊರತು ಶಾಲೆಯಲ್ಲ. ಈ ಹಿನ್ನೆಲೆಯಲ್ಲಿ ಮನೆಯಲ್ಲಿ ತಾಯಂದಿರು ಶಿಕ್ಷಕಿಯರಾಗಬೇಕು. ಶಾಲೆಯಲ್ಲಿ ಶಿಕ್ಷಕಿಯರು ತಾಯಂದಿರಾಬೇಕು ಎಂದು ಹೇಳಿದರು.

ವಿದ್ಯಾಸಂಸ್ಥೆಯ ಆಡಳಿತ ಮಂಡಳಿ ಅಧ್ಯಕ್ಷೆ ಎಸ್.ಶಾಂತಕುಮಾರಿ ಅಧ್ಯಕ್ಷತೆ ವಹಿಸಿದ್ದ ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಎಂ.ಪುಂಡರೀಕಾಕ್ಷ ಉಡುಪ, ಜಂಟಿ ಕಾರ್ಯದರ್ಶಿ ಡಾ.ಡಿ.ಪಿ.ಮೋಹನ್, ಪ್ರಾಂಶುಪಾಲರಾದ ಎಸ್.ಆರ್.ಹೇಮ ಉಪಸ್ಥಿತರಿದ್ದರು. ಶಿಕ್ಷಕಿ ಇಂದಿರಾ ಸ್ವಾಗತಿಸಿದರು. ಶಿಕ್ಷಕಿ ಅಸ್ಪಿಯ ವಂದಿಸಿದರು. ಸಸಕಾರ್ಯಕ್ರಮಕ್ಕೆ ಮುನ್ನ ಬೆಳಗ್ಗೆ ಪೋಷಕರಿಗೆ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ಥ್ರೋಬಾಲ್, ವಾಲಿಬಾಲ್, ಭಾರದ ಕಲ್ಲು ಎಸೆತ ಹಾಗೂ ಬಾಂಬ್ ಇನ್ ದಿ ಸಿಟಿ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು. ಸಂಸ್ಥೆಯ ಕಾರ್ಯದರ್ಶಿ ಎಂ.ಪಿ.ಉಡುಪ ಹಾಗೂ ಜಂಟಿ ಕಾರ್ಯದರ್ಶಿ ಡಾ.ಡಿ.ಪಿ.ಮೋಹನ್ ಕ್ರೀಡಾಕೂಟಕ್ಕೆ ಚಾಲನೆ ನೀಡಿದರು.

## ಅರ್ಜಿ ಆಹ್ವಾನ

**ಶಿವಮೊಗ್ಗ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಭದ್ರಾವತಿ ತಾಲೂಕು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ 19 ಕಾರ್ಯಕರ್ತೆಯರು ಮತ್ತು 59 ಸಹಾಯಕಿಯರ ಹುದ್ದೆಗಳನ್ನು ಗೌರವಧನ ಸೇವೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್ https://karnemakaone.kar.nic.in/abcd/ ಮೂಲಕ ಡಿ. 15 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಭದ್ರಾವತಿ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಮೇಲಿನ ವೆಬ್‌ಸೈಟ್ ಅಥವಾ ಭದ್ರಾವತಿ ತಾಲೂಕು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸುವುದು.

## ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿ ವಾಸವಿದ್ದರೆ ಮಾಹಿತಿ ಕೊಡಿ : ಪೌರಾಯುಕ್ತೆ ರೇಣುಕಾ

**ದಾವಣಗೆರೆ:** ನಗರದ ಸ್ಥಳೀಯ ಸಂಸ್ಥೆ ವ್ಯಾಪ್ತಿಯಲ್ಲಿನ ಬೀದಿ ನಾಯಿಗಳ ಉಪಟಳ ತಡೆಯಲು ಖಾಸಗಿ ಹಾಗೂ ಸರ್ಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಮತ್ತು ಸರ್ಕಾರಿ ಆಸ್ಪತೆಗಳು, ಕ್ರೀಡಾ ಸಂಕೀರ್ಣ, ಬಸ್ ನಿಲ್ದಾಣ, ರೈಲ್ವೇ ನಿಲ್ದಾಣಗಳಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅವುಗಳ ಕುರಿತು ಲೆಕ್ಕ ಮಾಡಿ ಸ್ಥಳೀಯ ಮುಖ್ಯಾಧಿಕಾರಿ ಅಥವಾ ಪೌರಾಯುಕ್ತರಿಗೆ ಮಾಹಿತಿ ನೀಡಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದೆ.

<u>ಜಿಲ್ಲಾ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಸೂಚನೆ</u>

# ಬೆಂಬಲ ಬೆಲೆ ಯೋಜನೆಯಡಿ ಮೆಕ್ಕೆಜೋಳ ಖರೀದಿ ಕೇಂದ್ರ ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆ



**ದಾವಣಗೆರೆ:** ಜಿಲ್ಲೆಯ ಜಗಳೂರು ತಾಲ್ಲೂಕಿನಲ್ಲಿ ಅತೀ ಹೆಚ್ಚಿನ ಪ್ರಮಾಣದಲ್ಲಿ ಮೆಕ್ಕೆಜೋಳ ಬೆಳೆದಿದ್ದು, ಉತ್ತಮ ಬೆಲೆ ದೊರೆಯದ ಕಾರಣ ರೈತರಿಂದ ವರ್ತಕರು ಕಡಿಮೆ ಬೆಲೆಗೆ ಖರೀದಿ ಮಾಡುತ್ತಿದ್ದಾರೆ. ಬೆಲೆ ಕುಸಿತ ತಪ್ಪಿಸಲು ಬೆಂಬಲ ಯೋಜನೆಯಡಿ ಮೆಕ್ಕೆಜೋಳ ಖರೀದಿಗೆ ಆದೇಶಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ತೀರ್ಮಾನಿಸಲಾಗಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಜಿಲ್ಲಾ ಟಾಸ್ಕ್‌ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ ಹೆಚ್ಚಿನ ಪ್ರಮಾಣದಲ್ಲಿ ರೈತರು ಮೆಕ್ಕೆಜೋಳ ಬೆಳೆದಿದ್ದು, ಈಗಾಗಲೇ ಬೆಳೆ ಕಟಾವು ಪ್ರಾರಂಭವಾಗಿದೆ. ಜಿಲ್ಲೆಯ ಮಾರುಕಟ್ಟೆಗಳಲ್ಲಿ ಪ್ರಸ್ತುತ ದರವು ರೂ.1500 ರಿಂದ 2150ರ ವರೆಗೆ ಇದ್ದು, ಸರಾಸರಿ ರೂ.1900 ಮೆಕ್ಕೆಜೋಳ ದರದಲ್ಲಿ ಮಾರಾಟವಾಗುತ್ತಿದೆ. ಈ ದರವು ಕೇಂದ್ರ ಮತ್ತು ರಾಜ್ಯ ಸರ್ಕಾರ ನಿಗಧಿಪಡಿಸಿರುವ ಕನಿಷ್ಠ ಬೆಂಬಲ ಬೆಲೆ ದರಕ್ಕಿಂತ ಕಡಿಮೆ ಇರುತ್ತದೆ. ಮುಂಬರುವ ದಿನಗಳಲ್ಲಿ ಮಾರುಕಟ್ಟೆಗೆ ಮತ್ತಷ್ಟು ಆವಕವಾಗುವ ನಿರೀಕ್ಷೆ ಇದ್ದು, ಮತ್ತಷ್ಟು ಬೆಲೆ ಕುಸಿತವಾಗಬಹುದು. ರೈತರ ಹಿತದೃಷ್ಟಿಯಿಂದ ತೊಂದರೆಯಾಗದಂತೆ ಜಿಲ್ಲೆಯ ಎಲ್ಲಾ ಎಪಿಎಂಸಿ ಮಾರುಕಟ್ಟೆಗಳಲ್ಲಿ ಅಗತ್ಯತೆಗೆ ತಕ್ಕಂತೆ ಖರೀದಿ ಕೇಂದ್ರ ಸ್ಥಾಪಿಸಲು ಸರ್ಕಾರದ ಅನುಮತಿ ಕೇಳಲಾಗಿದೆ ಎಂದು ಅವರು ತಿಳಿಸಿದರು.

# ಬುಡಕಟ್ಟು ನಾಯಕ ಬಿರ್ಸಾ ಮುಂಡಾ ಜಯಂತಿ ಆಚರಣೆ



**ದಾವಣಗೆರೆ :** ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಭಾರತ ಸ್ವಾತಂತ್ರ್ಯ ಹೋರಾಟದಲ್ಲಿ ಪ್ರಮುಖ ಪಾತ್ರವಹಿಸಿದ ಬುಡಕಟ್ಟು ನಾಯಕ ಬಿರ್ಸಾ ಮುಂಡಾ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಜಯಂತಿ ಆಚರಿಸಲಾಯಿತು.

ಈ ವೇಳೆ ಅಪರ ಜಿಲ್ಲಾಧಿಕಾರಿ ಶೀಲವಂತ ಶಿವಕುಮಾರ್, ಪರಿಶಿಷ್ಟ ವರ್ಗಗಳ ಇಲಾಖೆ ಅಧಿಕಾರಿ ನವೀನ್ ಮಠದ್, ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು ಇದ್ದರು.

# ಬಹುಮುಖ ಪ್ರತಿಭೆ ಯಕ್ಷಗಾನ ಕಲಾವಿದೆ ಅಪೇಕ್ಷ ಕೆ.ಯು. ರವರಿಗೆ ಸನ್ಮಾನ



**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ನಗರದ ಸಿದ್ದವೀರಪ್ಪ ಬಡಾವಣೆಯ ಶಾಖೆ ಮತ್ತು ಎಂ.ಸಿ.ಸಿ. 'ಎ' ಬ್ಲಾಕ್ ಶಾಖೆಯ ಸಂಯುಕ್ತಾಶ್ರಯದಲ್ಲಿ ಇತ್ತೀಚಿಗೆ ದಾವಣಗೆರೆ ಕಲಾಕುಂಚ ಕಛೇರಿ ಸಭಾಂಗಣದಲ್ಲಿ ಮಕ್ಕಳ ದಿನಾಚರಣೆ ಪ್ರಯುಕ್ತ ನಡೆದ ಸಮಾರಂಭದಲ್ಲಿ ಕಾರ್ಯಕ್ರಮ ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿದ ಬಹುಮುಖ ಪ್ರತಿಭೆ ಯಕ್ಷಗಾನ ಕಲಾವಿದೆ ಅಪೇಕ್ಷ ಕೆ.ಯು. ಅವಳಿಗೆ ಸನ್ಮಾನಿಸಿ ಗೌರವಿಸಲಾಯಿತು.

ವೇದಿಕೆಯಲ್ಲಿ ಕಲಾಕುಂಚ ಸಂಸ್ಥೆಯ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಎಂ.ಸಿ.ಸಿ.ಶಾಖೆಯ ಅಧ್ಯಕ್ಷರಾದ ಶ್ರೀಮತಿ ಪ್ರಭಾ ರವೀಂದ್ರ, ಸಿದ್ದವೀರಪ್ಪ ಬಡಾವಣೆಯ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಲಲಿತಾ ಕಲ್ಲೇಶ್, ಕಲಾಕುಂಚ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್, ಕಲಾಕುಂಚ ಮಹಿಳಾ ವಿಭಾಗದ ಮಾಜಿ ಅಧ್ಯಕ್ಷರಾದ ಶ್ರೀಮತಿ ಚಂದ್ರಶೇಖರ ಅಡಿಗ, ಶ್ರೀಮತಿ ಶಿಲ್ಪಾ ಉಮೇಶ್ ಹಾಗೂ ಮಕ್ಕಳು ಮುಂತಾದವರು ಉಪಸ್ಥಿತರಿದ್ದರು.

## ಬೀದಿ ನಾಯಿಗಳ ಉಪಟಳ ಕಡಿವಾಣಕ್ಕೆ ಕ್ರಮ: ಪೌರಾಯುಕ್ತರು

**ಗದಗ :** ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿನ ಖಾಸಗಿ ಹಾಗೂ ಶಿಕ್ಷಣ ಸಂಸ್ಥೆಗಳು, ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣಗಳು, ಬಸ್ ನಿಲ್ದಾಣಗಳು, ರೇಲ್ವೆ ನಿಲ್ದಾಣಗಳಲ್ಲಿನ ಮುಖ್ಯಸ್ಥರು ತಮ್ಮ ಸಂಸ್ಥೆಯ ಆವರಣದಲ್ಲಿ ಬೀದಿ ನಾಯಿಗಳ ಉಪಟಳ ತಡೆಯಲು ಹಾಗೂ ಅವುಗಳ ಪ್ರದೇಶ ನಿಯಂತ್ರಿಸಲು ಕ್ರಮ ವಹಿಸಬೇಕು ಎಂದು ನಗರಸಭೆಯ ಪೌರಾಯುಕ್ತ ರಾಜಾರಾಮ್ ಪವಾರ ತಿಳಿಸಿದ್ದಾರೆ.

ಸರ್ವೋಚ್ಚ ನ್ಯಾಯಾಲಯವು ಸ್ವಯಂ ಪ್ರೇರಿತ ರಿಟ್ ಅರ್ಜಿ ಸಂಖ್ಯೆ5/2025 ರಲ್ಲಿ ನೀಡಿರುವ ನಿರ್ದೇಶನದಂತೆ ತಮ್ಮ ಸಂಸ್ಥೆಯ ಆವರಣದಲ್ಲಿ ಯಾವುದೇ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಸಂಖ್ಯೆಯನ್ನು ಲೆಕ್ಕ ಮಾಡಿ ಪೌರಾಯುಕ್ತರಿಗೆ ತಿಳಿಸುವುದು.

ಗದಗ ಬೆಟಗೇರಿ ನಗರಸಭೆಯಿಂದ ಬೀದಿ ನಾಯಿಗಳನ್ನು ಸ್ಥಳಾಂತರಿಸಲು ಸಹಕರಿಸಲು ಹಾಗೂ ಅವುಗಳ ಪ್ರವೇಶ ನಿರ್ಬಂಧಿಸುವುದನ್ನು ಮೇಲ್ವಿಚಾರಣೆ ಮಾಡಲು ತಮ್ಮ ಸಂಸ್ಥೆ ವತಿಯಿಂದ ಒಬ್ಬ ಜವಾಬ್ದಾರಿಯುತ ನೌಕರರನ್ನು ನೋಡಲ್ ಅಧಿಕಾರಿಯಾಗಿ ನೇಮಕ ಮಾಡುವುದು. ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ತಮ್ಮ ಸಂಸ್ಥೆಯ ವ್ಯಾಪ್ತಿಯಲ್ಲಿ ಪುನ: ನಾಯಿಗಳು ವಾಸ ಮಾಡಲು ಅವಕಾಶ ಕೊಟ್ಟಲ್ಲಿ ಅವುಗಳನ್ನು ಸ್ಥಳಾಂತರಿಸುವ ವೆಚ್ಚವನ್ನು ತಮ್ಮ ಸಂಸ್ಥೆಯಿಂದ ವಸೂಲಿ ಮಾಡಲಾಗುವುದು. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶ ಉಲ್ಲಂಘನೆ ಮಾಡಿದ್ದಲ್ಲಿ ನ್ಯಾಯಾಲಯದ ಆದೇಶದಂತೆ ತಮ್ಮ ವಿರುದ್ಧ ಕಾನೂನು ಕ್ರಮ ವಹಿಸಲಾಗುವದು ಎಂದು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಿಡಿಯೊ ಕರೆ ಮಾಡಿ ನೇಣಿಗೆ ಶರಣು

**ಮಡಿಕೇರಿ:** ಪತ್ನಿಗೆ ವಿಡಿಯೊ ಕರೆ ಮಾಡಿದ ಪತಿ ಸೋಮವಾರಪೇಟೆ ತಾಲೂಕಿನ ಕಿಬ್ಬೆಟ್ಟ ಗ್ರಾಮದ ಕೀರ್ತಿ (36) ಆತ್ಮಹತ್ಯೆ ಮಾಡಿಕೊಂಡ ಘಟನೆ ಶನಿವಾರ ನಡೆದಿದೆ. ಪತ್ನಿ ಜ್ಯೋತಿಗೆ ವಿಡಿಯೊ ಕರೆ ಮಾಡಿ ನೆಲದ ಮೇಲೆ ಮೊಬೈಲ್ ಇಟ್ಟು ಮರಕ್ಕೆ ನೇಣು ಬಿಗಿದುಕೊಂಡಿದ್ದಾರೆ.

# ಸುವಿದ್ಯಾ ನಿಧಿ ವತಿಯಿಂದ ಪ್ರಥಮ ಚಿಕಿತ್ಸೆ ಜಾಗೃತಿ ಕಾರ್ಯಕ್ರಮ




**ದಾವಣಗೆರೆ :** ಬಡವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಪ್ರತಿ ತಿಂಗಳು ಧನಸಹಾಯ ನೀಡುತ್ತಾ ವಿದ್ಯಾರ್ಥಿಗಳ ಉನ್ನತ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುತ್ತಾ ಬರುತ್ತಿರುವ ಸಾಮಾಜಿಕ ಸೇವಾ ಕಾರ್ಯಚಟುವಟಿಕೆಗಳನ್ನು ನೆಡೆಸುತ್ತಿರುವ ಗುಂಪು ಸುವಿದ್ಯಾ ನಿಧಿ ಗುಂಪು. ದಿನಾಂಕ= 15/11/2025 ಶನಿವಾರದಂದು ಸುವಿದ್ಯಾ ನಿಧಿ ದಾವಣಗೆರೆ ವತಿಯಿಂದ ಸುಶ್ರುತ ಆಯುರ್ವೇದ

ವೈದ್ಯಕೀಯ ಮಹಾವಿದ್ಯಾಲಯ ದಾವಣಗೆರೆ ಇವರ ಸಹಯೋಗದೊಂದಿಗೆ ಡಾ.ಎ.ಎಂ.ಶಿವಕುಮಾರ್ ಅವರ ನೇತ್ರತ್ವದಲ್ಲಿ ಕಾರ್ಯಕ್ರಮ ಆಯೋಜಿಸಿದ್ದು ಪ್ರಥಮ ವರ್ಷದ ಆಯುರ್ವೇದ ಬಿಎಎಂಎಸ್ ವಿದ್ಯಾರ್ಥಿಗಳಿಗೆ ಪ್ರಥಮ ಚಿಕಿತ್ಸೆ ಕುರಿತು ಜಾಗೃತಿ ಕಾರ್ಯಕ್ರಮವನ್ನು ಸುಶ್ರುತ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ದಾವಣಗೆರೆಯಲ್ಲಿ ಹಮ್ಮಿಕೊಳ್ಳಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಪ್ರಸಿದ್ಧ ರಾಷ್ಟ್ರೀಯ ತರಬೇತುದಾರರಾದ ಡಾ. ಕುಮಾರ್ ವಿ ಎಲ್ ಎಸ್ ರವರು ತುರ್ತುಸ್ಥಿತಿಗಳ ನಿರ್ವಹಣೆ ಮತ್ತು ಜೀವ ಉಳಿಸುವ ಪ್ರಥಮ ಚಿಕಿತ್ಸೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಆಯುರ್ವೇದಿಕ್ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗಿತ್ತು. ಇದರಲ್ಲಿ *ತುರ್ತು ಸಂದರ್ಭದಲ್ಲಿ ವಿದ್ಯಾರ್ಥಿಗಳು ಕೈಗೊಳ್ಳಬೇಕಾದ ಪ್ರಥಮ ಚಿಕಿತ್ಸೆ ಕುರಿತು ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಕವಾಗಿ ಗಾಯಾಳುಗಳನ್ನು ಪರೀಕ್ಷಿಸುವ ವಿಧಾನ, ಸಿ.ಪಿ.ಆರ್ ವಿಧಾನ, ಸಿ ಪಿ ಆರ್ ಕೈಗೊಳ್ಳುವ ಮುನ್ನೆಚ್ಚರಿಕೆ ಕ್ರಮಗಳು* ಈಗೆ ಮುಂತಾದ ಸನ್ನಿವೇಶಗಳಲ್ಲಿ ಎದುರಿಸುವ ಕ್ರಮಗಳ ಕುರಿತಾಗಿ ಎಲ್ಲಾ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಿದರು.ಈ ಕಾರ್ಯಕ್ರಮದಲ್ಲಿ ಸುಶ್ರುತ ಆಯುರ್ವೇದಿಕ್ ಮೆಡಿಕಲ್ ಕಾಲೇಜು ದಾವಣಗೆರೆಯ ಡಾ.ಸತೀಶ್ ಬಿ ಜಿ, ಡಾ.ಅಕ್ಬರ್ ಖಾನ್, ಡಾ.ರವೀಂದ್ರ ಎಸ್ ಹುನಗುಂದ, ಡಾ.ದರ್ಶನ್ ಬಾಬು ಎನ್, ಡಾ. ಚಿನ್ಮಯಿ ಚಿಗಟೇರಿ ಮತ್ತು ಕುಮಾರ ಎಂ. ಇತರರು ಉಪಸ್ಥಿತರಿದ್ದರು.

## ನಿಧನ ಸುದ್ದಿಗಳು

### ಆರ್. ರತ್ನಮ್ಮ ನಿಧನ



**ಚಿತ್ರದುರ್ಗ :** ನಗರದ ವಿದ್ಯಾನಗರ ಏಳುಕೋಟಿ ಬಡಾವಣೆ ನಿವಾಸಿ ರತ್ನಮ್ಮ(67) ಭಾನುವಾರ ಮಧ್ಯಾಹ್ನ ನಿಧನ ಹೊಂದಿದರು. ಮೃತರು ಭದ್ರಾ ಮೇಲ್ದಂಡೆ ಯೋಜನೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಆರ್ . ಮನು ಸೇರಿದಂತೆ ಇಬ್ಬರು ಪುತ್ರರ ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ ಎರಡು ಗಂಟೆಗೆ ಜೋಗಿಮಟ್ಟಿ ರಸ್ತೆಯ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

### ಕೆ. ಶಾಂತಪ್ಪ ನಿಧನ

**ಜಗಳೂರು:** ತಾಲೂಕಿನ ಮರಿಕುಂಟೆ ಗ್ರಾಮದ ನಿವಾಸಿ ಕೆ. ಶಾಂತಪ್ಪ (81) ಭಾನುವಾರ ನಿಧನರಾದರು. ಪತ್ನಿ, ಇಬ್ಬರು ಪುತ್ರರು, ಪುತ್ರಿಯರು ಇದ್ದಾರೆ. ಗ್ರಾಮದ ಸ್ವಂತ ಜಮೀನಿನಲ್ಲಿ ಸಂಜೆ ಅಂತ್ಯಕ್ರಿಯೆ ನಡೆಯಿತು.

### ಹೊನ್ನನಾಯಕನಹಳ್ಳಿ ಮುರಿಗೇಂದ್ರಪ್ಪ ನಿಧನ

**ಮಾಯಕೊಂಡ:** ದಾವಣಗೆರೆ ತಾಲೂಕಿನ ಹೊನ್ನನಾಯಕನಹಳ್ಳಿ ಮುರಿಗೇಂದ್ರಪ್ಪ (73) ಅನಾರೋಗ್ಯದಿಂದ ಭಾನುವಾರ ದಾದರು. ಮೃತರಿಗೆ ಪತ್ನಿ, ಇಬ್ಬರು ಪುತ್ರರು ಇದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮದ ಅವರ ತೋಟದಲ್ಲಿ ಸೋಮವಾರ ನಡೆದಿದೆ.

ಬೀರೂರು ಸಮ್ಮಸಗಿ ಹೆದ್ದಾರಿ ಮಸಣಿಕೆರೆ ಕ್ರಾಸ್ ಬಳಿ ಬೀಕರ ಅಪಘಾತ

# ಹಾಸನ ಅಬಕಾರಿ ಇಲಾಖೆ ಸಿಬ್ಬಂದಿ ಉಮೇಶ್ ಸಾವು

**ಚನ್ನಗಿರಿ:** ಮಂಗಳವಾರ ಜಾವ 5 ಗಂಟೆ ಸುಮಾರಿಗೆ, ಚನ್ನಗಿರಿ–ಬೀರೂರು ಹೆದ್ದಾರಿಯ ಮಸಣಿಕೆರೆ ಕ್ರಾಸ್ ಬಳಿ ನಡೆದ ಭಯಾನಕ ರಸ್ತೆ ಅಪಘಾತದಲ್ಲಿ ಒಬ್ಬ ವ್ಯಕ್ತಿ ಸ್ಥಳದಲ್ಲೇ ಸಾವನ್ನಪ್ಪಿದ್ದು, ನಾಲ್ವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಚನ್ನಗಿರಿ ಮಾರ್ಗದಿಂದ ಬರುತ್ತಿದ್ದ ಆಲ್ಟೊ ಕಾರು 800, ರಸ್ತೆ ಬದಿಯಲ್ಲಿ ನಿಂತಿದ್ದ ಲಾರಿಗೆ ಭೀಕರವಾಗಿ ಢಿಕ್ಕಿ ಹೊಡೆದ ಪರಿಣಾಮ, ಕಾರು ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿರುವ ದೃಶ್ಯಗಳು ಕಂಡುಬಂದಿರುತ್ತದಡ

ಅಪಘಾತದಲ್ಲಿ ಸ್ಥಳದಲ್ಲೇ ವಾಹನ ಚಲಾಯಿಸುತ್ತಿದ್ದ

ಉಮೇಶ್ 38 ವರ್ಷ, ಅಬಕಾರಿ ಇಲಾಖೆಯ ಸಿಬ್ಬಂದಿ ದುರ್ಮರಣ ಹೊಂದಿದವರು.ಇನ್ನು ಉಳಿದ ನಾಲ್ಕು ಜನ ಗಂಭೀರ ಗಾಯಗೊಂಡವರುಮಲ್ಲಿಕಾರ್ಜುನ 38ವರ್ಷ: ಅಬಕಾರಿ ಇಲಾಖೆಅವಿನಾಶ್ 25 ವರ್ಷ: ನ್ಯಾಯಾಂಗ ಇಲಾಖೆಯಾಸಿನ್ ಖಾನ್ 30 ವರ್ಷ : ನ್ಯಾಯಾಂಗ ಇಲಾಖೆ ಮಹಾಂತೇಶ್ 36 ವರ್ಷ ಘಟನೆಯ ತೀವ್ರತೆ ಕಾರಣವಾಗಿ ಗಾಯಾಳುಗಳ ಸ್ಥಿತಿ ಗಂಭೀರವಾಗಿದ್ದು, ಸ್ಥಳೀಯರು ತಕ್ಷಣ 108 ಆಂಬ್ಯುಲೆನ್ಸ್‌ಗೆ ಮಾಹಿತಿ ನೀಡಿ ರಕ್ಷಣಾ ಕಾರ್ಯ ನಡೆಸಿದರು.108 ಸಿಬ್ಬಂದಿಗಳಾದ ಪುನೀತ್ ಮತ್ತು ಜಯಪ್ಪ, ಗಾಯಾಳುಗಳಿಗೆ ಸ್ಥಳದಲ್ಲೇ ಪ್ರಥಮ ಚಿಕಿತ್ಸೆ ನೀಡಿ ಚನ್ನಗಿರಿ ಸಾರ್ವಜನಿಕ ಆಸ್ಪತ್ರೆಗೆ ಸಾಗಿಸಿದರು. ನಂತರ ಹೆಚ್ಚಿನ ಚಿಕಿತ್ಸೆಗೆ ಶಿವಮೊಗ್ಗದ ಖಾಸಗಿ ಆಸ್ಪತ್ರೆಗೆ ರವಾನಿಸಲಾಗಿದೆ.

ಪೊಲೀಸರ ಪ್ರಾಥಮಿಕ ಪರಿಶೀಲನೆಯಲ್ಲಿ, ಅಪಘಾತಕ್ಕೊಳಗಾದವರು ಹಾಸನ ಜಿಲ್ಲೆಯ ಬೇಲೂರಿನ ಮೂಲದವರು ಆಗಿದ್ದು, ದಾವಣಗೆರೆಗೆ ವಿವಾಹ ಸಮಾರಂಭಕ್ಕೆ ಹೋಗಿ ವಾಪಸ್ ಬರುತ್ತಿದ್ದ ವೇಳೆ ದುರಂತ ಸಂಭವಿಸಿದೆ ಎಂದು ತಿಳಿದುಬಂದಿದೆ.

ಅಪಘಾತದ ನಂತರ ಬೇಲೂರು ನ್ಯಾಯಾಧೀಶರು ಹಾಗೂ ಶಿವಮೊಗ್ಗ ಶಾಸಕ ಚನ್ನಬಸಪ್ಪ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿ, ಅಗತ್ಯ ನೆರವು ನೀಡುವ ಭರವಸೆ ನೀಡಿದ್ದಾರೆ.ಪೊಲೀಸರು ಪ್ರಕರಣ ದಾಖಲಿಸಿಕೊಂಡು ಅಪಘಾತದ ನಿಖರ ಕಾರಣ ಪತ್ತೆಹಚ್ಚಲು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಎಸ್‌ಕೆಪಿ ಪಿಆರ್ ಟ್ರಸ್ಟ್‌ನಿಂದ ಧಾತ್ರಿ ಪೂಜೆ



**ದಾವಣಗೆರೆ:** ನಗರದ ಎಸ್‌ಕೆಪಿ ರಸ್ತೆಯಲ್ಲಿರುವ ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನ (ರಿ.) ಪಬ್ಲಿಕ್ ರಿಲೀಜಿಯಸ್ ಟ್ರಸ್ಟ್ ವತಿಯಿಂದ ತಾಲೂಕಿನ ಶಾಸ್ತ್ರಿ ಹಳ್ಳಿಯಲ್ಲಿರುವ ಮಾತಾ ಟ್ರಸ್ಟ್‌ನ ಸಭಾಂಗಣದಲ್ಲಿ ಶನಿವಾರ ಸಂಜೆ ಧಾತ್ರಿ ಪೂಜೆಯನ್ನು ವಿಜೃಂಭಣೆಯಿಂದ ನೆರವೇರಿಸಲಾಯಿತು.

ಕಾರ್ತಿಕ ಮಾಸದ ಅಂಗವಾಗಿ ನಲ್ಲಿಕಾಯಿ ಮರಕ್ಕೆ ಪೂಜೆ ಸಲ್ಲಿಸುವುದು ಹಿಂದಿನಿಂದಲೂ ನಡೆದುಕೊಂಡು ಬಂದ ಪದ್ಧತಿಯಾಗಿದ್ದು, ಅದರಂತೆ ದಾವಣಗೆರೆಯ ಸೋಮಶೇಖರ ಮತ್ತು ತಂಡದಿಂದ ವಿಷ್ಣು ಸಹಸ್ರನಾಯ ಮತ್ತು ಅಷ್ಟೋತ್ತರ ಪಾರಾಯಣ ಮಾಡಲಾಯಿತು. ನಂತರ ಶ್ರೀ ವಾಸವಿ ಭಜನಾ ಮಂಡಳಿ, ಶ್ರೀ ವಾಗ್ದೇವಿ ಭಜನಾ ಮಂಡಳಿಯಿಂದ ಭಜನೆ ಕಾರ್ಯಕ್ರಮಗಳು ನಡೆದವು. ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನ (ರಿ.) ಪಬ್ಲಿಕ್ ರಿಲೀಜಿಯಸ್ ಟ್ರಸ್ಟ್ ಹಾಗೂ ಮಾತಾ ಟ್ರಸ್ಟಿನ ಸದಸ್ಯರು ಪಾಲ್ಗೊಂಡಿದ್ದರು. ಪೂಜೆಯ ನಂತರ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು.

ಈ ವೇಳೆ ಟ್ರಸ್ಟಿನ ಜೆ.ವಿ.ಗೋಪಾಲಕೃಷ್ಣ, ಎಸ್. ಆರ್.ಹುಚ್ಚುರಾಯಪ್ಪ, ರಟ್ಟಿಹಳ್ಳಿ ಸತೀಶ್‌ಕುಮಾರ್, ಶೇಷಾದ್ರಿ ಪ್ರಸಾದ್, ಚನ್ನಗಿರಿ ರಾಕೇಶ್, ಚನ್ನಗಿರಿ ಕೆ.ಪ್ರಶಾಂತ್ ಸೇರಿದಂತೆ ಉಭಯ ಟ್ರಸ್ಟಿನ ಪದಾಧಿಕಾರಿಗಳು ಇದ್ದರು.

# ದೈವಜ್ಞ ಬ್ರಾಹ್ಮಣ ಸಂಘಕ್ಕೆ 10 ಲಕ್ಷರೂ.ಅನುದಾನ :ಶಾಸಕ



**ಚಿಕ್ಕಮಗಳೂರು:** ದೈವಜ್ಞ ಬ್ರಾಹ್ಮಣ ಸಂಘದಕಲ್ಯಾಣ ಮಂಟಪ ನಿರ್ಮಾಣಕಾರ್ಯಕ್ಕೆ ಶಾಸಕರ ನಿಧಿಯಿಂದ 10 ಲಕ್ಷರೂ.ನೀಡುವುದಾಗಿ ಶಾಸಕ ಎಚ್.ಡಿ.ತಮ್ಮಯ್ಯ ಭರವಸೆ ನೀಡಿದರು.

ನಗರದಕೆ.ಎಂ.ರಸ್ತೆಯಲ್ಲಿರುವ ಶ್ರೀ ದೈವಜ್ಞ ಬ್ರಾಹ್ಮಣ ಸಂಘದ ನೂತನ ಸಭಾಭವನಕಟ್ಟಡವನ್ನು ಭಾನುವಾರ ಉದ್ಘಾಟಿಸಿ ಅವರು ಮಾತನಾಡಿ, ದೈವಜ್ಞ ಬ್ರಾಹ್ಮಣ ಸಮುದಾಯಒಗ್ಗಟ್ಟಾಗಬೇಕು. ಆಗ ಮಾತ್ರ ಸರಕಾರದಿಂದದೊರೆಂಮುವಅನುದಾನ ಮತ್ತಿತರೆ ಸೌಲಭ್ಯ ಪಡೆದುಕೊಳ್ಳಲು ಸಾಧ್ಯಎಂದರು.ದೈವಜ್ಞ ಬ್ರಾಹ್ಮಣ ಸಮುದಾಯಚಿಕ್ಕದಾದರೂ ಬಹು ಸಂಖ್ಯಾತಜನ ಮೆಚ್ಚುವ ಕೆಲಸ ಮಾಡುತ್ತದೆ. ಚಿನ್ನ ಬೆಳ್ಳಿ ಆಭರಣತಯಾರಿಸುವ ಈ ಸಮುದಾಯ ಹಿಂದಿನಿಂದಲೂ ಸಮಾಜಕ್ಕೆಉತ್ತಮಕೊಡುಗೆ ನೀಡುತ್ತಾ ಬಂದಿದೆ. ಸಣ್ಣ ಸಮುದಾಯಆಗಿರುವ ುದರಿಂದಒಗ್ಗಟ್ಟಾಗಿರಬೇಕು.ಒಗ್ಗಟ್ಟಿನಲ್ಲಿ ಬಲವಿದೆ.ಯಾವುದೇರಾಜಕೀಯ ಪಕ್ಷದ ನಾಯಕರ ಬಳಿ ಒಬ್ಬರೇ ಹೋದರೆಅವರ ಮಾತಿಗೆಕಿಮ್ಮತ್ತಿರುವುದಿಲ್ಲ. ಅದೇ ಹತ್ತುಜನ ಹೋದಾಗಅದಕ್ಕೆ ಬೆಲೆ ಇದೆ.ಹೀಗಾಗಿ ಸಮಾಜ ಸದಾಒಗ್ಗಟ್ಟನ್ನು ಕಾಪಾಡಿಕೊಳ್ಳಬೇಕು.ಚಿನ್ನ ಬೆಳ್ಳಿ ಆಭರಣತಯಾರಕರಾದ ನಿಮಗೆ ಪೊಲೀಸ 'ರಿಂದತೊಂದರೆಎದುರಾಗುವುದು ಸಮಾನ್ಯ. ಅಂತಹ ಸಂದರ್ಭ ಬಂದಾಗ ಸದಾ ನಿಮ್ಮ ಪರವಾಗಿ ನಿಂತಿದ್ದೇನೆ ಮುಂದೆಯೂ ನಿಲ್ಲುತ್ತೇನೆಎಂದರು.

ದೈವಜ್ಞ ಬ್ರಾಹ್ಮಣ ಸಂಘದಕಲ್ಯಾಣ ಮಂಟಪ ನಿರ್ಮಿಸಲು ಶಾಸಕರ ನಿಧಿಯಿಂದ 10 ಲಕ್ಷರೂ.ನೀಡುವುದಾಗಿಇದೇ ವೇಳೆ ಭರವಸೆ ನೀಡಿದರು.

ದೈವಜ್ಞ ಬ್ರಾಹ್ಮಣ ಸಂಘದಅಧ್ಯಕ್ಷರಾಧಕೃಷ್ಣಶೇಟ್‌ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂಘದಕಟ್ಟಡದಿಂದ ಮಾಸಿಕ 45 ಸಾವಿರರೂ.ಆದಾಯ ಬರುತ್ತಿದೆ. ಇದರೊಂದಿಗೆ ಸಂಘದ ಸದಸ್ಯರೆಲ್ಲರೂ, ಸಮುದಾಯ ಕೈಜೋಡಿಸಿದಲ್ಲಿ 2 ಕೋಟಿರೂ.ವೆಚ್ಚದಲ್ಲಿ ನೂತನಕಲ್ಯಾಣ ಮಂಟಪ ನಿರ್ಮಿಸುವಯೋಜನೆ ಹಾಕಿಕೊಂಡಿದ್ದೇವೆಎಂದರು.

ನಿವೃತ್ತ ಲೆಕ್ಕಾಧಿಕಾರಿ ನಾಗೇಶ್‌ಶೇಟ್‌ಅವರನ್ನು ಈ ವೇಳೆ ಸನ್ಮಾನಿಸಲಾಯಿತು. ಖಜಾಂಚಿ ಪುರುಷೋತ್ತಮಶೇಟ್ ವರದಿ ಮಂಡಿಸಿದರು.ನಿರ್ದೇಶಕ ಬಾಲಸುಬ್ರಮಣ್ಯರಾಯ್ಕರ್ ವಂದಿಸಿದರು. ರಮೇಶ್‌ಶೇಟ್, ಶ್ರೀಪತಿಭಟ್ ಮತ್ತಿತರೆ ನಿರ್ದೇಶಕರು ಉಪಸ್ಥಿತರಿದ್ದರು.

## ಡಿ.12 ರಂದು ಜಿಲ್ಲಾ ಯೋಜನಾ ಸಮಿತಿಗೆ ಚುನಾವಣೆ

**ಚಿಕ್ಕಮಗಳೂರು:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1996 (ಜಿಲ್ಲಾ ಯೋಜನಾ ಸಮಿತಿಯ ಚುನಾವಣೆ) ನಿಯಮಗಳು 1996ರ ನಿಯಮ 8ರ ಪ್ರಕಾರ ಪುರಸಭೆ ಮತ್ತು ಪಟ್ಟಣ ಪಂಚಾಯಿತಿ ಮತ ಕ್ಷೇತ್ರದಿಂದ ಚಿಕ್ಕಮಗಳೂರು ಜಿಲ್ಲಾ ಯೋಜನಾ ಸಮಿತಿಗೆ ಡಿಸೆಂಬರ್ 12 ರಂದು ಚುನಾವಣೆಯನ್ನು ನಡೆಸಬೇಕಾಗಿದ್ದು, ಪದನಿಮಿತ್ತ ಚುನಾವಣಾಧಿಕಾರಿಗಳಾದ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಹೆಚ್.ಎಸ್.ಕೀರ್ತನಾ ಅವರು ತಮಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದ್ದಾರೆ.

ನಗರ ಸ್ಥಳೀಯ ಸಂಸ್ಥೆಗಳಾದ ಚಿಕ್ಕಮಗಳೂರು ನಗರಸಭೆ, ತರೀಕೆರೆ ಪುರಸಭೆ ಮತ್ತು ಅಜ್ಜಂಪುರ ಪಟ್ಟಣ ಪಂಚಾಯಿತಿಗಳಿಂದ 6 ಮಂದಿ ಸದಸ್ಯರನ್ನು ಚುನಾಯಿಸಬೇಕಾಗಿದೆ. ನವೆಂಬರ್ 18 ರಿಂದ 27ರವರೆಗೆ ನಾಮ ನಿರ್ದೇಶನಗಳನ್ನು ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ನವೆಂಬರ್ 28 ರಂದು ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳ ಕಚೇರಿಯಲ್ಲಿ ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಡಿಸೆಂಬರ್ 1 ರಂದು ಸಂಜೆ 5 ಗಂಟೆಯವರೆಗೆ ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಅವಕಾಶ ನೀಡಲಾಗಿದೆ. ಡಿಸೆಂಬರ್ 5 ರಂದು ಜಿ.ಪಂ. ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಚುನಾವಣೆ ನಡೆಯಲಿದ್ದು, ಅಂದೇ ಈ ಸಭಾಂಗಣದಲ್ಲಿ ಮತಗಳ ಎಣಿಕೆ ಕಾರ್ಯ ನಡೆಯಲಿದೆ. ನಗರ ಸ್ಥಳೀಯ ಕ್ಷೇತ್ರದ ಒಟ್ಟು 69 ಮತದಾರರಿಂದ ಮತದಾನ ನಡೆಯಲಿದೆ ಎಂದು ಜಿಲ್ಲಾ ಯೋಜನಾ ಸಮಿತಿ ಚುನಾವಣಾಧಿಕಾರಿಗಳೂ ಆದ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

## ಸ್ಪರ್ಧಾತ್ಮಕ ಧಾರಣೆ ಪಡೆಯಿರಿ

**ದಾವಣಗೆರೆ:** ಸುಗ್ಗಿಯ ಕಾಲ ಪ್ರಾರಂಭವಾಗಿದ್ದು, ದಾವಣಗೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ಎ ಎಲ್ಲ ಅಧಿಸೂಚಿತ ಕೃಷಿ ಹುಟ್ಟುವಳಿಗಳನ್ನು ಇ-ಟೆಂಡರ್ ಮುಖಾಂತರ ಖರೀದಿ, ಮಾರಾಟ ಮಾಡಲಾಗುತ್ತಿದೆ. ಆದ್ದರಿಂದ ರೈತರು ಬೆಳೆದ ಕೃಷಿ ಉತ್ಪನ್ನಗಳನ್ನು ಇ-ಟೆಂಡರ್ ಮುಖಾಂತರ ಮಾರಾಟ ಮಾಡಿ ಸ್ಪರ್ಧಾತ್ಮಕ ಬೆಲೆ ಪಡೆಯಲು ಕೋರಲಾಗಿದೆ.

ತಮ್ಮ ಉತ್ಪನ್ನ ಮಾರಾಟ ಮಾಡುವ ಮುನ್ನ ಮತ್ತು ನಂತರದಲ್ಲಿ ತಾವು ಬೆಳೆದ ಉತ್ಪನ್ನಗಳನ್ನು ಒಣಗಿಸಿ ಸ್ವಚ್ಛಗೊಳಿಸಿ ಮಾರುಕಟ್ಟೆ ಪ್ರಾಂಗಣಕ್ಕೆ ತಂದು ಇ-ಟೆಂಡರ್ ಮುಖಾಂತರ ಮಾರಾಟ ಮಾಡಿ ಸ್ಪರ್ಧಾತ್ಮಕ ಬೆಲೆ ಪಡೆಯಬೇಕು.

ಮಾರಾಟ ಮಾಡಿದ ನಂತರ ಯಾವುದೇ ರೀತಿಯ ಕಮಿಷನ್ ನೀಡಬಾರದು. ಉತ್ಪನ್ನಗಳ ಮಾರಾಟವಾದ ನಂತರ ಪೇಟೆ ಕಾರ್ಯಕರ್ತರಿಂದ ಬಿಳಿ ಚೀಟಿ ತಿರಸ್ಕರಿಸಿ ಅಧಿಕೃತ ಲೆಕ್ಕ ತೀರುವಳಿ ಪಟ್ಟಿ ಕೇಳಿ ಪಡೆಯಬೇಕು.

ವಿದ್ಯುನ್ಮಾನ(ಎಲೆಕ್ಟ್ರಾನಿಕ್)ತೂಕದ ಯಂತ್ರದ ಮೂಲಕವೇ ತೂಕ ಮಾಡಿಸಿ ನಿಖರ ತೂಕ ಖಾತರಿ ಪಡಿಸಿಕೊಳ್ಳಬೇಕು. ರೈತರು ತಮ್ಮ ಉತ್ಪನ್ನಗಳನ್ನು ಮಾರಾಟ ಮಾಡುವಾಗ ಯಾವುದೇ ರೀತಿಯ ಶಾಂಪಲ್, ತಳಗಾಳು, ಸೂಟ್, ಫೆಟ್ ನೀಡಬಾರದು. ಯಾರಾದರೂ ಪಡೆದುಕೊಂಡಲ್ಲಿ ಅಂತಹವರ ವಿರುದ್ಧ ಲಿಖಿತವಾಗಿ ಕಚೇರಿಗೆ ದೂರು ನೀಡಬೇಕು ಎಂದು ಜಿಲ್ಲಾಧಿಕಾರಿ ಜಿ. ಎಂ. ಗಂಗಾಧರಸ್ವಾಮಿ ತಿಳಿಸಿದ್ದಾರೆ.

## ಪೊಲೀಸ್ ಕ್ರೀಡಾಕೂಟ 17ರಿಂದ 19

**ದಾವಣಗೆರೆ:** ನಗರದ ಪಿಜೆ ಬಡಾವಣೆಯ ಪೊಲೀಸ್ ಕವಾಯತು ಮೈದಾನದಲ್ಲಿ ನ.17ರಿಂದ 19ರವರೆಗೆ ಜಿಲ್ಲಾ ಪೊಲೀಸ್ ವತಿಯಿಂದ 2025ನೇ ಸಾಲಿನ ವಾರ್ಷಿಕ ಪೊಲೀಸ್ ಕ್ರೀಡಾಕೂಟ ಏರ್ಪಡಿಸಲಾಗಿದೆ. ನ.17ರ ಬೆಳಗ್ಗೆ 8 ಗಂಟೆಗೆ ಕೆಎಸ್ ಆರ್‌ಪಿ ಐಜಿಪಿ ಸಂದೀಪ್ ಪಾಟೀಲ್ ಕ್ರೀಡಾಕೂಟ ಉದ್ಘಾಟಿಸುವರು. ಎಸ್ಪಿ ಉಮಾ ಪ್ರಶಾಂತ್, ಎಎಸ್ಪಿ ಪರಮೇಶ್ವರ ಹೆಗಡೆ ಉಪಸ್ಥಿತರಿರುವರು. 19ರ ಸಂಜೆ ನಡೆಯುವ ಸಮಾರೋಪ ಸಮಾರಂಭದಲ್ಲಿ ವಿಜೇತರಿಗೆ ಪೂರ್ವ ವಲಯ ಐಜಿಪಿ ಡಾ.ಬಿ. ಆರ್. ರವಿಕಾಂತೇಗೌಡ ಬಹುಮಾನ ವಿತರಿಸಲಿದ್ದಾರೆ.

## ಬೀದಿ ನಾಯಿ ಮಾಹಿತಿ ಕೊಡಿ

**ದಾವಣಗೆರೆ:** ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಬೀದಿ ನಾಯಿಗಳ ಉಪಟಳ ತಡೆಯುವ ನಿಟ್ಟಿನಲ್ಲಿನಗರದ ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿಗಳು ಇರುವ ಬಗ್ಗೆ ಮಾಹಿತಿ ನೀಡುವಂತೆ ಮಹಾನಗರ ಪಾಲಿಕೆ ಕೋರಿದೆ. ಖಾಸಗಿ ಹಾಗೂ ಸರಕಾರಿ ಶಿಕ್ಷಣ ಸಂಸ್ಥೆಗಳು, ಖಾಸಗಿ ಮತ್ತು ಸರಕಾರಿ ಆಸ್ಪತ್ರೆಗಳು, ಕ್ರೀಡಾ ಸಂಕೀರ್ಣ, ಬಸ್ ನಿಲ್ದಾಣ, ರೈಲು ನಿಲ್ದಾಣಗಳಲ್ಲಿ ಬೀದಿ ನಾಯಿಗಳು ವಾಸವಿದ್ದಲ್ಲಿ ಅದನ್ನು ಪರಿಶೀಲಿಸಿ ಕೂಡಲೇ ಅವುಗಳ ಲೆಕ್ಕ ಮಾಡಿ, ಸ್ಥಳೀಯ ಮುಖ್ಯಾಧಿಕಾರಿ ಅಥವಾ ಪೌರಾಯುಕ್ತರಿಗೆ ಮಾಹಿತಿ ನೀಡುವಂತೆ ತಿಳಿಸಿದ್ದಾರೆ.

## ಆರೆಸ್ಸೆಸ್ ಕಾರ್ಯಕರ್ತನ ಪುತ್ರ ಗುಂಡೇಟಿಗೆ ಬಲಿ

**ಫಿರೋಜ್‌ಪುರ:** ಪಂಜಾಬ್‌ನ ಫಿರೋಜ್‌ಪುರ ಜಿಲ್ಲೆಯಲ್ಲಿ ಶನಿವಾರ ಇಬ್ಬರು ದುಷ್ಕರ್ಮಿಗಳು ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರೆಸ್ಸೆಸ್) ಕಾರ್ಯಕರ್ತನೊಬ್ಬನ ಮಗನನ್ನು ಗುಂಡಿಟ್ಟು ಹತ್ಯೆ ಮಾಡಿದ್ದಾರೆ. ಮೃತನನ್ನು ಆರೆಸ್ಸೆಸ್ ಸ್ವಯಂಸೇವಕ ಬಲದೇವ್ ರಾಜ್ ಅರೋರಾರ ಮಗ ನವೀನ್ ಅರೋರಾ (40) ಎಂದು ಗುರುತಿಸಲಾಗಿದೆ.

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪರಿಸ್ಥಿತಿ ಹದಗೆಟ್ಟಿದೆ ಎಂದು ಈ ಘಟನೆಯ ಹಿನ್ನೆಲೆಯಲ್ಲಿ ಬಿಜೆಪಿ ಆರೋಪಿಸಿದೆ. ಬುದ್ವಾರ ವಾಲಾ ಮೊಹಲ್ಲಾ ಬಳಿ ಈ ದುಷ್ಕೃತ್ಯ ನಡೆದಿದೆಯೆಂದು ಫಿರೋಜ್‌ಪುರ ಪೊಲೀಸರು ತಿಳಿಸಿದ್ದಾರೆ. ಗುಂಡು ಹಾರಿಸಿ ಪರಾರಿಯಾದ ದುಷ್ಕರ್ಮಿಗಳ ಪತ್ತೆಗೆ ಪೊಲೀಸರು ಹಲವು ತಂಡಗಳನ್ನು ರಚಿಸಿದ್ದು ದುಷ್ಕೃತ್ಯದ ಪ್ರದೇಶದ ಸಿಸಿಟಿವಿ ಫೂಟೇಜ್‌ಗಳನ್ನು ಸೂಕ್ಷ್ಮವಾಗಿ ಪರಿಶೀಲಿಸುತ್ತಿದ್ದಾರೆ. ಹತ್ಯೆಯ ಹಿಂದಿನ ಕಾರಣವೇನೆಂಬುದು ಇನ್ನೂ ತಿಳಿದು ಬಂದಿಲ್ಲ.

# ಬೆಂಗಳೂರು ಚಲೋ ಪ್ರತಿಭಟನೆ
## ನವೆಂಬರ್ 26 ರಂದು ಸರ್ಕಾರ ಭೂಮಿ-ಮತ್ತು ವಸತಿ ವಿಚಾರಕ್ಕೆ ಗಟ್ಟಿಯಾದ ತೀರ್ಮಾನ

**ದಾವಣಗೆರೆ:** ಸಂಯುಕ್ತ ಹೋರಾಟ ಕರ್ನಾಟಕ ನೇತೃತ್ವದಲ್ಲಿ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯು ನವೆಂಬರ್ 26ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸರ್ಕಾರ ಭೂಮಿ-ಮತ್ತು ವಸತಿ ವಿಚಾರಕ್ಕೆ ಗಟ್ಟಿಯಾದ ತೀರ್ಮಾನವನ್ನು ಮಾಡಲೇಬೇಕು ಹಾಗೂ ಓನ್ ಟೈಂ ಸೆಟ್ಲಮೆಂಟ್ ಜಾರಿಗೆ ಒತ್ತಾಯಿಸಿ ಬೃಹತ್ ಪ್ರತಿಭಟನೆ ಹಮ್ಮಿಕೊಂಡಿದೆ.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಕಾರ್ಯದರ್ಶಿ ಕುಮಾರ್ ಸಮತಳ ಮಾತನಾಡಿ, ನಾವು ಬಡವರ ಪರ, ದಲಿತರ ಪರ ಎಂದು ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರಕ್ಕೆ ಸಾಕಷ್ಟು ಬಾರಿ ಮನವಿ ಮಾಡಿದ್ದರು ಯಾವುದೇ ಪ್ರಯೋಜನವಾಗಿಲ್ಲ. ಹೋರಾಟದ ಎಚ್ಚರಿಕೆ ನೀಡಿದ್ದರು ಕೂಡ ಭೂಮಿ-ಮತ್ತು ವಸತಿ ವಿಚಾರದ ದಶಕಗಳ ಸಮಸ್ಯೆಗೆ ಪರಿಹಾರ ನೀಡುತ್ತಿಲ್ಲ. ಆದ್ದರಿಂದ ಈ ಬಾರಿ ಎಲ್ಲಾ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಪರಿಹಾರ ಸಿಗುವವರೆಗೂ ಬೃಹತ್ ಪ್ರತಿಭಟನೆ ಮಾಡಲಿದ್ದೇವೆ ಎಂದರು.

ಕೇಂದ್ರದಲ್ಲಿರುವ ಬಿಜೆಪಿ ನೇತೃತ್ವದ ಸರ್ಕಾರ ಆದಿವಾಸಿಗಳನ್ನೂ ಬಿಡದೆ ಬೀದಿಗೆ ತಳ್ಳುತ್ತಾ ಲಕ್ಷಾಂತರ ಎಕರೆ ಭೂಮಿಗಳನ್ನು ದೇಶದ ಅತ್ಯಂತ ಲೂಟಿಕೋರ ಅಂಬಾನಿ-ಅದಾನಿಗಳಿಗೆ ಮತ್ತು ವಿದೇಶಿ ಕಂಪನಿಗಳಿಗೆ ಗಣಿಗಾರಿಕೆ ಮಾಡಲು ಅನುವು ಮಾಡಿಕೊಡುವ ಮೂಲಕ ಬಕಾಸುರನ ಪಾತ್ರ ವಹಿಸುತ್ತಿದೆ. ದೇಶಪ್ರೇಮದ ಹೆಸರಲ್ಲಿ ವಿದೇಶಿಗರ ಸೇವೆಯಲ್ಲಿ ನಿರತವಾಗಿದೆ ಎಂದು ಅವರು ಆರೋಪಿಸಿದರು.

ರಾಜ್ಯದ ದುಡಿಯುವ ಜನರಿಗೆ ಅದರಲ್ಲೂ ಬಗರ್ ಹುಕುಂ ಸಾಗುವಳಿದಾರರಿಗೆ ಭೂಮಿಯ ಹಕ್ಕುಪತ್ರ ನೀಡಲು ಭೂಮಿ ಮಂಜೂರಾತಿ ಸಮಿತಿಗಳನ್ನು ಸರ್ಕಾರ ರಚಿಸಿದ್ದರೂ ಕಾಲಕಾಲಕ್ಕೆ ಸರಿಯಾಗಿ ಸಭೆಗಳು ಆಗುತ್ತಿಲ್ಲ, ಮಂಜೂರಾತಿಯೂ ಆಗುತ್ತಿಲ್ಲ. ಮಂಜೂರಾತಿಗೆ ಹತ್ತಾರು ಕಾನೂನುಗಳ ವಿಘ್ನಗಳನ್ನು ಮುಂದೆ ಮಾಡಲಾಗುತ್ತಿದೆ. ವಸತಿ ರಹಿತರ ವಿಚಾರಕ್ಕೆ ಸರ್ಕಾರದ ಸರಿಯಾದ ಯೋಜನೆ ಮತ್ತು ಆದ್ಯತೆ ಇಲ್ಲದಿರುವುದರಿಂದ ಕುಟುಂಬಗಳು ಬೆಳೆದಂತೆ ವಾಸಕ್ಕೆ ಜಾಗ ಸಾಕಾಗದೇ ಕುಟುಂಬದೊಳಗೇ ಆಂತರಿಕ ಕಲಹವಾಗಿ ಮಾರ್ಪಾಡಾಗುತ್ತಿದೆ ಎಂದರು.

ಇನ್ನು ಅರಣ್ಯ ಅಧಿಕಾರಿಗಳಂತೂ ಅರಣ್ಯ ವಾಸಿಗಳಿಗೆ, ಸಾಗುವಳಿ ಮಾಡುವ ಜನರಿಗೆ ಪೀಡಕರಾಗಿದ್ದಾರೆ. ತಲೆತಲಾಂತರಗಳಿಂದ ಅರಣ್ಯವಾಸಿಗಳಾಗಿ ಜೀವನ ಕಟ್ಟಿಕೊಂಡು ಅರಣ್ಯವನ್ನೂ ಕಾಪಾಡುತ್ತಾ ಬದುಕಿದವರಿಗೆ ನೆಲೆಗೊಂದು ಹಕ್ಕುಪತ್ರ ಬದುಕಿಗೊಂದಿಷ್ಟು ತುಂಡು ಭೂಮಿಯ ಹಕ್ಕನ್ನು ನಿರಾಕರಿಸಲಾಗುತ್ತಿದೆ. ಕಳೆದ 60-50 ವರ್ಷಗಳಿಂದಲೂ ಸಾಗುವಳಿ ಮಾಡುತ್ತಾ ಅರ್ಜಿ ಸಲ್ಲಿಸಿದ್ದರೂ ಭೂಮಿ ಮಂಜೂರಾತಿ ನೀಡದೆ ಈಗ ನಗರ ಮಿತಿಯ ನೆಪದಲ್ಲಿ ಲಕ್ಷಾಂತರ ಸಂಖ್ಯೆಯ ಭೂರಹಿತರು ಭೂಮಿಯಿಂದ ವಂಚನೆಗೊಳಗಾಗುತ್ತಿದ್ದಾರೆ ಎಂದರು.

ಇದು ಬಡವರ ಪಾಲಿಗೆ ಮುಗಿಯದ ಗೋಳಿನ ಕಥೆಗಳ ದೊಡ್ಡ ಸರಮಾಲೆಯೇ ಆಗಿದೆಯಾದರೂ ಸರ್ಕಾರಗಳು ಇದನ್ನು ಸರಿಪಡಿಸುವ, ಬಡವರಿಗೆ ನ್ಯಾಯ ಕೊಡಿಸುವ ವಿಚಾರಕ್ಕೆ ಕೈಹಾಕದೆ ಕಾಲ ತಳ್ಳುತ್ತಲೇ ಇದ್ದಾರೆ ಎಂದು ಕಿಡಿಕಾರಿದರು.

ಸುದ್ದಿಗೋಷ್ಠಿಯಲ್ಲಿ ಹೋರಾಟ ಸಮಿತಿಯ ಕೆ.ಮರಿಯಪ್ಪ, ರವಿಕುಮಾರ್, ಸತೀಶ್ ಅರವಿಂದ್ ಇದ್ದರು.

# ನಗರದಲ್ಲಿ ನ 22, 23ರಂದು 45ನೇ ರಾಜ್ಯ ಮಟ್ಟದ ಕ್ರೀಡಾಕೂಟ



**ಬಳ್ಳಾರಿ:** ಇದೇ ತಿಂಗಳು 22 ಮತ್ತು 23 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ವೆಟ್ರನ್ಸ್ ಅಥ್ಲೆಟಿಕ್ ಅಸೋಸಿಯೇಷನ್ ಆಫ್ ಬಳ್ಳಾರಿ ಮತ್ತು ವೆಟ್ರನ್ಸ್ ಅಥ್ಲೆಟಿಕ್ ಅಸೋಸಿಯೇಷನ್ ಆಫ್ ಕರ್ನಾಟಕ ಸಹಯೋಗದೊಂದಿಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಎರಡು ದಿನಗಳ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ ಎಂದು ಅಸೋಸಿಯೇಷನ್ ಬಳ್ಳಾರಿ ಜಿಲ್ಲಾ ಅಧ್ಯಕ್ಷರಾದ ಶಾಂತಾಬಾಯಿ ಕಟ್ಟಿಮನಿ ತಿಳಿಸಿದರು.

ಅವರು ಇಂದು ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನು ನಡೆಸಿ ಮಾತನಾಡಿ, ಈ ಕ್ರೀಡಾಕೂಟದಲ್ಲಿ 30 ವರ್ಷದ ವಯಸ್ಸಿನಿಂದ ನೂರು ವರ್ಷ ವಯಸ್ಸಿನ ಕ್ರೀಡಾಪಟುಗಳು ಭಾಗವಹಿಸಬಹುದು.

ಐದು ವಿಭಾಗಗಳಲ್ಲಿ ಈ ಕ್ರೀಡಾಕೂಟವನ್ನು ನಡೆಸಲಾಗುತ್ತಿದ್ದು 100 ಮೀಟರ್ ನಿಂದ 5000 ಮೀಟರ್ ಓಟದ ಸ್ಪರ್ಧೆಗಳು ಎಸೆತ ಹಾಗೂ ಜಿಗಿತದ ಸ್ಪರ್ಧೆಗಳು ಹಮ್ಮಿಕೊಳ್ಳಲಾಗಿದೆ, 65 ವರ್ಷ ವಯಸ್ಸಿನ

ಸ್ಪರ್ದಾಳುಗಳಿಗೆ ಕೆಲವೊಂದು ಆಟಗಳನ್ನು ನಿಷೇಧಿಸಲಾಗಿದೆ, ವಿಕಲಚೇತನರಿಗೆ ಸಹ ಈ ಕ್ರೀಡಾಕೂಟದಲ್ಲಿ ಅವಕಾಶವನ್ನು ಕಲ್ಪಿಸಲಾಗಿದೆ

ಪ್ರತಿಸ್ಪರ್ಧೆಯಲ್ಲೂ ಪ್ರಥಮ, ದ್ವಿತೀಯ ಮತ್ತು ತೃತೀಯ ಬಹುಮಾನಗಳನ್ನು ನೀಡಲಾಗುವುದು. ಮತ್ತು ಈ ಕ್ರೀಡಾಕೂಟದಲ್ಲಿ ಭಾಗವಹಿಸಿ ಯಶಸ್ವಿಯಾಗಿ ಗೆದ್ದವರಿಗೆ ಡಿಸೆಂಬರ್ 13 ಮತ್ತು 14 ರಂದು ತಮಿಳುನಾಡಿನ ತಿರುವಣ್ಣಾಮಲೈನಲ್ಲಿ ನಡೆಯುವ ದಕ್ಷಿಣ ಭಾರತದ ಕ್ರೀಡಾಕೂಟದಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಡಲಾಗುವುದು ಎಂದರು.

ಈ ಕ್ರೀಡಾಕೂಟವನ್ನು ಸುಮಾರು 60 ರಿಂದ 70 ಜನ ತೀರ್ಪುಗಾರರು ಭಾಗವಹಿಸಿ ಯಶಸ್ವಿಗೊಳಿಸುವರು ರಾಜ್ಯ ಮತ್ತು ಜಿಲ್ಲಾ ಘಟಕದಿಂದ ಈ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ವಸತಿ ಮತ್ತು ಊಟ ವ್ಯವಸ್ಥೆಯನ್ನು ಕಲ್ಪಿಸಲಾಗುವುದು ಎಂದರು.

ಈ ಪತ್ರಿಕಾಗೋಷ್ಠಿಯಲ್ಲಿ ರಾಜ್ಯ ಅಧ್ಯಕ್ಷರಾದ ವೇಣುಗೋಪಾಲ್ ಖಜಾಂಚಿಯಾದ ಡಿ ಎಸ್ ದೊಡ್ಡಯ್ಯ ಜನರಲ್ ಸೆಕ್ರೆಟರಿ ನಾಗಭೂಷಣ್ ವಿಜಯ್ ಅಬ್ದುಲ್ ಮುನಫ್ ಇದ್ದರು.

# ವಿವಿಗೆ ಸಾಲುಮರದ ತಿಮ್ಮಕ್ಕ ಹೆಸರಿಡಿ
## ಸೀಬಾರದಲ್ಲಿ ನುಡಿನಮನ ಕಾರ್ಯಕ್ರಮ




**ಚಿತ್ರದುರ್ಗ:** ಸಾಲುಮರದ ತಿಮ್ಮಕ್ಕ ಸೇರಿ ಅನೇಕ ಸಾಮಾನ್ಯ ಮಹಿಳೆಯರು ಸಮಾಜಕ್ಕೆ ದೊಡ್ಡ ಕೊಡುಗೆ ನೀಡಿದ್ದಾರೆ. ವೃಕ್ಷಮಾತೆ ಎಂದೇ ಗುರುತಿಸಿಕೊಂಡಿರುವ ಸಾಲುಮರದ ತಿಮ್ಮಕ್ಕಳ ಹೆಸರನ್ನು ಸ್ಮರಣೀಯಗೊಳಿಸಬೇಕಿದೆ ಎಂದು ಮಾಜಿ ಸಚಿವ ಎಚ್.ಆಂಜನೇಯ ಹೇಳಿದರು.

ತಾಲೂಕಿನ ಸೀಬಾರ ಗ್ರಾಮದ ತಮ್ಮ ಕಚೇರಿಯಲ್ಲಿ ಭಾನುವಾರ ಕರ್ನಾಟಕ ಮಾದಾರ ಮಹಾಸಭಾ ವತಿಯಿಂದ ಆಯೋಜಿಸಿದ್ದ ಸಾಲುಮರದ ತಿಮ್ಮಕ್ಕ ನುಡಿನಮನ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ವಿಶ್ವವಿದ್ಯಾಲಯಕ್ಕೆ ತಿಮ್ಮಕ್ಕ ಹೆಸರನ್ನು ನಾಮಕರಣ ಗೊಳಿಸಬೇಕು. ಸಾವಿರ ಎಕರೆಗೂ ಹೆಚ್ಚು ಭೂಮಿಯಲ್ಲಿ ಅವರ ಹೆಸರಿನಲ್ಲಿ ರಾಷ್ಟ್ರೀಯ ಉದ್ಯಾನವನ ಸ್ಥಾಪಿಸಬೇಕು. ಅವರ ಪುತ್ರನ ನೇತೃತ್ವದಲ್ಲಿ ಟ್ರಸ್ಟ್ ಸ್ಥಾಪಿಸಲು ಒಂದೆರಡು ಎಕರೆ ಭೂಮಿ ಕೊಟ್ಟು, ಟ್ರಸ್ಟ್ ಮೂಲಕ ಪರಿಸರ ಜಾಗೃತಿ ಮೂಡಿಸಲು ಸರ್ಕಾರ ಕ್ರಮಕೈಗೊಳ್ಳಬೇಕು ಎಂದರು.

ಸಾಮಾನ್ಯ ಮಹಿಳೆ ತಿಮ್ಮಕ್ಕಳ ಬದ್ಧತೆ, ಪರಿಸರ ಕಾಳಜಿ, ಗಿಡ-ಮರಗಳ ಪ್ರಾಮುಖ್ಯತೆಯ ಅರಿವು ಸಮಾಜಕ್ಕೆ ಬಹುದೊಡ್ಡ ಕೊಡುಗೆ ನೀಡಿದೆ. ಬುಡಕಟ್ಟು, ಹಳ್ಳಿ ಜನರು ಪ್ರಕೃತಿಯೊಂದಿಗೆ ಬದುಕು ಕಟ್ಟಿಕೊಂಡವರು. ಮರಗಳನ್ನೇ ದೇವರ ಸ್ಥಾನದಲ್ಲಿಟ್ಟು ಪೂಜಿಸಿದವರು. ನಮ್ಮ ಪೂರ್ವಿಕರು ಪರಿಸರ ರಕ್ಷಣೆಗೆ ಟೊಂಕ ಕಟ್ಟಿ ನಿಂತಹ ಮಹನೀಯರು. ಒಂದು ಹೆಜ್ಜೆ ಮುಂದಿಟ್ಟ ತಿಮ್ಮಕ್ಕ ತನಗೆ ಮಕ್ಕಳಿಲ್ಲದ ಕೊರಗು ನೀಗಿಸಿಕೊಳ್ಳಲು ಸಸಿ ನೆಟ್ಟು ಅವುಗಳನ್ನು ಸಲುಹಿದ ರೀತಿಯೇ ಸಮಾಜಕ್ಕೆ ಉತ್ತಮ ಸಂದೇಶ ನೀಡಿದೆ ಎಂದರು.

ತನ್ನ ಪತಿ, ಸಂಬಂಧಿಗಳ ಜೊತೆಗೆ ಸುಃಖದಿಂದ ಇರಬೇಕಾದ ಸಂದರ್ಭದಲ್ಲಿಯೇ ರಸ್ತೆಬದಿ ಸಸಿ ನೆಟ್ಟು ಪೋಷಿಸುವ ಮಹತ್ತರ ಕಾರ್ಯ ಮಾಡಿ ಸಾಲುಮರದ ತಿಮ್ಮಕ್ಕ ಎಂದೇ ಜನಪ್ರಿಯತೆ ಗಳಿಸಿದ ಮೇಲೂ ನಾಡಿನಾದ್ಯಂತ ಸಮಾಜ ಸೇವೆಯಲ್ಲಿ ತನ್ನನ್ನು ತೊಡಗಿಸಿಕೊಳ್ಳುವ ಮೂಲಕ ನಿಸ್ವಾರ್ಥ ಬದುಕು ನಡೆಸಿದ ತಿಮ್ಮಕ್ಕ ಮಾದರಿ ಆಗಿದ್ದಾರೆ ಎಂದು ತಿಳಿಸಿದರು.

ಈ ತಪ್ಪು ಹಾದಿಯಿಂದ ಹೊರಬರುವ ಬಹುದೊಡ್ಡ ಸವಾಲು ನಮ್ಮ ಮುಂದಿದೆ. ಅಭಿವೃದ್ಧಿ ಪರಿಭಾಷೆ ಬದಲಾಗಬೇಕಿದೆ. ಪ್ರಾಣಿಪಕ್ಷಿಗಳು, ಗಿಡ-ಮರ, ಪ್ರಕೃತಿ ರಕ್ಷಣೆಗೆ ನಾವೆಲ್ಲರೂ ಕೈಜೋಡಿಸಬೇಕಿದೆ. ತಿಮ್ಮಕ್ಕಳನ್ನು ನಾವುಗಳು ಮಾದರಿಯನ್ನಾಗಿಸಿಕೊಂಡರೇ ನೆಮ್ಮದಿ ಬದುಕು ಸಾಧ್ಯವಾಗಲಿದೆ ಎಂದರು.

ಜಿಲ್ಲಾ ಸಹಕಾರ ಯೂನಿಯನ್ ಉಪಾಧ್ಯಕ್ಷ ಜೆ.ಆರ್.ರವಿಕುಮಾರ್ ನಾಯಕನಹಟ್ಟಿ, ಮೇಘ ಗಂಗಾಧರ ನಾಯ್ಕ, ವಕೀಲರಾದ ರವೀಂದ್ರ, ಉಮಾಪತಿ, ಪರಿಸರವಾದಿ ಇನಾಯತ್ ಷರೀಫ್ ಮಾತನಾಡಿದರು.

ಕಾಂಗ್ರೆಸ್ ಎಸ್ಸಿ ವಿಭಾಗದ ತಾಲೂಕು ಅಧ್ಯಕ್ಷ ಅನಿಲ್ ಕೋಟಿ, ಹೊಳಲ್ಕೆರೆ ಕಾಂಗ್ರೆಸ್ ಮಾಧ್ಯಮ ವಿಭಾಗದ ಕಿರಣ್ ಶಿವಪುರ, ಅಜಾದ್ ನಗರ ಗ್ರಾಪಂ ಮಾಜಿ ಸದಸ್ಯ ದಾದಾಪೀರ್, ಮಹಿಳಾ ಕಾಂಗ್ರೆಸ್ ರಾಜ್ಯ ಕಾರ್ಯದರ್ಶಿ ಮುನೀರಾ, ಒಬಿಸಿ ಘಟಕದ ರಾಜ್ಯ ಕಾರ್ಯದರ್ಶಿ ಚಂದ್ರಶೇಖರ್ ಭೀಮಸಮುದ್ರ, ಚೇತನ್ ಬೋರೇನಹಳ್ಳಿ ಇತರರಿದ್ದರು.

# ಅಣಬೆ ಕೃಷಿ ಹಾಗೂ ಗೊಬ್ಬರ ತಯಾರಿಕೆ ವಿಧಾನಗಳ ಬಗ್ಗೆ ಚರ್ಚೆ ಕಾರ್ಯಕ್ರಮ

**ನ್ಯಾಮತಿ:** ತಾಲೂಕಿನ ಹಳೇ ಜೋಗ ಗ್ರಾಮದಲ್ಲಿ ಶಿವಮೊಗ್ಗ ಕೃಷಿ ಮಹಾವಿದ್ಯಾಲಯ ನವಿಲೆ ಅಂತಿಮ ವರ್ಷದ ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಗ್ರಾಮೀಣ ಕೃಷಿ ಕಾರ್ಯಾನುಭವ ಕಾರ್ಯಮದಲ್ಲಿ ಅಣಬೆ ಕೃಷಿ ಅಂತರಗಂಗೆ ಹಾಗೂ ಗೊಬ್ಬರ ತಯಾರಿಕೆ ವಿಧಾನಗಳ ಬಗ್ಗೆ ಪ್ರಾತ್ಯಕ್ಷಿಕೆ ಹಾಗೂ ಗುಂಪು ಚರ್ಚೆ ಕಾರ್ಯಕ್ರಮ ನಡೆಯಿತು. ಗ್ರಾಮದ ಮುಖಂಡರಾದ ಸೋಮಣ್ಣ, ರಮೇಶ್, ಮಧು, ಸಂತೋಷ್ ಗ್ರಾಮಸ್ಥರು ಸೇರಿದಂತೆ ಅಂತಿಮ ವರ್ಷದ ವಿದ್ಯಾರ್ಥಿಗಳು ಇದ್ದರು.



## ಮೆಕ್ಕೆಜೋಳ ಖರೀದಿ ಕೇಂದ್ರಕ್ಕಾಗಿ ಪ್ರಸ್ತಾವ



**ದಾವಣಗೆರೆ:** ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮೆಕ್ಕೆಜೋಳ ಬೆಳೆದಿದ್ದು, ವರ್ತಕರು ರೈತರಿಂದ ಕಣಟು ಬೆಲೆಗೆ ಖರೀದಿ ಮಾಡುತ್ತಿದ್ದಾರೆ. ಬೆಲೆ ಕುಸಿತ ತಪ್ಪಿಸಲು ಬೆಂಬಲ ಯೋಜನೆಯಡಿ ಜಿಲ್ಲೆಯ ಎಲ್ಲ ಎಪಿಎಂಸಿ ಮಾರುಕಟ್ಟೆಗಳಲ್ಲಿ ಖರೀದಿ ಕೇಂದ್ರ ತೆರೆಯಲು ಸರಕಾರದ ಅನುಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿ ಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ ಜಿಲ್ಲಾ ಟಾಸ್ಕ್‌ಫೋರ್ಸ್ ಸಭೆಯಲ್ಲಿ ಮಾತನಾಡಿ, ಜಿಲ್ಲಾದ್ಯಂತ ಅತಿ ಹೆಚ್ಚು ಮೆಕ್ಕೆಜೋಳ ಬೆಳೆದಿದ್ದು, ಈಗಾಗಲೇ ಬೆಳೆ ಕಟಾವು ಪ್ರಾರಂಭವಾಗಿದೆ. ಮಾರುಕಟ್ಟೆಯಲ್ಲಿ ಕ್ವಿಂಟಲ್ ಮೆಕ್ಕೆಜೋಳ ದರ 1500ರಿಂದ 2150 ರೂ. ಇದ್ದು, ಸರಾಸರಿ 1900 ರೂ. ಇದೆ. ಕೇಂದ್ರ ಮತ್ತು ರಾಜ್ಯ ಸರಕಾರ ನಿಗದಿ ಪಡಿಸಿದ ಕನಿಷ್ಠ ಬೆಂಬಲ ಬೆಲೆಗಿಂತಲೂ ಮಾರುಕಟ್ಟೆ ದರ ಕಡಿಮೆ ಇದೆ ಎಂದು ತಿಳಿಸಿದರು

## ಛತ್ತೀಸ್‌ಗಢದಲ್ಲಿ ಮೂವರು ನಕ್ಸಲರ ಹತ್ಯೆ

**ಸುಕ್ಮಾ:** ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಭಾನುವಾರ ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ ಮೂರು ನಕ್ಸಲರು ಹತರಾಗಿದ್ದಾರೆಂದು ಪೊಲೀಸರು ತಿಳಿಸಿದ್ದಾರೆ. ಭೇಜ್ ಮತ್ತು ಚಿಂಟಾಗುಫಾ ಪೊಲೀಸ್ ಠಾಣೆ ಸರಹದ್ದಿನ ತುಮಲ್ಪಾದ್ ಗ್ರಾಮದ ಅರಣ್ಯಗಳಿಂದ ಕೂಡಿದ ಬೆಟ್ಟ ಪ್ರದೇಶಗಳಲ್ಲಿ ನಕ್ಸಲೀಯರು ಅಡಗಿಕೊಂಡಿರುವ ಬಗ್ಗೆ ಲಭಿಸಿದ ಬೇಹುಗಾರಿಕೆ ಮಾಹಿತಿ ಆಧರಿಸಿ ಜಿಲ್ಲಾ ಮೀಸಲು ಗಾರ್ಡ್ (ಡಿಆರ್‌ಜಿ) ಬೆಳಿಗ್ಗೆ ಕಾರ್ಯಾಚರಣೆಗಿಳಿಯಿತು. ಒಟ್ಟು 15 ಲಕ್ಷ ರೂಪಾಯಿ ಬಹುಮಾನ ಹೊಂದಿದ್ದ ಮೂರು ನಕ್ಸಲೀಯರು ಕಾರ್ಯಾಚರಣೆಯಲ್ಲಿ ಮೃತಪಟ್ಟರೆಂದು ಸುಕ್ಮಾ ಎಸ್‌ಪಿ ಕಿರಣ್ ಚವಾಣ್ ತಿಳಿಸಿದರು. ಡಿಆರ್‌ಜಿ ಸಿಬ್ಬಂದಿ ಕಂಡಾಕ್ಷಣ ನಕ್ಸಲರು ಗುಂಡು ಹಾರಿಸಿದರು. ಭದ್ರತಾ ಪಡೆಗಳು ಪ್ರತಿಯಾಗಿ ದಾಳಿ ಮಾಡಿದಾಗ ಎರಡೂ ಕಡೆ ಭಾರಿ ಚಕಮಕಿ ನಡೆಯಿತು. ಕಾಳಗ ನಡೆದ ಸ್ಥಳದಿಂದ ಇಬ್ಬರು ಮಹಿಳೆಯರ ಸಹಿತ ಮೂರು ಉಗ್ರರ ಶವಗಳು ದೊರಕಿವೆ ಎಂದು ಚವಾಣ್ ಹೇಳಿದರು. ಮೃತರನ್ನು ಮಾಡ್ವಿ ದೇವ, ಪೋದಿಯಂ ಗಂಗಿ ಮತ್ತು ಸೋಧಿ ಗಂಗಿ ಎಂದು ಗುರುತಿಸಲಾಗಿದೆ. ಪ್ರತಿಯೊಬ್ಬರ ತಲೆ ಮೇಲೆ 5 ಲಕ್ಷ ರೂಪಾಯಿ ಬಹುಮಾನ ಘೋಷಿಸಲಾಗಿತ್ತು.

## ಸಮಿತಿ ರಚಿಸಲು ಸಭೆ 26ಕ್ಕೆ

**ದಾವಣಗೆರೆ:** ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿನ.26ರ ಬೆಳಗ್ಗೆ 11 ಗಂಟೆಗೆ ಜಿಲ್ಲೆಯ ಆಸ್ತಿತ್ವದಲ್ಲಿರುವ ಅಪಾಯಕಾರಿ ಕಾರ್ಯಾಚರಣೆ ಹೊಂದಿರುವ ಎಂಎಎಚ್ (ಮೇಜರ್ ಆಕ್ಸಿಡೆಂಟಿ ಹೆಜಾರ್ಡ್) ಕಾರ್ಖಾನೆ ಮೇ.ಬನ್ಸಲ್ ಆರಾಧ್ಯ ಸ್ಟೀಲ್ ಪ್ರೈ. ಲಿ.ಆನಗೋಡು ಕಾರ್ಖಾನೆಗೆ ಸಂಬಂಧಿಸಿದಂತೆ ಜಿಲ್ಲಾ ಬಿಕ್ಕಟ್ಟು ಪರಿಹಾರ ಸಮಿತಿ ರಚಿಸುವ ಸಂಬಂಧ ಸ ಆಯೋಜಿಸಲಾಗಿದೆ. ಡಿಸಿ ಜಿ.ಎಂ.ಗಂಗಾಧರಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ.

## ನೊಂದವರಿಗೆ ನೆರವು – ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಮಹತ್ತರ ಪಾತ್ರ

### ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಸಿಟ್ಟಿಂಗ್ಸ್

**ದಾವಣಗೆರೆ:** ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ನಿಟ್ಟಿನಲ್ಲಿ 1993ರ ಮಾನವ ಹಕ್ಕುಗಳ ಸಂರಕ್ಷಣಾ ಅಧಿನಿಯಮದ ಅಡಿಯಲ್ಲಿ ಸ್ಥಾಪಿತವಾಗಿದೆ.

ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು 2025 ನೇ ನವೆಂಬರ್ 18 ರಿಂದ 20 ರವರೆಗೆ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಸಿಟ್ಟಿಂಗ್ಸ್ ನಡೆಸಲು ಉದ್ದೇಶಿಸಿರುತ್ತದೆ.

ಈ ಸಂದರ್ಭದಲ್ಲಿ ಸದರಿ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಆಯಾಯ ಜಿಲ್ಲೆಗಳಲ್ಲಿ ಇತ್ಯರ್ಥಪಡಿಸಿ, ವಿಲೇ ಮಾಡಿ ಕ್ರಮ ಜರುಗಿಸಲು ಉದ್ದೇಶಿಸಲಾಗಿದೆ. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಸದುಪಯೋಗಪಡಿಸಿಕೊಳ್ಳಬಹುದಾಗಿದೆ.

ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆಯಾಯ ಜಿಲ್ಲೆಗಳಲ್ಲಿಯೇ ನಿಗದಿತ ದಿನಾಂಕಗಳಂದು ಸಾರ್ವಜನಿಕರಿಂದ ದೂರುಗಳು ಮತ್ತು ಅಹವಾಲುಗಳನ್ನು ಸಹ ಸ್ವೀಕರಿಸಲು ಉದ್ದೇಶಿಸಲಾಗಿದೆ.

ಸಾರ್ವಜನಿಕರು ಆಯಾ ಜಿಲ್ಲೆಗಳಲ್ಲಿ ನಿಗದಿತ ದಿನಾಂಕಗಳಂದು ಆಯೋಗದ ಮಾನ್ಯ ಅಧ್ಯಕ್ಷರು (ಹಂಗಾಮಿ) ಹಾಗೂ ಮಾನ್ಯ ಸದಸ್ಯರನ್ನು ಸಂಪರ್ಕಿಸಿ, ದೂರುಗಳನ್ನು ಸಲ್ಲಿಸಬಹುದಾಗಿದೆ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಕಾರ್ಯದರ್ಶಿ (ಪ) ಎ. ದಿನೇಶ್ ಸಂಪತ್ ರಾಜ್ ಅವರು ತಿಳಿಸಿದ್ದಾರೆ.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ಹಾಸನ :** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಜಾರಿಯಲ್ಲಿರುವ ಫಲಾನುಭವಿ ಆಧಾರಿತ ಯೋಜನೆಗಳು/ಕಾರ್ಯಕ್ರಮಗಳಡಿ ಸೌಲಭ್ಯ ಪಡೆಯಲು 2025–26ನೇ ಸಾಲಿನಲ್ಲಿ website: https://sevasindhu.karnataka.gov.in/Sevasindhu/Kannada ಆನ್‌ಲೈನ್ ಮೂಲಕ ಅರ್ಜಿಗಳನ್ನು 31/10/2025 ರಂದು ನಿಗಧಿಪಡಿಸಿದ ದಿನಾಂಕವನ್ನು ನ.15 ಕ್ಕೆ ಮುಂದೂಡಲಾಗಿದೆ. ಜಿಲ್ಲೆಯ ಅರ್ಹ ವಿಕಲಚೇತನರು ಸೇವಾಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಸದರಿ ದಿನಾಂಕದೊಳಗೆ ಈ ಕೆಳಕಂಡ ಯೋಜನೆ/ಕಾರ್ಯಕ್ರಮಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ. ಪ್ರತಿಭಾ ವಿಕಲಚೇತನ ವಿದ್ಯಾರ್ಥಿಗಳಿಗಾಗಿ ಪ್ರೋತ್ಸಾಹಧನ ಯೋಜನೆ, ಅಂಧ ಮಹಿಳೆಯರಿಗೆ ಜನಿಸಿದ ಮಗುವಿನ ಲಾಲನೆ, ಪೋಷಣೆಗಾಗಿ ಶಿಶುಪಾಲನಾ ಭತ್ಯೆ ನೀಡುವ ಯೋಜನೆ, ಸ್ವಯಂ ಉದ್ಯೋಗ ಕೈಗೊಳ್ಳಲು ಆಧಾರ ಯೋಜನೆಯಡಿ ಸಾಲಸೌಲಭ್ಯ ನೀಡುವುದು.

'.ಗ್ರಾಮೀಣ ಪುನರ್ವಸತಿ ಯೋಜನೆಯಡಿ ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆಯಡಿ ಸಹಾಯಧನ ನೀಡಲಾಗುವುದು. ತೀವ್ರತರ ದೈಹಿಕ ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವೀಲ್‌ಚೇರ್‌ಗಳನ್ನು ನೀಡಲಾಗುವುದು. 10ನೇ ತರಗತಿ ಹಾಗೂ ತದನಂತರ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಲ್ಯಾಪ್ ಟಾಪ್ ನೀಡುವ ಯೋಜನೆ, 10ನೇ ತರಗತಿ ಹಾಗೂ ತದನಂತರ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಬ್ರೈಲ್ ಕಿಟ್ ನೀಡುವ ಯೋಜನೆ, ಅರ್ಹ ವಿಕಲಚೇತನರಿಗೆ ಅವಶ್ಯವಿರುವ ಸಾಧನ ಸಲಕರಣೆಗಳ ವಿತರಣೆ ಯೋಜನೆ.

## ಸಾಲು ಮರದ ಡಾ.ತಿಮ್ಮಕ್ಕನ ಭಾವಚಿತ್ರಕ್ಕೆ ಪೂಜೆ



**ನ್ಯಾಮತಿ :** ಪಟ್ಟಣದ ಶ್ರೀ ಪೇಟೆ ಬಸವೇಶ್ವರ ದೇಗುಲದ ಆವರಣದಲ್ಲಿ ಶನಿವಾರ ನ್ಯಾಮತಿ ಮತ್ತು ಹೊನ್ನಾಳಿ ಸ್ವಾತಂತ್ರ್ಯ ಹೋರಟಗಾರರ ಉತ್ತರಾಧಿಕಾರಿಗಳ ಸಂಘವು ಸಾಲು ಮರದ ಡಾ.ತಿಮ್ಮಕ್ಕನ ಸಾಲು ಮರದ ಡಾ.ತಿಮ್ಮಕ್ಕನ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಶುಕ್ರವಾರ ನಿಧನ ಹೊಂದಿದ್ದ ಭಾವ ಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಕುಮಾರಿ ಮಾಷ್ಟಿ ಮೀನಾಕ್ಷಮ್ಮ, ಸೋಗಿ ಚಿದಾನಂದ, ಜೀನಕೇರಿ ಮಲ್ಲಿಕಾಜುನ, ಎಚ್.ಯೋಗರಾಜ್, ಗಡೆಕಟ್ಟೆ ನಿಜಲಿಂಗಪ್ಪ, ಟಿ.ಬೆನಕಪ್ಪ, ಓ.ಎಸ್. ಕುಮಾರ್, ಎನ್.ಎಸ್.ಅರುಣಕುಮಾರ್, ವಿವೇಕ, ಕರ್ನಲ್ಲಿ ಗಂಗಾಧರ್ ಮತ್ತಿತರರು ಭಾಗವಹಿಸಿದ್ದರು.

## 2028 ರಲ್ಲಿ ಚಂದ್ರಯಾನ–4



**ನವದೆಹಲಿ:** ಚಂದ್ರನಿಂದ ಸ್ಯಾಂಪಲ್‌ಗಳನ್ನು ಭೂಮಿಗೆ ತರುವ ಉದ್ದೇಶದ ಚಂದ್ರಯಾನ–4 ಮಿಷನ್‌ಗೆ ಕೇಂದ್ರ ಸರ್ಕಾರ ಹಸಿರು ನಿಶಾನೆ ತೋರಿದ್ದು, 2028ರಲ್ಲಿ ಉಡಾವಣೆ ಮಾಡಲಾಗುತ್ತದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಕೇಂದ್ರದ (ಇಸ್ರೋ) ಅಧ್ಯಕ್ಷ ವಿ. ನಾರಾಯಣನ್ ಭಾನುವಾರ ತಿಳಿಸಿದ್ದಾರೆ.

ಇದು ಈ ವರೆಗಿನ ಚಂದ್ರನಿಗೆ ಸಂಬಂಧಿ ಸಿದ ಭಾರತದ ಮಿಷನ್‌ಗಳಲ್ಲಿ ಅತ್ಯಂತ ಸಂಕೀರ್ಣ

ಕಾರ್ಯಾಚರಣೆ ಆಗಿರಲಿದೆ ಎಂದು ಅವರು ಸಂದರ್ಶನವೊಂದರಲ್ಲಿ ಹೇಳಿದರು. ಪ್ರಸಕ್ತ ವಿತ್ತ ವರ್ಷದ ಉಳಿದ ಅವಧಿಯಲ್ಲಿ ಇನ್ನೂ ಏಳು ಉಡಾವಣೆಗಳನ್ನು ನಡೆಸಲು ಇಸ್ರೋ ಸಜ್ಜುಗೊಂಡಿದೆ.

ಅವುಗಳಲ್ಲಿ ಒಂದು ವಾಣಿಜ್ಯಕ ಸಂವಹನ ಉಪಗ್ರಹ ಮತ್ತು ಹಲವು ಪಿಎಸ್‌ಎಲ್‌ವಿ

ಹಾಗೂ ಜಿವಿಎಲ್‌ವಿ ಮಿಷನ್‌ಗಳು ಸೇರಿವೆ ಎಂದು ನಾರಾಯಣನ್ ವಿವರಿಸಿದರು.

ದೇಶೀಯ ನಿರ್ಮಿತ ಪಿಎಲ್‌ವಿ ದೇಶದಲ್ಲೇ ನಿರ್ಮಿಸಿರುವ ಪ್ರಥಮ ಪಿಎಸ್ ಎಲ್‌ವಿ ಉಡಾವಣೆಯು ಒಂದು ಮೈಲಿಗಲ್ಲು ಸಾಧನೆಯ ಉಡಾವಣೆ ಆಗಲಿದೆ ಎಂದು ಇಸ್ರೋ ಮುಖ್ಯಸ್ಥರು ಹೇಳಿದರು. 202800 ಚಂದ್ರಯಾನ–4ನ್ನು ಉಡಾಯಿಸುವ ಗುರಿ ಇಟ್ಟುಕೊಳ್ಳಲಾಗಿದೆ ಎಂದರು. ಜಪಾನ್‌ನ ವೈಮಾಂತರಿಕ್ಷ ಸಂಶೋಧನಾ ಸಂಸ್ಥೆ (ಜಕ್ಸಾ) ಜತೆ ಸೇರಿ ಚಂದ್ರನ ದಕ್ಷಿಣ ಧ್ರುವ ಅವಿಷ್ಕಾರ ಕಾರ್ಯಕ್ರಮ ಲುಪೆಕ್ಸ್

ಇನ್ನೊಂದು ಮಹತ್ವದ ಮೈಲಿಗಲ್ಲು ಯೋಜನೆಯಾಗಿದೆ ಎಂದವರು ಹೇಳಿದರು. ಚಂದಿರನ ದಕ್ಷಿಣ ಧ್ರುವದ ಜಲ ಹಿಮದ ಅಧ್ಯಯನ ಲುಪೆಕ್ಸ್ ಉದ್ದೇಶವಾಗಿದೆ. ಭಾರತೀಯ ಬಾಹ್ಯಾಕಾಶ ನಿಲ್ದಾಣದ ಕೆಲಸ ಆರಂಭವಾಗಿದ್ದು 20235ರಲ್ಲಿ ಮುಗಿಯಲಿದೆ ಎಂದು ವಿವರಿಸಿದರು.

## ಚರ್ಚಾಸ್ಪರ್ಧೆ–ರಸಪ್ರಶ್ನೆ ವೈಚಾರಿಕತೆ ವೃದ್ಧಿಸುತ್ತವೆ



**ಚಿಕ್ಕಮಗಳೂರು:** ಕಾಲೇಜು ವಿದ್ಯಾರ್ಥಿಗಳಿಗೆ ಪಠ್ಯೇತರ ಚಟುವಟಿಕೆಗಳು ನಮ್ಮ ಸಂಸ್ಕೃತಿಯ ಅರಿವಿಗೆ ಬಹಳ ಮುಖ್ಯ. ಸಂಗೀತ, ನೃತ್ಯ ನಮ್ಮ ಸಂಸ್ಕೃತಿಯನ್ನು ತಿಳಿಸುವುದಲ್ಲದೆ, ಚರ್ಚಾಸ್ಪರ್ಧೆಗಳು ಮತ್ತು ರಸಪ್ರಶ್ನೆಗಳು ನಮ್ಮ ವೈಚಾರಿಕ ಮನೋಭಾವವನ್ನು ವೃದ್ಧಿಸುತ್ತವೆ ಎಂದು ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕಿ ಮಂಜುಳ ಕೆ. ತಿಳಿಸಿದರು.

ನಗರದ ಬೇಲೂರು ರಸ್ತೆಯಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ ನಡೆದ ಪದವಿ ಪೂರ್ವ ಕಾಲೇಜುಗಳ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಲಾಖೆಯ ನಿಯಮಾನುಸಾರ ನಡೆಯುವ ಈ ಸ್ಪರ್ಧೆಗಳಲ್ಲಿ ತಾಲ್ಲೂಕು, ಜಿಲ್ಲಾ, ವಿಭಾಗ ಹಾಗೂ ರಾಜ್ಯಮಟ್ಟಗಳ ಸ್ಪರ್ಧೆಗಳಿದ್ದು, ಮಕ್ಕಳನ್ನು ಪ್ರೋತ್ಸಾಹಿಸುವ ದೃಷ್ಟಿಯಲ್ಲಿ ನಗದು ಪುರಸ್ಕಾರ ಮತ್ತು ಪ್ರಮಾಣ ಪತ್ರಗಳನ್ನು ಪ್ರತೀ ಹಂತದಲ್ಲೂ ನೀಡಲಾಗುತ್ತಿದೆ. ಕಠಿಣ ಸಾಧನೆಯಿಂದ ಮಾತ್ರ ನಾವು ವಿಜಯಶಾಲಿಗಳಾಗಬಹುದು. ಕಾಟಾಚಾರದ ಭಾಗವಹಿಸುವಿಕೆಯಿಂದ ಏನೂ ಪ್ರಯೋಜನವಿಲ್ಲ ಎಂದು ಅವರು ನುಡಿದರು.

ಶಾಲಾ ಶಿಕ್ಷಣ ಇಲಾಖೆಯು (ಪದವಿ ಪೂರ್ವ) ಇತ್ತೀಚಿನ ವರ್ಷಗಳಲ್ಲಿ ಅತ್ಯಂತ ವಿದ್ಯಾರ್ಥಿ ಸ್ನೇಹಿ ಆಗಿದ್ದು, ಮಕ್ಕಳು ವಿವಿಧ ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಇದ್ದರೂ ಪರೀಕ್ಷೆಯನ್ನು ಎದುರಿಸಲು ಅನುಕೂಲವಾಗುವಂತೆ ಪ್ರಶ್ನೆ ಕೋಠಿ, ಪ್ರಶ್ನೆಪತ್ರಿಕೆಗಳ ನೀಲನಕ್ಷೆ, ಶೇ.100 ಅಂಕಗಳನ್ನು ಪಡೆದ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಇಲಾಖೆಯ ಜಾಲತಾಣ ಪೋರ್ಟಲ್‌ನಲ್ಲಿ ಪ್ರಕಟಿಸಿರುವುದು ವಿದ್ಯಾರ್ಥಿಗಳ ಪಾಲಿಗೆ ನಿಜಕ್ಕೂ ವರದಾನವಾಗಿದ್ದು, ನಿರಾತಂಕವಾಗಿ ಸರ್ವತೋಮುಖವಾಗಿ ಹೆಜ್ಜೆ ಹಾಕಲು ನೆರವಾಗುತ್ತಿದೆ ಎಂದರು. ಜಿಲ್ಲಾ ಪ.ಪೂ. ಕಾಲೇಜುಗಳ ಪ್ರಾಚಾರ್ಯರ ಸಂಘದ ಅಧ್ಯಕ್ಷ ಜೆ.ಜಿ.ಸುರೇಶ್ ಮಾತನಾಡಿ, ಇಲಾಖೆಯೊಂದಿಗೆ ನಮ್ಮ ಸಂಘವು ಸಂಪೂರ್ಣ ಸಹಕಾರ ನೀಡುತ್ತಿದೆ. ನಮ್ಮ ವಿದ್ಯಾರ್ಥಿಗಳೇ ನಮ್ಮ ಶಕ್ತಿ. ಅವರನ್ನು ಸರ್ವತೋಮುಖವಾಗಿ ರೂಪಿಸುವುದೇ ಉಪನ್ಯಾಸಕರ, ಪ್ರಾಚಾರ್ಯರ ಹಾಗೂ ಇಲಾಖೆಯ ಕರ್ತವ್ಯವಾಗಿದೆ ಎಂದು ನುಡಿದರು.

2022ನೇ ಸಾಲಿಗೆ ರಾಜ್ಯ ಸರ್ಕಾರದಿಂದ ಆಯ್ಕೆಯಾದ ಉತ್ತಮ ಚಲನಚಿತ್ರ ಸಂಗೀತ ನಿರ್ದೇಶಕ ಇಮ್ತಿಯಾಜ್ ಸುಲ್ತಾನ್ ಗುರು ಮತ್ತು ಶಿಷ್ಯರ ಬಾಂಧವ್ಯ ಹೇಗಿರಬೇಕು ಮತ್ತು ಗುರುವಿನ ಮಹತ್ವವೇನು ಎಂಬುದನ್ನು ಸಾರುವ ಗೀತೆಯನ್ನು ತಮ್ಮ ಸಿರಿಕಂಠದಿಂದ ಪ್ರಸ್ತುತಪಡಿಸಿ ಸಮಾರಂಭಕ್ಕೆ ಸಾಂಸ್ಕೃತಿಕ ಸಂಚಲನ ನೀಡಿದರು.

ಪ್ರಾಚಾರ್ಯರ ಸಂಘದ ನಿಕಟಪೂರ್ವ ಅಧ್ಯಕ್ಷೆ ತಸ್ನೀಮಾ ಫಾತಿಮಾ, ಮಾಜಿ ಅಧ್ಯಕ್ಷ ಕೆ.ಪಿ.ಉಮಾಮಹೇಶ್ವರಪ್ಪ, ಮಾಜಿ ಖಜಾಂಚಿ ನಾಗರಾಜರಾವ್ ಹೆಚ್.ಎಂ., ಹಾಲಿ ಖಜಾಂಚಿ ಸೋಮಶೇಖರ್, ಪ್ರಾಚಾರ್ಯರುಗಳಾದ ಸತೀಶ್ ಶಾಸ್ತ್ರಿ, ಲೋಲಾಕ್ಷಿ, ಪೂರ್ಣೇಶ್ ಮೊದಲಾದವರು ಉಪಸ್ಥಿತರಿದ್ದರು. ಉಪನ್ಯಾಸಕ ಮಂಜುನಾಥ್ ಸ್ವಾಗತಿಸಿದರು. ಚಂದ್ರಶೇಖರ್ ಆರ್.ಕೆ. ನಿರೂಪಿಸಿದರು. ಲಕ್ಷ್ಮೀ ಬಿ.ಎಸ್. ವಂದಿಸಿದರು.

ಭಾವಗೀತೆ, ಜನಪದ ಗೀತೆ, ಚರ್ಚಾಸ್ಪರ್ಧೆ, ಜನಪದ ನೃತ್ಯ, ರಸಪ್ರಶ್ನೆ, ಏಕಪಾತ್ರಾಭಿನಯ, ಚಿತ್ರಕಲೆ, ಪ್ರಬಂಧ ಮೊದಲಾದ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಉಪನಿರ್ದೇಶಕರು ಬಹುಮಾನ ವಿತರಿಸಿದರು.

## “ಜೇನು ಸಾಕಾಣಿಕೆ” ಕುರಿತು ಕೌಶಲ್ಯ ತರಬೇತಿ

**ಶಿವಮೊಗ್ಗ :** ಐ.ಸಿ.ಎ.ಆರ್.–ಕೃಷಿ ವಿಜ್ಞಾನಕೇಂದ್ರ, ಶಿವಮೊಗ್ಗದ ವತಿಯಿಂದ ಪರಿಶಿಷ್ಟ ಜಾತಿಉಪಯೋಜನೆಯಡಿಎರಡು ದಿನಗಳ “ಜೇನು ಕೃಷಿ” ಕುರಿತಕೌಶಲ್ಯಾಭಿವೃದ್ಧಿತರಬೇತಿಯನ್ನುಆಯೋಜಿಸ 'ಲಾಗುತ್ತಿದೆ. ಈ ತರಬೇತಿಯಲ್ಲಿಜೇನು ಸಾಕಾಣಿಕೆ, ವಿವಿಧಜೇನಿನ ಹುಳುಗಳು, ಜೇನಿನ ವಿವಿಧ ಉತ್ಪನ್ನಗಳು ಮತ್ತು ಬೆಳೆಗಳಲ್ಲಿ ಪರಾಗಸ್ಪರ್ಶಕುರಿತು ಪ್ರಾಯೋಗಿಕವಾಗಿ ತಿಳಿಸಿಕೊಡಲಾಗುವುದು. ಆದ್ದರಿಂದ ಈ ತರಬೇತಿಗೆ ಆಸಕ್ತ ಪರಿಶಿಷ್ಟ ಜಾತಿಯಯುವಕ/ಯುವತಿಯರು, ರೈತ ಮತ್ತುರೈತಮಹಿಳೆಯರು ದಿನಾಂಕ 30–11–2025 ರೊಳಗೆ ತಮ್ಮ ಹೆಸರನ್ನು ನೊಂದಾಯಿಸತಕ್ಕದ್ದು. ಮೊದಲು ಬಂದ 30 ಜನರಿಗೆಆದ್ಯತೆ.

## ಹಾವು ಕಚ್ಚಿ ಮಹಿಳೆ ಸಾವು

**ಜಗಳೂರು :** ಮೆಕ್ಕೆಜೋಳ ಕಟಾವು ಮಾಡಲು ಹೋಗಿದ್ದ ತಾಲೂಕಿನ ಖಿಲಾ ಕಣ್ವಕುಪ್ಪೆ ಗ್ರಾಮದ ರೈತ ಮಹಿಳೆಗೆ ಹಾವು ಕಚ್ಚಿ ಮೃತಪಟ್ಟಘಟನೆ ಭಾನುವಾರ ನಡೆದಿದೆ.

ಖಿಲಾಕಣ್ವಕುಪ್ಪೆ ಗ್ರಾಮದ ಸಿದ್ದಬಸಪ್ಪನ ಪತ್ನಿ ಗಂಗಮ್ಮ (35) ಮೃತ ಮಹಿಳೆ.

ಬೆಳಗ್ಗೆ ಜಮೀನಿನಲ್ಲಿ ಮೆಕ್ಕೆಜೋಳ ಕಟಾವು ಚಟುವಟಿಕೆಯಲ್ಲಿ ನಿರತವಾಗಿದ್ದವೇಳೆ ವಿಷಪೂರಿತ ಹಾವು ಕಚ್ಚಿದ್ದು, ಅಸ್ವಸ್ಥಗೊಂಡ ಮಹಿಳೆಯನ್ನು ಜಗಳೂರು ಸರಕಾರಿ ಆಸ್ಪತ್ರೆಗೆ ಕರೆದೊಯ್ಯುವಾಗ ಮಾರ್ಗಮಧ್ಯೆ ಸಾವನ್ನಪ್ಪಿದ್ದಾರೆ.

ಮೃತರಿಗೆ ಪತಿ, ಮೂವರು ಪುತ್ರಿಯರು, ಒಬ್ಬ ಪುತ್ರ ಇದ್ದಾರೆ. ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿತ್ತು. ಜಗಳೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕೆಪಿಸಿಸಿ ಎಸ್ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಂ.ಡಿ. ಕೀರ್ತಿಕುಮಾರ್ ಸ್ಥಳಕ್ಕೆ ತೆರಳಿ ಮೃತಳ ಕುಟುಂಬಕ್ಕೆ ಸಾಂತ್ವನ ಹೇಳಿ 25 ಸಾವಿರ ರೂ. ವೈಯಕ್ತಿಕ ಪರಿಹಾರ ನೀಡಿದ್ದಾರೆ.

## ಪಿಯುಸಿ ವಿದ್ಯಾರ್ಥಿಗಳಿಗೆ ಸಿಇಟಿ ಮತ್ತು ಎನ್‌ಇಇಟಿ ಅತಿ ಮುಖ್ಯವಾದ ಘಟ್ಟಗಳಾಗಿವೆ



**ಚಿತ್ರದುರ್ಗ :** ಪಿಯುಸಿ ವಿದ್ಯಾರ್ಥಿಗಳಿಗೆ ಸಿಇಟಿ ಮತ್ತು ಎನ್‌ಇಇಟಿ ಅತಿ ಮುಖ್ಯವಾದ ಘಟ್ಟಗಳಾಗಿವೆ. ಇವು ನಿಮ್ಮ ಮುಂದಿನ ಜೀವನವನ್ನು ನಿರ್ಧಾರ ಮಾಡುವಂತ ತಿರುವುಗಳಾಗಿವೆ, ಇದರಲ್ಲಿ ಸರಿಯಾದ ರೀತಿಯಲ್ಲಿ ಶ್ರದ್ದೆಯಿಂದ ಅಭ್ಯಾಸವನ್ನು ಮಾಡಿ ತರಗತಿಗಳಿಗೆ ಗೈರು ಹಾಜರಾಗದಂತೆ ಸಂಪನ್ಮೂಲ ವ್ಯಕ್ತಿಗಳು ತಿಳಿಸಿದ ವಿಷಯವನ್ನು ಚನ್ನಾಗಿ ಅರಿತು ಪರೀಕ್ಷೆಯನ್ನು ಬರೆಯುವಂತೆ ವಿದ್ಯಾರ್ಥಿಗಳಿಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಟಿ. ತಿಮ್ಮಯ್ಯ ಕರೆ ನೀಡಿದರು.

ಚಿತ್ರದುರ್ಗ ನಗರದ ಗಾರೆಹಟ್ಟಿಯಲ್ಲಿನ ಎಸ್.ಜೆ.ಎಂ ವಿದ್ಯಾಪೀಠ, ಶಾಲಾ ಶಿಕ್ಷಣ ಇಲಾಖೆ, ಶ್ರೀ ಬೃಹನ್ಮಠ ಸಂಯುಕ್ತ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜಿನಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಕಾಲೇಜಿನ ಪ್ರಥಮ ಮತ್ತು ದ್ವಿತೀಯ ಪಿಯು ವಿದ್ಯಾರ್ಥಿಗಳಿಗಾಗಿ ಏರ್ಪಡಿಸಿದ್ದ ಸಿಇಟಿ ಹಾಗೂ ಎನ್.ಇ.ಇ.ಟಿ ತರಗತಿಗಳ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ಎರಡು ವರ್ಷ ನೀವುಗಳು ಕಷ್ಟವನ್ನು ಪಟ್ಟರೆ ಮುಂದಿನ ಜಿವನ ಪೂರ್ತಿಯಾಗಿ ಆರಾಮಾಗಿ ಇರಬಹುದಾಗಿದೆ ಆದರೆ ಈ ಎರಡು ವರ್ಷ ಮೋಜಿನಲ್ಲಿ ಕಳೆದರೆ ಮುಂದಿನ ನಿಮ್ಮ ಜೀವನ ಕಷ್ಟ ಪಡಬೇಕಾಗುತ್ತದೆ ಕಲಿಯುವ ಶ್ರದ್ದೆಯಿಂದ ಕಲಿಯವುದನ್ನು ಮಾತ್ರ ಮಾಡಿ ಬೇರೆದಕ್ಕೆ ಅವಕಾಶವನ್ನು ನೀಡಬೇಡಿ, ಕಠಿಣವಾದ ಪರಿಶ್ರಮದಿಂದ ಮಾತ್ರ ಸಾಧನೆಯನ್ನು ಮಾಡಲು ಸಾಧ್ಯವಿದೆ, ಪರಿಶ್ರಮ ಇರದಿದ್ದರೆ ಏನನ್ನು ಸಹಾ ಸಾಧನೆ ಮಾಡಲು ಆಗುವುದಿಲ್ಲ ಎಂದು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ನಾವುಗಳು ಕೆಲವೊಂದು ಸಮಯದಲ್ಲಿ ಕಿವುಡರಾಗಬೇಕಿದೆ ಬೇರೆಯವರ ಮಾತುಗಳಿಗೆ ಬೆಲೆಯನ್ನು ನೀಡದೆ ನಮ್ಮ ಗುರಿಯನ್ನು ಮುಟ್ಟುವಂತ ಧಾವಿಸಬೇಕಿದೆ,

ಕಷ್ಟ, ಬಡತನ ನಿಮ್ಮ ಸಾಧನೆಗೆ ದಾರಿ ದೀಪಗಳಾಗಬೇಕಿದೆ ನಮ್ಮಲ್ಲಿ ಸಾಶಧನೆ ಮಾಡಿರುವವರು ಬಹುತೇಕ ಬಡತನದಿಂದ ಬಂದವರೆ ಆಗಿದ್ದಾರೆ, ಬಡತನದಲ್ಲಿ ಹಸಿವಿನಲ್ಲಿ ಸಾಧನೆಯನ್ನು ಮಾಡುವ ಮನಸ್ಸು ಇರುತ್ತದೆ, ಅದರ ಸದುಪಯೋಗ ಆಗಬೇಕಿದೆ, ಶಿಕ್ಷಣದಿಂದ ಮಾತ್ರ ಏನನ್ನಾದರೂ ಸಾಧನೆಯನ್ನು ಮಾಡಲು ಸಾಧ್ಯವಿದೆ, ಅಕ್ಷರ ಕಲಿತವನಿಗೆ ಸಮಾಜದಲ್ಲಿ ಗೌರವ ಇರುತ್ತದೆ. ಸಮಯವನ್ನು ವ್ಯರ್ಥ ಮಾಡಬೇಡಿ ಸದುಯೋಗವನ್ನು ಪಡಿಸಿಕೊಳ್ಳಿ, ಸಾಧ್ಯವಾದಷ್ಟು ನಿಮ್ಮ ಮೊಬೈಲ್ಗಳಿಂದ ದೂರ ಇರಿ ಅಗತ್ಯಕ್ಕೆ ತಕ್ಕಂತೆ ಮಾತ್ರ ಬಳಕೆ ಮಾಡಿ ಮಿಕ್ಕ ಸಮಯವನ್ನು ಅಭ್ಯಾಸದಲ್ಲಿ ತಲ್ಲಿನರಾಗಿ, ಪುಸ್ತಕ ಓದುವುದರಿಂದ ನಮ್ಮ ಜ್ಞಾನ ಹೆಚ್ಚಾಗುತ್ತದೆ ಮೊಬೈಲ್ ನೋಡುವುದರಿಂದ ನಮಗೆ ಏನು ಸಹಾ ಉಪಯೋಗವಾಗುವುದಿಲ್ಲ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಾಲಕರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಮೋಹನ್, ಇಂಡಿಪೆಂಡೆಟ್ ಪಿಯು ಕಾಲೇಜಿನ ಪ್ರಾಂಶುಪಾಲರಾದ ತಿಪ್ಪೇಸ್ವಾಮಿ, ಪೋಷಕರಾದ ರವಿ, ಸಂಪನ್ಮೂಲ ವ್ಯಕ್ತಿಗಳಾದ ನಯನರಾಣಿ, ಅನೂಪ್ ಗೌಡ ಭಾಗವಹಿಸಿದ್ದರು.

ಉಪನ್ಯಾಸಕರಾದ ಶ್ರೀಮತಿ ಮಾಲಾ ಪ್ರಾರ್ಥಿಸಿದರೆ, ರಾಜೇಶ್ ಸ್ವಾಗತಿಸಿದರು, ಉಪನ್ಯಾಸಕರಾದ ಶ್ರೀಮತಿ ರವಿಕಲಾ ಎಲ್. ಆರ್. ವಂದಿಸಿದರು, ಉಪನ್ಯಾಸಕರಾದ ಶ್ರೀಮತಿ ಬಿ.ಕೆ. ಹೇಮಲತಾ ಕಾರ್ಯಕ್ರಮ ನಿರೂಪಿಸಿದರು.

### ಯುವಚೇತನ ಸಮಾರೋಪ ಸಮಾರಂಭ

## ಸ್ಪರ್ಧಾತ್ಮಕ ಮನೋಭಾವ ಅಗತ್ಯ: ತಿಪ್ಪೇಸ್ವಾಮಿ




**ಚಿಕ್ಕಮಗಳೂರು :** ಯುವಜನರಲ್ಲಿ ಸ್ಪರ್ಧಾತ್ಮಕ ಮನೋಭಾವ ಬೆಳೆಯಬೇಕೆಂದು ಜಿಲ್ಲಾ ಪೊಲೀಸ್ ಉಪಮುಖ್ಯಾಧಿಕಾರಿ ತಿಪ್ಪೇಸ್ವಾಮಿ ಅಭಿಪ್ರಾಯಿಸಿದರು.

ಚಿಕ್ಕಮಗಳೂರು ರೋಟರಿ ಕ್ಲಬ್ ಆಯೋಜಿಸಿದ್ದ 'ಯುವಚೇತನ 2025–26'ರ ಮುಕ್ತಾಯ ಸಮಾರಂಭದಲ್ಲಿ ನಿನ್ನೆಸಂಜೆ ಅವರು ಸಮಾರೋಪ ಭಾಷಣ ಮಾಡಿದರು.

ಆಧುನಿಕತೆ ಆವಿಷ್ಕಾರಗಳ ಹಿನ್ನಲೆಯಲ್ಲಿ ಎಲ್ಲ ರಂಗಗಳಲ್ಲೂ ಇಂದು ಸ್ಪರ್ಧೆ ಏರ್ಪಟ್ಟಿದೆ. ವಿದ್ಯಾರ್ಥಿ ಯುವಜನರು ಸ್ಪರ್ಧೆಎದುರಿಸಲು ತಯಾರಿ ನಡೆಸಿ ಸಿದ್ಧರಾಗಬೇಕು. ಯುವ ಚೇತನದಂತಹ ವೇದಿಕೆಗಳನ್ನು ಬಳಸಿಕೊಳ್ಳಬೇಕು. ಆಸಕ್ತ ಕ್ಷೇತ್ರದಲ್ಲಿ ನಿರಂತರ ಪ್ರಯತ್ನ ಅಭ್ಯಾಸ ಆಸಕ್ತಿ, ಪರಿಶ್ರಮ ಸಾಧನೆಗೆ ಮೆಟ್ಟಿಲುಗಳು ಎಂದರು.

ಯುವಕರು ದೇಶದ ಶಕ್ತಿ. ಸನ್ಮಾರ್ಗದಲ್ಲಿ ಯುವಜನರನ್ನು ಸಮಾಜ ಪೋಷಿಸಿ ಬೆಳೆಸಿದರೆ ಅವರು ದೇಶಕ್ಕೆ ಆಸ್ತಿಯಾಗುತ್ತಾರೆ. ಇದರಿಂದ ಸದೃಢಸಮಾಜ ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಸಹಕಾರಿಯಾಗುತ್ತದೆ ಎಂದ ತಿಪ್ಪೇಸ್ವಾಮಿ, ಮನೆಯೆ ಮೊದಲ ಪಾಠಶಾಲೆ. ಮೊದಲ ಕಲಿಕೆ ಆರಂಭವಾಗುವುದು ಮನೆಯಿಂದಲೇ ಎಂಬುದನ್ನು ಪೋಷಕರು ನೆನಪಿನಲ್ಲಿಟ್ಟುಕೊಳ್ಳಬೇಕು ಎಂದರು.

ಮುಂದೆ ಗುರಿ ಹಿಂದೆ ಗುರು ಇದ್ದಾಗ ಸಾಧನೆ ಸಾಧ್ಯ. ಹಿಂದೆಲ್ಲ ಗುರುವೇ ನಮಃ ಎನ್ನಲಾಗುತ್ತಿತ್ತು. ಆದರೆ ಬದಲಾದ ಕಾಲಘಟ್ಟದಲ್ಲಿ ಇಂದು ಗುರು ಏನು ಮಹಾ ಎನ್ನುವಂತಾಗಿದೆ. ಜವಾಬ್ದಾರಿಯುತ ಪ್ರಜೆಗಳಾಗಿ ಹಿರಿಯರು ವರ್ತಿಸಬೇಕು. ಮಕ್ಕಳಿಗೆ ಆದಷ್ಟು ಮೊಬೈಲ್ ಕೊಡಬಾರದು. ಗೊತ್ತಿಲ್ಲದ ಅಪ್ಲಿಕೇಷನ್ ಬಳಕೆ ಬೇಡ. ಇದರಿಂದ ಲಕ್ಷಾಂತರ ರೂಪಾಯಿ ಕಳೆದಕೊಂಡ ಉದಾಹರಣೆಗಳಿವೆ ಎಂದ ಡಿವೈಎಸ್‌ಪಿ ತಿಪ್ಪೇಸ್ವಾಮಿ, ಮೊಬೈಲ್‌ನಲ್ಲಿ ವೈಯಕ್ತಿಕ ಫೋಟೋಗಳನ್ನು ಹಾಕುವುದು ಬೇಡ ಎಂದು ಸಲಹೆ ಮಾಡಿದರು.

ಸೈಬರ್ ಅಪರಾಧಗಳು ಹೆಚ್ಚಾಗುತ್ತಿವೆ. ಸುಶಿಕ್ಷಿತರೇ ಹೆಚ್ಚು ಇದರಲ್ಲಿ ಬಲಿಯಾಗು ತ್ತಿರುವುದು ವಿಷಾದನೀಯ. ಅಪರಿಚಿತರ ಕರೆಗಳಿಗೆ ಮಾತೃಭಾಷೆಯಲ್ಲೆ ಉತ್ತರಿಸುವುದನ್ನು ಅಭ್ಯಾಸ ಮಾಡಿದರೆ ಅರ್ಧದಷ್ಟು ತೊಂದರೆಗೊಳಗಾಗುವುದು ತಪ್ಪುತ್ತದೆ. ಹಿಂದಿ ಅಥವಾ ಇಂಗ್ಲೀಷ್‌ನಲ್ಲಿ ಮಾತನಾಡುತ್ತಾ ಒಂದುರೀತಿಯಲ್ಲಿ ಹಿಪ್ನೋಟೈಸ್ ಮಾಡುತ್ತಾರೆ. ಅಪರಿಚಿತ ಹೇಳುವ ಮಾತುಗಳು ನಂಬಿ ಮೋಸ ಹೋಗುವ ಸಂದರ್ಭಗಳು ಹೆಚ್ಚಾಗುತ್ತಿದ್ದು ಇದೇ ಟ್ರೇಂಡಿಂಗ್ ಸೈಬರ್ ಅಪರಾಧ ಎಂದ ತಿಪ್ಪೇಸ್ವಾಮಿ, ಮುನ್ನಚ್ಚರಿಕೆ ನಂತರದ ಅಪಾಯವನ್ನು ತಡೆಗಟ್ಟುತ್ತದೆ ಎಂದರು.

ರೋಟರಿ ಕಾರ್ಯದರ್ಶಿ ಹರ್ಷಿತ್ ಡಿ.ವಸಿಷ್ಟ ರೋಟರಿ ಒಂದು ಸಂಸ್ಥೆಯಲ್ಲ ಜನಪರ ಆಂದೋಲನ. ಸೇವೆ ಒಟ್ಟಾಗಿ ಕಾರ್ಯನಿರ್ವಹಿಸುವ ಸೌಹಾರ್ದ ಸಾಮರಸ್ಯವನ್ನು ಬೆಳೆಸುವ ಆಂದೋಲನ. ಚಿಕ್ಕಮಗಳೂರಿನಲ್ಲೂ ರೋಟರಿ ನಿರಂತರವಾಗಿ ಅನೇಕ ಜನಪರ ಕಾರ್‍ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದ್ದು, ಜೀವನಸಂಧ್ಯಾ ಹೆಮ್ಮೆಯ ಯೋಜನೆಯಾಗಿದ್ದು ಬಾಳಸಂಜೆಯ 60ವೃದ್ಧರಿಗೆ ಆಶ್ರಯತಾಣವಾಗಿದೆ. ಕಣ್ಣಿನ ಆಸ್ಪತ್ರೆಯೂ ವಿಶೇಷ ಸೇವೆಗೆ ಹೆಸರಾಗಿದೆ ಎಂದರು.

ರೋಟರಿ ಯುವಸೇವಾ ವಿಭಾಗದ ಜಿಲ್ಲಾನಿರ್ದೇಶಕ ಫಣೀಂದ್ರನಾಡಿಗ್ ಮಾತನಾಡಿ ಯುವಚೇತನ ಜಿಲ್ಲೆಯಲ್ಲೆ ಪ್ರತಿಷ್ಠಿತ ಯೋಜನೆ. ಕಳೆದ 34ವರ್ಷಗಳಿಂದ ನಿರಂತರವಾಗಿ ಯುವಕರಿಗೆ ಉತ್ತಮ ವೇದಿಕೆಯಾಗಿದೆ. ಯುವಕರೆ ದೇಶದ ಆಧಾರಸ್ತಂಭವಾಗಿದ್ದು ಅವರಲ್ಲಿ ಪ್ರೇರಣೆ, ಪ್ರೋತ್ಸಾಹ ನೀಡುವಲ್ಲಿ ಸಹಕಾರಿಯಾಗಿದೆ ಎಂದರು.

ಯುವಚೇತನ ಉಪಸಮಿತಿ ಅಧ್ಯಕ್ಷ ಎಂ.ಎಸ್.ಕಿಶನ್, ಸಹಅಧ್ಯಕ್ಷ ಮನೋಜ್‌ಬೈಸಾನಿ, ನಿ.ಪೂ.ಅಧ್ಯಕ್ಷ ಎಂ.ಎಲ್.ಸುಜಿತ್, ಪ್ರಾಯೋಜಕ ತಿಮ್ಮಯ್ಯ ಮತ್ತಿತರರು ಮಾತನಾಡಿದರು.

## ವಿವಾಹಿತ ಸ್ತ್ರೀಯ ಲಿವ್–ಇನ್‌ಗೆ ರಕ್ಷಣೆ ಸಾಧ್ಯವಿಲ್ಲ

**ಅಲಹಾಬಾದ್:** ಹಿಂದೂ ವಿವಾಹ ಕಾಯ್ದೆಯಡಿ ವಿವಾಹವಾದ ಮಹಿಳೆಯು ಇನ್ನೊಬ್ಬನ ಜತೆ ಲಿವ್–ಇನ್ ಸಂಬಂಧ ಹೊಂದುವ ಉದ್ದೇಶಕ್ಕೆ ನ್ಯಾಯಾಲಯ ದಿಂದ ರಕ್ಷಣೆ ಕೋರಲು ಸಾಧ್ಯವಿಲ್ಲ ಎಂದು ಅಲಹಾಬಾದ್ ಹೈಕೋರ್ಟ್ ಶನಿವಾರ ಹೇಳಿದೆ. ತನ್ನ ಸಹಜೀವನ ಪಾಲುದಾರನೊಂದಿಗೆ ಜೀವನ ನಡೆಸಲು ಅವಕಾಶ ಕೊಡಬೇಕು.

ಪೊಲೀಸರು ಮತ್ತು ಪತಿಯ ಹಸ್ತಕ್ಷೇಪದಿಂದ ರಕ್ಷಣೆ ನೀಡಬೇಕು ಎಂದು ಕೋರಿ ಸೋನಂ ಎಂಬ ಮಹಿಳೆ ಸಲ್ಲಿಸಿದ ಅರ್ಜಿಯನ್ನು ನ್ಯಾಯಾಲಯವು ತಿರಸ್ಕರಿಸಿದೆ.

ಹಿಂದೂ ವಿವಾಹ ಕಾಯ್ದೆಯಡಿ ವಿವಾಹವಾದ ಯಾವುದೇ ವ್ಯಕ್ತಿಗೆ ಅಕ್ರಮ ಸಂಬಂಧಕ್ಕಾಗಿ ನ್ಯಾಯಾಲಯದ ರಕ್ಷಣೆ ನೀಡಲು ಸಾಧ್ಯವಿಲ್ಲ.

ಇಂತಹ ಸಂಬಂಧಗಳಿಗೆ ಪೊಲೀಸ್ ರಕ್ಷಣೆ ನೀಡುವುದು ಪರೋಕ್ಷವಾಗಿ ಅಕ್ರಮ ಸಂಬಂಧಗಳಿಗೆ ನಮ್ಮ ಒಪ್ಪಿಗೆಯನ್ನು ನೀಡುವಂತಾಗುತ್ತದೆ. ಪತಿಯೊಂದಿಗಿನ ಭಿನ್ನಾಭಿಪ್ರಾಯಗಳಿದ್ದರೆ ಮೊದಲು ಕಾನೂನುಬದ್ಧವಾಗಿ ವಿಚ್ಛೇದನ ಪಡೆಯಬೇಕು ಎಂದು ಕೋರ್ಟ್ ಹೇಳಿದೆ.

## ಬಿಹಾರದಲ್ಲಿ ದಾಖಲೆ ಮತದಾನ ಮೋದಿ–ನಿತೀಶ್ ಮೇಲಿನ ನಂಬಿಕೆಗೆ ಸಾಕ್ಷಿ: ಪ್ರಧಾನಿ

**ಔರಂಗಾಬಾದ್:** ಬಿಹಾರ ವಿಧಾನಸಭಾ ಚುನಾವಣೆಯ ಮೊದಲ ಹಂತದಲ್ಲಿ ದಾಖಲೆಯ ಮತದಾನವಾಗಿರುವುದು ಜನ “ನರೇಂದ್ರ ಮೋದಿ ಮತ್ತು ನಿತೀಶ್ ಕುಮಾರ್ ಅವರ ಟ್ರಾಕ್ ರೆಕಾರ್ಡ್” ಮೇಲೆ ನಂಬಿಕೆ ಇಟ್ಟಿದ್ದಾರೆ ಎಂಬುದಕ್ಕೆ ಸಾಕ್ಷಿಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಪ್ರತಿಪಾದಿಸಿದ್ದಾರೆ.

ಬಿಹಾರದ ಕೈಮೂರ್ ಜಿಲ್ಲೆಯ ಔರಂಗಾಬಾದ್ ಮತ್ತು ಭಭುವಾದಲ್ಲಿ ಸತತ ಎರಡು ಚುನಾವಣಾ ರ್ಯಾಲಿಗಳನ್ನುದ್ದೇಶಿಸಿ ಮಾತನಾಡಿದ ಮೋದಿ, ಜೆಡಿ(ಯು) ಅಧ್ಯಕ್ಷ, ಮುಖ್ಯಮಂತ್ರಿ ನಿತೀಶ್ ಕುಮಾರ್ ನೇತೃತ್ವದ ಎನ್‌ಡಿಎ ಗೆಲುವು ಸಾಧಿಸಲಿದೆ ಎಂದು ಭವಿಷ್ಯ ನುಡಿದರು.

ನಿನ್ನೆ ಮೊದಲ ಹಂತದಲ್ಲಿ 121 ಕ್ಷೇತ್ರಗಳಲ್ಲಿ ಮತದಾನವನ್ನು ಯಶಸ್ವಿಯಾಗಿ ನಡೆಸಿದ್ದಕ್ಕಾಗಿ ಚುನಾವಣಾ ಆಯೋಗವನ್ನು ಶ್ಲಾಘಿಸಿದ ಪ್ರಧಾನಿ ಮೋದಿ, “ನಾನು ಭರವಸೆ ನೀಡಿದ್ದನ್ನು ಮಾಡುತ್ತೇನೆ” ಎಂಬುದಕ್ಕೆ ರಾಮ ಮಂದಿರ ನಿರ್ಮಾಣ, 370ನೇ ವಿಧಿ ರದ್ದು ಮತ್ತು ಆಪರೇಷನ್ ಸಿಂಧೂರ್ ಉದಾಹರಣೆಯಾಗಿ ನೀಡಿದರು.

“ನಿನ್ನೆ, ಬಿಹಾರದ ಮತದಾರರು ಎಲ್ಲಾ ದಾಖಲೆಗಳನ್ನು ಮುರಿದ ಅತಿ ಹೆಚ್ಚು ಮತದಾನ ಮಾಡಿದ್ದಾರೆ. ರಾಜ್ಯದ ಇತಿಹಾಸದಲ್ಲಿ ಹಿಂದೆಂದೂ ಇಷ್ಟೊಂದು ಮತದಾನದ ಆಗಿಲ್ಲ. ಇದರ ಹೆಚ್ಚಿನ ಶ್ರೇಯಸ್ಸು ತಾಯಂದಿರು ಮತ್ತು ಸಹೋದರಿಯರಿಗೆ ಸಲ್ಲುತ್ತದೆ, ಅವರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಮತದಾನವನ್ನು ಶೇಕಡಾ 65 ಕ್ಕೆ ಏರಿಸಿದರು. ಅವರೆಲ್ಲರೂ ನರೇಂದ್ರ–ನಿತೀಶ್ ಅವರ ಸಾಧನೆಯ ಮೇಲೆ ನಂಬಿಕೆ ಇಟ್ಟಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗಿದೆ” ಎಂದು ಮೋದಿ ಹೇಳಿದರು.

ಬಿಹಾರದಲ್ಲಿ ಉತ್ತಮ ಆಡಳಿತ ಖಾತರಿಪಡಿಸುವ ಎನ್‌ಡಿಎ ಸರ್ಕಾರ ಮತ್ತೆ ಅಧಿಕಾರಕ್ಕೆ ಬರಬೇಕು ಎಂದು ಜನ ಮತ ಚಲಾಯಿಸಿದ್ದಾರೆ ಎಂದು ಪ್ರಧಾನಿ ಹೇಳಿದರು.

## ಆಹಾರ ಮೇಳ ಮತ್ತು ವಿಜ್ಞಾನ ವಸ್ತು ಪ್ರದರ್ಶನ



**ನ್ಯಾಮತಿ:** ತಾಲೂಕಿನ ಬೆಳಗುತ್ತಿ– ಮಲ್ಲಿಗೆನಹಳ್ಳಿ ಗ್ರಾಮಗಳ ಸರಕಾರಿ ಪ್ರೌಢಶಾಲೆಯಲ್ಲಿ ಶನಿವಾರ ಆಹಾರ ಮೇಳ ಮತ್ತು ವಿಜ್ಞಾನ ವಸ್ತು ಪ್ರದರ್ಶನವನ್ನು ಆಯೋಜಿಸಲಾಗಿದ್ದು ಗ್ರಾಮದ ಹಾಗೂ ಅಕ್ಕ ಪಕ್ಕದ ಗ್ರಾಮಗಳ ಸಾರ್ವಜನಿಕರು ಮತ್ತು ಇತರೆ ಶಾಲೆಗಳ ವಿದ್ಯಾರ್ಥಿಗಳು ವೀಕ್ಷಣೆ ಮಾಡಿ , ಮೇಳದಲ್ಲಿ ಶಾಲಾ ಮಕ್ಕಳಿಂದ ತಯಾರಿಸಿದ ಆಹಾರ ಖಾದ್ಯಗಳನ್ನು ಮಕ್ಕಳಿಂದ ಖರೀದಿ ಮಾಡಿ ಸಾರ್ವಜನಿಕರು ಸೇವಿಸಿದರು.

# ಬೆಲೆ ಏರಿಕೆ, ಭತ್ತ, ಮೆಕ್ಕೆಜೋಳ ಬೆಲೆ ಕುಸಿತ

## ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಎಲ್ಲಾ ಹೋಬಳಿ, ತಾಲೂಕು ಕೇಂದ್ರಗಳನ್ನು ಬಂದ್



**ನ್ಯಾಮತಿ :** ಬೆಲೆ ಏರಿಕೆ, ಭತ್ತ, ಮೆಕ್ಕೆಜೋಳ ಬೆಲೆ ಕುಸಿತ, ರಸ್ತೆ ಗುಂಡಿಗಳಿಂದ ಮುಕ್ತಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ರಾಜ್ಯ ಸರ್ಕಾರದ ವಿರುದ್ಧ ನವೆಂಬರ 18 ರ ಮಂಗಳವಾರ ಹೊನ್ನಾಳಿ ಮತ್ತು ನ್ಯಾಮತಿ ಅವಳಿ ತಾಲೂಕುಗಳ ಎಲ್ಲಾ ಹೋಬಳಿ, ತಾಲೂಕು ಕೇಂದ್ರಗಳನ್ನು ಬಂದ್ ಮಾಡಲಾಗುವುದು ಎಂದು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ತಿಳಿಸಿದ್ದಾರೆ.

ಅವರು ಶನಿವಾರ ಪಟ್ಟಣದಲ್ಲಿ ಬಿಜೆಪಿ ಮುಖಂಡರ ಕಾರ್ಯಕರ್ತರ ಪೂರ್ವಾಭಾವಿ ಸಭೆಯನ್ನು ನಡೆಸಿ ಮಾತನಾಡಿದರು.

ಕಾಂಗ್ರೆಸ್ ನೇತೃತ್ವದ ಸರಕಾರ ಬಂದಾಗಿನಿಂದ ಜನರಿಗೆ ನೆಮ್ಮದಿ ಇಲ್ಲದಂತಾಗಿದ್ದು ಮೆಕ್ಕೆಜೋಳ, ಭತ್ತಕ್ಕೆ ಬೆಂಬಲ ಬೆಲೆ ನೀಡಬೇಕು ತಕ್ಷಣವೇ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಬೇಕು, ಅರ್ಹ ಬಿಪಿಎಲ್ ಫಲಾನುಭವಿಗಳ ಕಾರ್ಡ್‌ಗಳನ್ನು ರದ್ದು ಪಡಿಸಬಾರದು ಬಡ ಫಲಾನುಭವಿಗಳ ಆಶ್ರಯ ಮನೆಗಳ ಹಣವನ್ನು ತಕ್ಷಣವೇ ಬಿಡುಗಡೆ, ಗ್ರಾಮಗಳ ರಸ್ತೆ ಸೇರಿದಂತೆ ತಾಲೂಕು ಕೇಂದ್ರ, ಹಾಗೂ ಜಿಲ್ಲಾ ಕೇಂದ್ರಗಳನ್ನ ಸಂಪರ್ಕಿಸುವ ರಸ್ತೆಗಳು ಗುಂಡಿಗಳಿಂದ ಕೂಡಿದ್ದು ರಾಜ್ಯವು ಅಭಿವೃದ್ಧಿಯಿಂದ ವಂಚಿತವಾಗಿದ್ದು ರಾಜ್ಯ ಸರಕಾರ ನಿರ್ಲಕ್ಷ್ಯ ಧೋರಣೆಯನ್ನು ಖಂಡಿಸಿ ನವೆಂಬರ 18 ರ ಮಂಗಳವಾರ ಹೊನ್ನಾಳಿ, ನ್ಯಾಮತಿ ಬಿಜೆಪಿ ಮುಖಂಡರು ಕಾರ್ಯಕರ್ತರ ನೇತೃತ್ವದಲ್ಲಿ ಬಂದ್ ಮಾಡಲಾಗುವುದು ಬಂದ್ ಹಿನ್ನಲೆ ಅವಳಿ ತಾಲೂಕಿನ ಹೋಬಳಿ, ನ್ಯಾಮತಿ, ಹೊನ್ನಾಳಿ ಕೇಂದ್ರಗಳ ರೈತರು ಸಾರ್ವಜನಿಕರು, ಶಾಲಾ–ಕಾಲೇಜು, ಬಸ್, ಆಟೋ, ಹೋಟೆಲ್, ಟ್ಯಾಕ್ಸಿ ಮಾಲೀಕರು, ವರ್ತಕರು ಸಹಕರಿಸುವಂತೆ ಮನವಿ ಮಾಡಿದರು.

ಪೂರ್ವ ಸಭೆಯಲ್ಲಿ ಮುಖಂಡರಾದ ಎಸ್.ಪಿ.ರವಿಕುಮಾರ್, ಕರಿಬಸಪ್ಪ, ಸೋಮಶೇಖರ್ ಬಳ್ಳಾರಿ, ರಮೇಶ್, ಸದಶಿವಪ್ಪ, ಕುಮಾರ್ ಸೇರಿದಂತೆ ಇತರರು ಇದ್ದರು.

# ಶ್ರವಣ & ವಾಕ ಬಾಧೆ ಇದ್ದರ್ೂ ಗುರಿ ಸಾಧಿಸಿರುವ ನೃತ್ಯಗಾರ್ತಿ



**ಚಿತ್ರದುರ್ಗ :** ಸಾಧನೆಗೆ ಅಂಗವಿಕಲತೆ ಅಡ್ಡಿ ಬರುವುದಿಲ್ಲ ಎನ್ನುವುದಕ್ಕೆ ಕು ಶ್ರೀಚಿತ್ರ ಆರ್‌ರವರು ಉದಾಹರಣೆಯಾಗಿದ್ದಾರೆ. ಇಂದಿನ ದಿನಮಾನದಲ್ಲಿ ದೇಹದ ಎಲ್ಲಾ ಅಂಗಳು ಸರಿಯಿದ್ದರು ಸಹಾ ಸಾಧನೆ ಮಾಡಲು ಮುಂದೆ ಬಾರದ ಜನತೆಗೆ ಶ್ರೀಚಿತ್ರ ಮಾದರಿಯಾಗಿದ್ದಾಳೆ, ಬೇರೆಯವರಿಗೆ ಸ್ಪೂರ್ತಿಯಾಗಿದ್ದಾಳೆ.

ಚಿತ್ರದುರ್ಗ ನಗರದ ಹೊಳಲ್ಕೆರೆ ರಸ್ತೆಯಲ್ಲಿನ ನೆಹರು ನಗರದಲ್ಲಿ ವಾಸವಾಗಿರುವ ರಮೇಶ್ ಸಿ. ಮತ್ತು ಶ್ರೀಮತಿ ಸಿ.ಆರ್. ವಿಜಯರವರ ಪುತ್ರಿ ಕು॥ ಶ್ರೀಚಿತ್ರ ಆರ್. ಆಲಿಸುವ ಮತ್ತು ಮಾತನಾಡುವ ಸಾಮರ್ಥ್ಯವಿಲ್ಲದಿದ್ದರೂ ತನ್ನ ಅಚಲ ಮನೋಬಲ, ಧೈರ್ಯ ಹಾಗೂ ಪರಿಶ್ರಮದ ಮೂಲಕ ನೃತ್ಯ ಕಲೆಯ ಅಂತರಂಗವನ್ನು ಅರಿತು ಅದರಲ್ಲಿ ನಿಪುಣತೆ ಸಾಧಿಸುತ್ತಿದ್ದಾಳೆ. ಕುಃ ಶ್ರೀಚಿತ್ರ ಆರ್. 10ನೇ ತರಗತಿಯವರೆಗೆ ಚಿತ್ರದುರ್ಗದ ಜ್ಞಾನವಿಕಾಸ ವಿದ್ಯಾಸಂಸ್ಥೆಯಲ್ಲಿ ಓದಿದ್ದು, ಪ್ರಸ್ತುತ ಚೈತನ್ಯ ಪದವಿಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿ.ಯು.ಸಿ. ಓದುತ್ತಿದ್ದಾಳೆ. ಈ ನಡುವೆಯೇ ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿಯ ಜ್ಯೂನಿಯರ್ ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣಗೊಂಡಿದ್ದು, ನೃತ್ಯವನ್ನು ಜೀವನದ ಭಾಗವನ್ನಾಗಿ ಮಾಡಿಕೊಂಡು ಸಂಸ್ಕೃತಿಯ ಮೌಲ್ಯಗಳನ್ನು ಜೀವಂತವಾಗಿಟ್ಟು ಕೊಂಡಿದ್ದಾಳೆ.

ನೃತ್ಯ ಕಲಾವಿದೆ ವಿದುಷಿ ಗುರು ಶ್ರೀಮತಿ ಶ್ವೇತಾ ಮಂಜುನಾಥ್ ಪ್ರೀತಿಯ ಶಿಷ್ಯ ನಯ–ವಿನಯ, ಸರಳ, ಸೌಜನ್ಯಯುತ ನಡವಳಿಕೆಯ ಕು ಶ್ರೀಚಿತ್ರ ಆರ್. ಭರತನಾಟ್ಯ ಕಲೆಯತ್ತ ಅಪಾರ ಆಸಕ್ತಿ ಹೊಂದಿದ್ದು ಅವರ ಪ್ರೇರಣೆ, ಸಹನೆ ಹಾಗೂ ನಿಷ್ಠಾವಂತ ಮಾರ್ಗದರ್ಶನದ ಅಡಿಯಲ್ಲಿ ಹಲವು ವರ್ಷಗಳಿಂದ ಭರತನಾಟ್ಯ ನೃತ್ಯಾಭ್ಯಾಸ ಮುಂದುವರೆಸಿದ್ದಾಳೆ.

ಚಿತ್ರದುರ್ಗದ ಪ್ರತಿಷ್ಠಿತ ನಾಟ್ಯ ಸಂಸ್ಥೆಯಾದ ಲಾಸಿಕಾ ಫೌಂಡೇಶನ್ ಕಲಾತಂಡದೊಂದಿಗೆ ಹಲವಾರು ವೇದಿಕೆಗಳಲ್ಲಿ ನೃತ್ಯ ಕಾರ್ಯಕ್ರಮ ನೀಡಿ ಕಲಾರಸಿಕರ ಪ್ರಶಂಸೆಗೆ ಪಾತ್ರಳಾಗಿ ರುತ್ತಾಳೆ.

ಇದೀಗ ನಾಟ್ಯ ಶಾಸ್ತ್ರದ ಸಂಪ್ರದಾಯದಂತೆ ಗುರು–ಹಿರಿಯರ ಸಮ್ಮುಖದಲ್ಲಿ ಭರತನಾಟ್ಯ ರಂಗ ಪ್ರವೇಶದ ಮುಖಾಂತರ ಗುರುವಂದನಾಪೂರ್ವಕ ಕಲಾರಾಧನೆಗೆ ಅಣಿಗೊಳ್ಳುತ್ತಿರುವ ಕುಃ ಶ್ರೀಚಿತ್ರ ಆರ್.ರವರ ಕಲಾ ಭವಿಷ್ಯಕ್ಕೆ ಈ ಕಾರ್ಯಕ್ರಮ ಮಹತ್ವದ ಮೈಲಿಗಲ್ಲಾಗಲಿದೆ.

ಈ ರಂಗಪ್ರವೇಶವು ಅವಳ ಪರಿಶ್ರಮ, ತ್ಯಾಗ ಮತ್ತು ಕನಸನ್ನು ಸಾಕಾರಗೊಳಿಸುವ ಕ್ಷಣವಾಗಿದ್ದು, ಗುರು–ಶಿಷ್ಯರ ಬಾಂಧವ್ಯಕ್ಕೆ ಗೌರವ ಸಲ್ಲಿಸುವ ಅಪೂರ್ವ ನೃತ್ಯ ಸಂಜೆಯಾಗಲಿದೆ.

ನ. 16ರ ಭಾನುವಾರ ಸಂಜೆ 6:30ಕ್ಕೆ ಜಿ.ಜಿ. ಸಮುದಾಯ ಭವನದಲ್ಲಿ ಭರತನಾಟ್ಯ ರಂಗಪ್ರವೇಶ ನಡೆಯಲಿದೆ. ಗುರು ಶ್ವೇತಾ ಭಟ್ ಅವರ ಮಾರ್ಗದರ್ಶನದಲ್ಲಿ ಸಾಧಿಸಿದ ಈ ಪಯಣ "ಅಂಗವೈಕಲ್ಯ ಅಡಚಣೆ ಅಲ್ಲ ಕಲೆ ಮನದ ಶಕ್ತಿ" ಎಂಬ ಸಂದೇಶವನ್ನು ಹೊತ್ತಿದೆ.

# 70ನೇ ಕನ್ನಡ ರಾಜ್ಯೋತ್ಸವ ಸಂಭ್ರಮ



**ದಾವಣಗೆರೆ :** ಪ್ರತಿವರ್ಷದಂತೆ ಈ ವರ್ಷವೂ ಸಹ 70ನೇ ಕನ್ನಡ ರಾಜ್ಯೋತ್ಸವವನ್ನು ತಾಯಿ ಶ್ರೀಭುವನೇಶ್ವರಿ ಭಾವಚಿತ್ರದೊಂದಿಗೆ ಜಾತಿ ಭೇದ ಭಾವ ಎಂಬುದನ್ನು ಮರೆತು ಈ ದಿನ ನೇತಾಜಿ ಸರ್ಕಲ್ ನಲ್ಲಿ ಅದ್ದೂರಿಯಾಗಿ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಅನನ್ಯ ಆಂಗ್ಲ ಮಾಧ್ಯಮ ಪ್ರೌಢಶಾಲಾ ಸಂಸ್ಥಾಪಕ ಅಧ್ಯಕ್ಷರಾದ ಗಿರೀಶ್ ಸರ್ ಹಾಗೂ ತುಂಗಾ ನಗರ ಪೊಲೀಸ್ ಠಾಣೆಯ ನಿರೀಕ್ಷಕರಾದ ಗುರುರಾಜ್ ಸರ್( ಸಿ ಪಿ ಐ) ಅವರು ಕೆಲಸದ ಒತ್ತಡ ಇದ್ದರೂ ಸಹ ಈ ಒಂದು ಕಾರ್ಯಕ್ರಮದಲ್ಲಿ ಭಾಗವಹಿಸಿದರು. ಗಣ್ಯದೊಂದಿಗೆ ಪ್ರಾರಂಭವಾದ ಈ ಒಂದು ರಾಜ್ಯೋತ್ಸವಕ್ಕೆ ವಿದ್ಯಾರ್ಥಿಗಳು ಹಾಗೂ ಸ್ಥಳೀಯ ಪ್ರಮುಖರಾದ ಪ್ರಫುಲ್ಲ ಚಂದ್ರ.ಎಚ್ (ಅಧ್ಯಕ್ಷರು ಎಪಿಎಂಸಿ ಆಟೋ ಚಾಲಕರ ಸಂಘ) ಹಾಗೂ ಸ್ಥಳೀಯರಾದ ಫಾರೂಕ್ ( ಸೇವಕರು ಸೇವಕರು ) ಅಮ್ಜದ್ ಖಾನ್ (ಲಾರಿ ಮಾಲೀಕರು) ವಿನೋದ ಅನಿಫಾ.ರಾಘು. ವಾಸು ಜಯರಾಮ (ಸೌಂಡ್ ಸಿಸ್ಟಮ್ ಮಾಲೀಕರು )ವಿನಾಯಕ (ಗುಜರಿ ಅಂಗಡಿ ಮಾಲೀಕರು ) ಹಾಗೂ ಆನಂದ್ ಅಣ್ಣ (ಡಿಎಸ್‌ಎಸ್ ನಗರ ಸಂಚಾಲಕರು )ಇನ್ನಿತರ ಪ್ರಮುಖರು ಈ ಒಂದು ಕಾರ್ಯಕ್ರಮದಲ್ಲಿ ನೇತಾಜಿ ಆಟೋ ನಿಲ್ದಾಣದ ಚಾಲಕರು ಭಾಗವಹಿಸಿದರು. ಈ ರಾಜ್ಯೋತ್ಸವ ಕ್ಕೆ ಸಂಬಂಧಪಟ್ಟಂತೆ ಗಿರೀಶ್ ಸರ್ ಅವರು ಧ್ವಜಾರೋಹಣ

ಮಾಡುವುದರ ಮೂಲಕ ಕನ್ನಡ ಭಾಷೆಗೆ ಸಂಬಂಧಪಟ್ಟಂತೆ ಮಹತ್ವದ ಮಾಹಿತಿಯನ್ನು ಉದ್ದೇಶಿಸಿ ಸಾರ್ವಜನಿಕರಿಗೆ ಅರಿವು ಮೂಡಿಸಿದರು. ಕನ್ನಡ ರಾಜ್ಯೋತ್ಸವ ನವೆಂಬರ್ ಒಂದಕ್ಕೆ ಸೀಮಿತವಾಗಿರಬಾರದು , ನಂಬರ್ ಒನ್ ಗೆ ಸೀಮಿತವನ್ನಾಗಿಸಬೇಕೆಂದು ಮಾಹಿತಿ ನೀಡಿದರು. ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ಹಾಗೂ ಸ್ಥಳೀಯರಿಗೆ ಸಿಹಿ ಹಂಚುವುದರ ಮೂಲಕ ಅದ್ದೂರಿ ಆಚರಣೆ ಮಾಡಲಾಯಿತು.

# ಎಸ್‌ಎಸ್‌ಐಟಿ ಕನ್ನಡ ರಾಜ್ಯೋತ್ಸವ: "ಸಂಸ್ಕೃತಿ" ತಂಡಕ್ಕೆ ಗೆಲುವು

**ತುಮಕೂರು:** ಎತ್ತ ನೋಡಿದರೂ ಕನ್ನಡ ಕಂಪಿನ ಸಿಂಗಾರ, ತುಂಬಿ ತುಳುಕುತ್ತಿದೆ ಕೆಂಪು ಹಳದಿಯ ಶೃಂಗಾರ, ವಿದ್ಯಾರ್ಥಿಗಳ ಮನದಲ್ಲಿ ತುಂಬಿ ಹರಿಯುತ್ತಿತ್ತು ನವೋಲ್ಲಾಸದ ಝೇಂಕಾರ ಇವೆಲ್ಲವೂ ಕಂಡು ಬಂದದ್ದು ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ.

ಹೌದು ಶ್ರೀ ಸಿದ್ಧಾರ್ಥ ತಾಂತ್ರಿಕ ಕಾಲೇಜಿಲ್ಲಿ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಸಂಭ್ರಮ ಸಡಗರದಿಂದ ಅದ್ದೂರಿಯಾಗಿ ಆಚರಣೆಮಾಡಲಾಯಿತು. ಈ ಒಂದು ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಗಳಾಗಿ ಆಗಮಿಸಿದ್ದ ವಿಶ್ರಾಂತ ಇತಿಹಾಸ ಪ್ರಾಧ್ಯಾಪಕರಾದ ಡಾ. ಸಿದ್ದಲಿಂಗಯ್ಯ, ಎಸ್ ಎಸ್ ಐಟಿ ಕಾಲೇಜಿನ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂಎಸ್ ರವಿಪ್ರಕಾಶ್, ಅಕಾಡೆಮಿಕ್ ಡೀನ್ ಎಸ್ ರೇಣುಕಾಲತಾ, ಹಾಗೂ ಎಲ್ಲಾ ಪ್ರಧ್ಯಾಪಕರ ಸಮ್ಮುಕದಲ್ಲಿ ಕನ್ನಡದ ಬಾವುಟದ ಧ್ವಜಾರೋಹಣವನ್ನು ನೆರವೇರಿಸಲಾಯಿತು. ನಂತರ ಕಾಲೇಜಿನ ಎಚ್‌ಎಂಜಿ ಸರ್ಕಲ್‌ನಲ್ಲಿ ಗರಿಗೆದರಿದ ಸಾಂಸ್ಕೃತಿಕ ಕಾರ್ಯಕ್ರಮಗಳು ಅಲ್ಲಿದ್ದವರನ್ನು ತನ್ನೆಡೆಗೆ ಸೆಳೆಯಿತು. ಕನ್ನಡ ಭಾಷೆ ನಾಡು ನುಡಿಯ ಕುರಿತ ನೃತ್ಯ, ಸಂಗೀತ, ಭರತನಾಟ್ಯ, ಜಾನಪದ ಕುಣಿತ ಕಲೆಗಳು ವಿದ್ಯಾರ್ಥಿಗಳನ್ನು ರಂಜಿಸಿದವು.




ಕನ್ನಡ ರಾಜ್ಯೋತ್ಸವದ ಅಂಗವಾಗಿ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗಾಗಿ ಗಾಯನ, ನೃತ್ಯ, ಬೀದಿ ನಾಟಕ, ಏಕಪಾತ್ರಾಭಿನಯ, ಚರ್ಚಾಸ್ಪರ್ಧೆ ರಂಗೋಲಿ, ಮೆಹಂದಿ, ಛಾಯಾಗ್ರಹಣ, ಕವಿತೆ ವಾಚನ ಸೇರಿದಂತೆ ಹಲವು ಬಗೆಯ ಸ್ಪರ್ಧೆಯಗಳನ್ನು ಆಯೋಜಿಸಲಾಗಿತ್ತು. ಈ ಎಲ್ಲಾ ಸ್ಪರ್ಧೆಗಳಲ್ಲಿ ಕಾಲೇಜಿನ ಎರಡು ಸಾಂಸ್ಕೃತಿಕ ತಂಡಗಳಾದ ಸಂಸ್ಕೃತಿ ಮತ್ತು ಐಕ್ಯ ತಂಡದ ಸದಸ್ಯರೆಲ್ಲರೂ ಬಹಳ ಉತ್ಸಾಹದಿಂದ ಪಾಲ್ಗೊಂಡು ಸ್ಪರ್ಧೆಗಳನ್ನು ಯಶಸ್ವಿಗೊಳಿಸಿದರು.

ಸಮಾರೋಪ ಸಮಾರಂಭಕ್ಕೆ ಮುಖ್ಯ ಅಥಿತಿಯಾಗಿ ಆಗಮಿಸಿದ್ದ ಖ್ಯಾತ ಚಲನಚಿತ್ರ ಹಿನ್ನಲೆ ಗಾಯಕಿ ಮಾನಸ ಹೊಳ್ಳ ತಮ್ಮ ಸುಮಧುರ ಗಾಯನದ ಮೂಲಕ ಎಲ್ಲರನ್ನು ರಂಜಿಸಿದರು.

ಇನ್ನು ಕನ್ನಡರಾಜ್ಯೋತ್ಸವದ ಪ್ರಯುಕ್ತ ನಡೆದಂತಹ ಎಲ್ಲಾ ಸ್ಪರ್ಧೆಗಳಲ್ಲಿ ಉತ್ತಮ ಸ್ಪರ್ಧೆಯನ್ನು ನೀಡಿ ಸಂಸ್ಕೃತಿ ತಂಡ ವಿಜಯಶಾಲಿಗಳಾದರೆ ಎರಡನೇ ಸ್ಥಾನವನ್ನು ಐಕ್ಯ ತಂಡ ಪಡೆದುಕೊಂಡಿತು. ಈ ತಂಡಗಳಿಗೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಎಂ.ಎಸ್ ರವಿಪ್ರಕಾಶ್ ರವರು ಪ್ರಶಸ್ತಿಯನ್ನು ಪ್ರಧಾನ ಮಾಡಿದರು.

ಇನ್ನು ಮುಖ್ಯ ಅಥಿತಿಯಾಗಿ ಆಗಮಿಸಿದ್ದ ಖ್ಯಾತ ಗಾಯಕಿ ಮಾನಸ ಹೊಳ್ಳರವರಿಗೆ ಕಾಲೇಜಿನ ಪರವಾಗಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಅಕಾಡೆಮಿಕ್ ಡೀನ್ ಡಾ. ರೇಣುಕಾಲತಾ, ಕಾರ್ಯಕ್ರಮ ಸಂಚಾಲಕರಾದ ಡಾ.ಪ್ರದೀಪ್ ಹಾಗೂ ಎಲ್ಲಾ ವಿಭಾಗದ ಮುಖ್ಯಸ್ಥರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## ಯಂತ್ರಕ್ಕೆ ಸಿಲುಕಿ ರೈತ ಸಾವು

**ಜಗಳೂರು:** ರೈತ ತನ್ನ ಜಮೀನಿನಲ್ಲಿ ಬೆಳೆದಿದ್ದ ಮೆಕ್ಕೆಜೋಳ ಕಟಾವು ನಂತರ ಟ್ರ್ಯಾಕ್ಟರ್‌ನಲ್ಲಿ ರೂಟರ್ ಯಂತ್ರದ ಮೂಲಕ ಜಮೀನು ಹಸನುಗೊಳಿಸುವಾಗ ರೂಟರ್ ಯಂತ್ರಕ್ಕೆ ಸಿಲುಕಿ ಮೃತಪಟ್ಟಿರುವ ಘಟನೆ ತಾಲೂಕಿನ ದಿದ್ದಿಗೆ ಗ್ರಾಮದಲ್ಲಿ ಭಾನುವಾರ ನಡೆದಿದೆ.

ದಿದ್ದಿಗೆ ಗ್ರಾಮದ ರೈತ ನಾರಪ್ಪ(30) ಮೃತ ದುರ್ದೈವಿ. ಚಾಲಕ ಹಿಂಬದಿಯಲ್ಲಿ ಕುಳಿತಿದ್ದಾಗ ಕಾಲು ಜಾರಿ ರೂಟರ್ ಯಂತ್ರಕ್ಕೆ ಸಿಲುಕಿ ಸಾವನ್ನಪ್ಪಿದ್ದಾರೆ.

ಜಗಳೂರು ತಾಲೂಕು ದಿದ್ದಿಗೆಯಲ್ಲಿ ಘಟನೆ

ಜಮೀನು ಹದಗೊಳಿಸುವ ಸಲುವಾಗಿ ಟ್ರ್ಯಾಕ್ಟರ್ ಮತ್ತು ರೂಟರ್ ಯಂತ್ರವನ್ನು ಬಾಡಿಗೆ ತಂದು ಸ್ವಚ್ಛಗೊಳಿಸುವಾಗ ಚಾಲಕ ಓಡಿಸುತ್ತಿದ್ದಾಗ ಪಕ್ಕದಲ್ಲೇ ಕುಳಿತಿದ್ದರು. ಕ್ಷಣಾರ್ಧದಲ್ಲೇ ರೈತ ಕಾಲು ಜಾರಿ ಕೆಳಗೆ ಬಿದ್ದಿದ್ದಾರೆ. ರೈತ ಕೆಳಗೆ ಬಿದ್ದಿದ್ದನ್ನು ಗಮನಿಸದ ಚಾಲಕ ಜೋರಾಗಿ ಚಾಲನೆ ಮಾಡಿದ ಪರಿಣಾಮ ಇಡೀ ದೇಹ ರೂಟರ್ ಯಂತ್ರದಲ್ಲಿ ಸಿಲುಕಿ ತಲೆ ಮತ್ತು ದೇಹದ ಭಾಗಗಳು ಛಿದ್ರವಾಗಿದ್ದು, ನಾರಪ್ಪ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

ಸ್ಥಳದಲ್ಲಿ ಆಕ್ರಂದನ:

ನಾರಪ್ಪ ಸಾವನ್ನಪ್ಪಿದ ಸುದ್ದಿ ತಿಳಿಯುತ್ತಿದ್ದಂತೆ ಇಡೀ ಗ್ರಾಮದ ಜನರೇ ಸ್ಥಳಕ್ಕೆ ಬಂದು ಮಮ್ಮಲ ಮರುಗಿದರು. ಅಚಾನಕ್ಕಾಗಿ ಆದ ಈ ಅವಘಡದಿಂದ ಮೃತ ರೈತನ ಕುಟುಂಬ ಮತ್ತು ಸಂಬಂಧಿಕರ ಆಕ್ರಂದನ ಮುಗಿಲು ಮುಟ್ಟಿತ್ತು. ಘಟನೆ ಸಂಬಂಧ ಬಿಳಿಚೋಡು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಾಜಿ ಶಾಸಕ ಎಚ್.ಪಿ. ರಾಜೇಶ್ ಸ್ಥಳಕ್ಕೆ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿದರು

## ಮಕ್ಕಳ ಪ್ರತಿಭೆಗೆ ಪ್ರೋತ್ಸಾಹ ಅಗತ್ಯ

**ದಾವಣಗೆರೆ:** ಮಕ್ಕಳಲ್ಲಿನ ಪ್ರತಿಭೆ ಬೆಳೆಸಲು ಸಮಾಜ ಅಗತ್ಯ ಪ್ರೋತ್ಸಾಹ ನೀಡಬೇಕು, ಆಗ ಮಕ್ಕಳಿಗೆ ಮಾತ್ರಲ್ಲದೆ ಸಮಾಜಕ್ಕೂ ಒಳಿತಾಗುತ್ತದೆ ಎಂದು ವಿಧಾನ ಪರಿಷತ್ ಸಚೇತಕ ಎನ್. ರವಿಕುಮಾರ್ ಹೇಳಿದರು.

ನಗರದ ದೊಡ್ಡಪೇಟೆಯ ಶ್ರೀ ನಾಮದೇವ ಭಜನಾ ಮಂದಿರದಲ್ಲಿ ಶುಕ್ರವಾರ ನಾಮದೇವ ಸಿಂಪಿ ಸಮಾಜವು 100ನೇ ಶ್ರೀ ಪಾಂಡುರಂಗ ವಿಠಲ ರುಕ್ಕಿಣಿ ದಿಂಡಿ ಮಹೋತ್ಸವ ಅಂಗವಾಗಿ ಏರ್ಪಡಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿ, ಮಕ್ಕಳು ಪ್ರತಿಭಾವಂತರಾಗಿ ಸುಸಂಸ್ಕೃತ

ಹಾಗೂ ಬಲಿಷ್ಠ ಸಮಾಜ ನಿರ್ಮಾಣಕ್ಕೆ ಕಾರಣರಾಗಬೇಕು ಎಂದರು.ಹಿರಿಯ ಪತ್ರಕರ್ತ ಡಾ.ಎಚ್. ಬಿ. ಮಂಜುನಾಥ ಮಾತನಾಡಿದರು. ಸಮಾಜ ಹಿರಿಯರಾದ ಕೆ.ಬಿ.ಶಂಕರನಾರಾಯಣ, ಸಮಾಜದ ಗೌರವಾಧ್ಯಕ್ಷ ಜ್ಞಾನದೇವ ಬೊಂಗಾಳೆ, ಅಧ್ಯಕ್ಷ ಸತೀಶ್ ಕುಮಾರ್ ಎಂ. ಧಾವಸ್ಕರ್, ಮನೋಹರ ವಿ. ಬೊಂಗಾಳೆ, ಕೆ.ಜಿ.ಯಲ್ಲಪ್ಪ, ಎಂ.ಎಸ್.ವಿಠಲ್, ಎ.ಪ್ರಭಾಕರ್, ರಾಘವೇಂದ್ರ, ಮಣಿಕಂಠ ಪಿಸೆ, ಪಾಂಡುರಂಗ, ಮಂಜುನಾಥ್, ಪರಶುರಾಮ್ ಇದ್ದರು.

## 96 ಟ್ರ್ಯಾಕ್ಟರ್‌ಗೆ ಬೆಂಕಿ: 167 ರೈತರ ವಿರುದ್ಧ ಕೇಸ್, 10 ಜನ ವಶಕ್ಕೆ

**ಬಾಗಲಕೋಟೆ:** ಸಮೀರವಾಡಿ ಸಕ್ಕರೆ ಕಾರ್ಖಾನೆ ಆವರಣದಲ್ಲಿ ಕಲ್ಲು ತೂರಿ, ಕಬ್ಬು ತುಂಬಿದ್ದ 96 ಟ್ರ್ಯಾಕ್ಟರ್‌ಗೆ ಬೆಂಕಿ ಹಚ್ಚಿದ ಪ್ರಕರ ಣದಲ್ಲಿ ಪೊಲೀಸರು 167 ರೈತರ ವಿರುದ್ಧ ಎಫ್‌ಐಆರ್‌ದಾಖಲಿಸಿದ್ದಾರೆ. 10 ಮಂದಿ ಯನ್ನು ವಶಕ್ಕೆ ಪಡೆದಿದ್ದಾರೆ.

# ಪಂಚವಾರ್ಷಿಕ ಯೋಜನೆಗಳ ಮೂಲಕ ಮೊದಲ ಬಾರಿಗೆ ಸಹಕಾರ ಸಂಘಗಳ ಸ್ಥಾಪನೆ

**ಹೊನ್ನಾಳಿ :** ಜವಾಹರಲಾಲ್ ನೆಹರು ಅವರು ಪ್ರಧಾನಮಂತ್ರಿಯಾಗಿದ್ದಾಗ ಪಂಚವಾರ್ಷಿಕ ಯೋಜನೆಗಳ ಮೂಲಕ ದೇಶದಲ್ಲಿಯೇ ಮೊದಲ ಬಾರಿಗೆ ಸಹಕಾರ ಸಂಘಗಳ ಸ್ಥಾಪನೆಗೆ ಆಶಯ ವ್ಯಕ್ತಪಡಿಸಿದ್ದರು ಎಂದು ಶಾಸಕ ಡಿ.ಜಿ. ಶಾಂತನಗೌಡ ಹೇಳಿದರು.

ಶನಿವಾರ ತಾಲೂಕಿನ ಗೊಲ್ಲರಹಳ್ಳಿಯಲ್ಲಿರುವ ಹಾಲು ಶೀಥಲೀಕರಣ ಕೇಂದ್ರದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ 72 ನೇ ಅಖಿಲ ಭಾರತ ಸಹಕಾರ ಸಪ್ತಾಹವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿವರ್ಷ ನವೆಂಬರ್ 14 ರಿಂದ 21 ರವರೆಗೆ ದೇಶಾದ್ಯಂತ ಸಹಕಾರ ಸಪ್ತಾಹ ನಡೆಯುತ್ತಿದ್ದು ಅಲ್ಲಿ ಸಂಘದ ಅಭಿವೃದ್ಧಿ ಕುರಿತು ವಿಚಾರಗಳು ಮಂಡನೆಯಾಗಲಿವೆ ಎಂದರು.

ಹಾಲು ಉತ್ಪಾದಕರ ಸಂಘಗಳು ಕುಟುಂಬಗಳ ನಿರ್ವಹಣೆಯ ಜೊತೆಗೆ ಮಕ್ಕಳ ಶಿಕ್ಷಣಕ್ಕೂ ಸಹಕಾರಿಯಾಗಿವೆ. ಎಷ್ಟೋ ಜನ ತಾಯಂದಿರು ಹಾಲು ಮಾರಿ ಬಂದ ಹಣದಲ್ಲಿ ತಮ್ಮ ಮಕ್ಕಳಿಗೆ ಶಿಕ್ಷಣ ಕೊಡಿಸುತ್ತಿದ್ದಾರೆ ಎಂದ ಅವರು ನಮ್ಮ ಮೂರು ಜಿಲ್ಲೆಗಳ ಹಾಲು ಒಕ್ಕೂಟದಲ್ಲಿ 8 ರಿಂದ 9 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದ್ದರೆ ದೇಶದಲ್ಲಿ 1 ಕೋಟಿ ಲೀಟರ್ ಗೂ ಅಧಿಕ ಹಾಲು ಉತ್ಪಾದನೆಯಾಗುತ್ತಿದೆ ನಮ್ಮ ರಾಜ್ಯ ಹಾಲು ಉತ್ಪಾದನೆಯಲ್ಲಿ ಎರಡನೇಯ ಸ್ಥಾನದಲ್ಲಿದೆ ಎಂದರು.



ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಮಾತನಾಡಿ, ಸಹಕಾರ ಸಂಘಗಳ ಪಿತಾಮಹ ಸಿದ್ದನಗೌಡರು ತಮ್ಮ ಚಿಂತನೆಗಳಿಂದ ಮನೆಮಾತಾಗಿದ್ದಾರೆ ಇಂದು ದೇಶಾದ್ಯಂತ ಸಹಕಾರ ಸಂಘಗಳು ತಲೆ ಎತ್ತಿದ್ದು ದೇಶದ ಅಭಿವೃದ್ಧಿಗೆ ತಮ್ಮದೇಯಾದ ಕೊಡುಗೆಯನ್ನು ನೀಡಿವೆ ಎಂದರು. ಸಹಕಾರ ಸಂಘಗಳು ಇಲ್ಲದಿದ್ದರೆ ನಾವು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಸಾಲ ಪಡೆಯಲು ಪರದಾಡಬೇಕಾಗುತ್ತಿತ್ತು. ಇಂದು ಸಹಕಾರ ಸಂಘಗಳು, ಪತ್ತಿನ ಸಂಘಗಳ ಮೂಲಕ ಸುಲಭವಾಗಿ ಸಾಲ ಸೌಲಭ್ಯ ಪಡೆಯಬಹುದು ಎಂದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರೂ ಕೆಎಂಎಫ್ ನಿರ್ದೇಶಕರೂ ಆದ ಬಿ.ಜಿ. ಬಸವರಾಜಪ್ಪ ಮಾತನಾಡಿ, ಪ್ರತಿಯೊಂದು ಗ್ರಾಮಗಳಲ್ಲಿ ಶಾಲೆ, ಆಸ್ಪತ್ರೆ, ಮತ್ತು ಸಹಕಾರ ಸಂಘಗಳು ಇದ್ದರೆ ಆ ಗ್ರಾಮ ಅಭಿವೃದ್ಧಿಯಾದಂತೆ ಎಂದು ಹೇಳಿದರು. ಹಾಲಿನ ಸಹಕಾರ ಸಂಘಗಳು ಗ್ರಾಮೀಣ ಭಾಗದ ಆರ್ಥಿಕ ಸ್ಥಿತಿಗತಿಯನ್ನು ಉತ್ತಮಪಡಿಸಿವೆ. ನಮ್ಮಲ್ಲಿ 114 ಸಂಘಗಳು ಇದ್ದು, ಅವೆಲ್ಲವೂ ಲಾಭದಾಯಕವಾಗಿವೆ ಎಂದು ಹೇಳಿದರು.

ಸಮಾರಂಭದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಎಚ್.ಕೆ. ಬಸಪ್ಪ, ಡಿ.ಜಿ. ವಿಶ್ವನಾಥ್, ಸಹಕಾರಿ ಧುರೀಣ ಜಗದೀಶಪ್ಪ ಬಣಕಾರ್ ಇತರರು ಮಾತನಾಡಿದರು.

ಸಮಾರಂಭದಲ್ಲಿ ರಾಜ್ಯ ಬಯಲು ಸೀಮೆ ಪ್ರದೇಶಾಭಿವೃದ್ಧಿ ನಿ, ಅಧ್ಯಕ್ಷ ಎಚ್.ಬಿ. ಮಂಜಪ್ಪ, ಟಿಎಪಿಸಿಎಂಎಸ್ ಅಧ್ಯಕ್ಷರಾದ ಮರುಳಸಿದ್ದಪ್ಪ, ಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ಎಚ್. ಷಣ್ಮುಖಪ್ಪ, ನಿರ್ದೇಶಕ ಡಿ.ಎಸ್. ಸುರೇಂದ್ರ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಕೆ.ಜಿ. ರಮೇಶ್, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಸಿರಿಗೆರೆ ರಾಜಣ್ಣ, ಜಿಲ್ಲಾ ಕೇಂದ್ರ ಸ ಬ್ಯಾಂಕ್ ಅಧ್ಯಕ್ಷ ಕೋಗುಂಡಿ ಬಕ್ಕೇಶಪ್ಪ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷೆ ಎಚ್.ಜಿ. ಮಂಜುಳಾ ಗಣೇಶ್, ಎಸ್.ಜಿ. ಶೇಖರ್, ಸಂಜೀವ್ ಕುಮಾರ್, ಮಧು ಶ್ರೀನಿವಾಸ್ ಇತರರು ಉಪಸ್ಥಿತರಿದ್ದರು.

### ವಿಶ್ವ ವಿಕಲಚೇತನರ ದಿನಾಚರಣೆ ನಿಮಿತ್ಯ ಪೂರ್ವಭಾವಿ ಸಭೆ

# ವಿಶ್ವ ವಿಕಲಚೇತನರ ದಿನಾಚರಣೆಯನ್ನು ವ್ಯವಸ್ಥಿತವಾಗಿ ಆಚರಿಸಿ

**ಗದಗ :** ವಿಶ್ವ ವಿಕಲಚೇತನರ ದಿನಾಚರಣೆಯನ್ನು ಡಿಸೆಂಬರ್ 3 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್ ತಿಳಿಸಿದರು.ನಗರದ ಜಿಲ್ಲಾ ಪಂಚಾಯತ್ ವಿಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕುರಿತು ಶನಿವಾರ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರುವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ನೋಡಿಕೊಳ್ಳಬೇಕು. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿಕಲಚೇತನರು ಪಾಲ್ಗೊಳ್ಳುವಂತೆ ನೋಡಿಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್. ಹೇಳಿದರು.




ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಮಹಾಂತೇಶ್ ಕೆ ಮಾತನಾಡಿ ವಿಶ್ವ ವಿಕಲಚೇತನರ ದಿನಾಚರಣೆ ನಿಮಿತ್ಯ ದಿನಾಂಕ:24/11/2025 ರಂದು ಬೆಳಿಗ್ಗೆ: 9:00 ಗಂಟೆಗೆ ನಗರದ ಕೆ.ಎಚ್.ಪಾಟೀಲ್, ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುವುದು. ವಿಶ್ವ ವಿಕಲಚೇತನರ ದಿನಾಚರಣೆ ದಿನದ ಸಕಲ ಸಿದ್ಧತೆಗೆ ಕ್ರಮ ವಹಿಸಲಾಗಿದೆ. ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ ಜಿ, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಆರ್. ಎಸ್.ಬುರುಡಿ,

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ವಿಕಲಚೇತನ ಸರ್ಕಾರಿ ನೌಕರರ ಸಂಘ, ಜಿಲ್ಲಾ ಘಟಕ, ಗದಗ ಸದಸ್ಯರು, ವಿಕಲಚೇತನರು ಹಾಗೂ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

## ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

**ರಾಮನಗರ:** ಮಾಗಡಿ ಪುರಸಭೆಯ ಶೇ.24.10, 7.25 ಹಾಗೂ ಶೇ.5ರ ಯೋಜನೆಯ ಅನುಕೂಲತೆಗಳನ್ನು ಪಡೆದುಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2025–26ನೇ ಸಾಲಿನ ಪುರಸಭಾ ನಿಧಿ ಶೇ. 24.10 ಯೋಜನೆ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ, ಎಸ್.ಎಫ್.ಸಿ & ಪುರಸಭಾ ನಿಧಿ ಶೇ. 7.25 ಯೋಜನೆ ಇತರೆ ಬಡ ಜನರ ಕಲ್ಯಾಣ ಕಾರ್ಯಕ್ರಮ ಹಾಗೂ ಶೇ. 5 ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗೆ ಅರ್ಜಿ ಸಲ್ಲಿಸಬಹುದು.

ಈ ಕಾರ್ಯಕ್ರಮಗಳಿಗೆ ಮಾಗಡಿ ಪುರಸಭಾ ಕಚೇರಿಯ ಟಪಾಲು ವಿಭಾಗದಲ್ಲಿ ನಿಗಧಿತ ನಮೂನೆ ಅರ್ಜಿ ಪಡೆದು ಸೂಕ್ತ ದಾಖಲೆಗಳೊಂದಿಗೆ ನ.30ರೊಳಗೆ ಸಲ್ಲಿಸಬೇಕು. ಕೊನೆಯ ದಿದನಾಂಕದ ನಂತರ ಬಂದ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗೆ ಕೆಲಸದ ವೇಳೆಯಲ್ಲಿ ಮಾಗಡಿ ಪುರಸಭೆಯ ಸಂಬಂಧಿಸಿದ ಅಧಿಕಾರಿ/ನೌಕರರನ್ನು ಸಂಪರ್ಕಿಸುವಂತೆ ಮಾಗಡಿ ಪುರಸಭೆಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಮ್ ತರಬೇತುದಾರರಿಂದ ಅರ್ಜಿ ಆಹ್ವಾನ

**ರಾಮನಗರ:** ಬೆಂಗಳೂರು ದಕ್ಷಿಣ ಜಿಲ್ಲೆಯ ಜಿಲ್ಲಾ ಕ್ರೀಡಾಂಗಣದಲ್ಲಿರುವ ವ್ಯಾಯಾಮ ಶಾಲೆಗೆ ಜಿಮ್ ತರಬೇತುದಾರರನ್ನು (ವ್ಯಾಯಾಮ ತರಬೇತುದಾರರು) ನಿಯೋಜಿಸಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರತಿ ಮಾಹೆ 6,000 ರೂ.ಗಳ ಗೌರವಧನ ನೀಡಲಾಗುವುದು. ಷರತ್ತುಗಳಿಗೆಗೊಳಪಟ್ಟು ಜಿಮ್ ತರಬೇತುದಾರರಾಗಿ ಕರ್ತವ್ಯ ನಿರ್ವಹಿಸಲು ಆಸಕ್ತಿ ಇರುವ ಅಭ್ಯರ್ಥಿಗಳು ಕನಿಷ್ಟ 01 ವರ್ಷದ ಅನುಭವವನ್ನು ಪಡೆದು, ಪ್ರಮಾಣ ಪತ್ರ ಸಲ್ಲಿಸಿದ್ದಲ್ಲಿ ಆದ್ಯತೆ ನೀಡಲಾಗುವುದು.ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ ಇವರನ್ನು ಖುದ್ದಾಗಿ ಭೇಟಿ ಮೂಲಕ ಅಥವಾ ಅಧೀಕ್ಷಕರ ದೂ. ಸಂಖ್ಯೆ:9945533431 ಅನ್ನು ಸಂಪರ್ಕಿಸುವಂತೆ ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್ ಲೈನ್ ಮೂಲಕ ಅರ್ಜಿ ಆಹ್ವಾನ

**ಗದಗ:** ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಹ ಸಾಧಕ ಕ್ರೀಡಾಪಟುಗಳು ಹಾಗೂ ಇತರರಿಂದ ವಿವಿಧ ಪ್ರಶಸ್ತಿ ಮತ್ತು ವಿವಿಧ ಪ್ರೋತ್ಸಾಹಧನ ನೀಡುವ ಯೋಜನೆಗಳು ಅಂದರೆ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ, ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ, ಗುರಿ–ಒಲಂಪಿಕ್ ಪದಕ, ನಗದು ಪುರಸ್ಕಾರ, ಶೈಕ್ಷಣಿಕ ಶುಲ್ಕ ಮರುಪಾವತಿ, ಕ್ರೀಡಾ ವಿದ್ಯಾರ್ಥಿ ವೇತನಕ್ಕೆ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿರುತ್ತದೆ. ಅರ್ಹ ಕ್ರೀಡಾಪಟುಗಳು ಕಡ್ಡಾಯವಾಗಿ ಅಧಿಕೃತ ಜಾಲತಾಣ *https://sevasindhu.karnataka.got.in* ಮೂಲಕ ದಿನಾಂಕ: 03–12–2025 ರೊಳಗೆ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದು.

# ಸಹಕಾರಿ ಕ್ಷೇತ್ರವೇ ದೇಶದ ಆರ್ಥಿಕ ಬಲ

## 72ನೇ ಅಖಿಲ ಭಾರತ ಸಹಕಾರ ಸಪ್ತಾಹ–2025 ಕಾರ್ಯಕ್ರಮದಲ್ಲಿ ಶಾಸಕ ಬಿ.ಪಿ. ಹರೀಶ್ ಅಭಿಮತ

**ಹರಿಹರ :** ದೇಶದ ಒಟ್ಟಾರೆ ಅಭಿವೃದ್ಧಿಯೊಂದಿಗೆ ಪ್ರತಿಯೊಬ್ಬ ಸಾಮಾನ್ಯ ನಾಗರಿಕರ ಆರ್ಥಿಕ ಸುಧಾರಣೆ ಮಾಡಲು ಶಕ್ತಿ ಹೊಂದಿರುವ ಪ್ರಮುಖ ವ್ಯವಸ್ಥೆ ಎಂದರೆ ಅದು ಸಹಕಾರಿ ಕ್ಷೇತ್ರ ಎಂದು ಶಾಸಕ ಬಿಪಿ ಹರೀಶ್ ಅಭಿಮತ ವ್ಯಕ್ತಪಡಿಸಿದರು.

ನಗರದ ರಾಘವೇಂದ್ರಸ್ವಾಮಿ ಸಮುದಾಯ ಭವನದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳಿ (ನಿಯ.), ಬೆಂಗಳೂರು, ಸಹಕಾರ ಇಲಾಖೆ ದಾವಣಗೆರೆ, ಜಿಲ್ಲಾ ಸಹಕಾರ ಒಕ್ಕೂಟ (ನಿಯ.), ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ (ನಿಯ.) ದಾವಣಗೆರೆ, ಶಿವಮೊಗ್ಗ ಸಹಕಾರ ಹಾಲು ಒಕ್ಕೂಟ (ನಿಯ.), ಇಫ್ಕೋ, ಕ್ರಿಬ್ಕೋ ಹಾಗೂ ಹರಿಹರ ತಾಲೂಕಿನ ವಿವಿಧ ಸಹಕಾರ ಸಂಘ–ಬ್ಯಾಂಕ್‌ಗಳ ಸಂಯುಕ್ತ ಆಶ್ರಯ ದಲ್ಲಿ 72ನೇ ಅಖಿಲ ಭಾರತ ಸಹಕಾರ ಸಪ್ತಾಹ–2025 ಕಾರ್ಯಕ್ರಮವನ್ನು ಭಾನುವಾರ ಉದ್ಘಾಟಿಸಿ ಅವರು ಮಾತನಾಡಿದರು.



**ಸಹಕಾರದಿಂದ ಕೃಷಿ ಸೇರಿ ಅನೇಕ ಕ್ಷೇತ್ರಗಳಿಗೆ ಚೈತನ್ಯ:** ಸಹಕಾರಿ ವ್ಯವಸ್ಥೆಯ ಬಲದಿಂದ ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಿಗೆ ಹೊಸ ಚೈತನ್ಯ ಸಿಕ್ಕಿದ್ದು, ಲಕ್ಷಾಂತರ ಬಡ ಕುಟುಂಬಗಳು ಸಂಘಗಳ ರೂಪದಲ್ಲಿ ಬದುಕು ಕಟ್ಟಿಕೊಳ್ಳಲು ಇದು ಮುಖ್ಯ ಆಧಾರವಾಗಿದೆ ಎಂದ ಅವರು, "ಸಹಕಾರಿ ಕ್ಷೇತ್ರ ಗಟ್ಟಿಯಾಗಿದ್ದು ಸುಧಾರಿತವಾಗಿ ಕಾರ್ಯನಿರ್ವಹಿಸಿದರೆ ಆರ್ಥಿಕ ಮತ್ತು ಸಾಮಾಜಿಕ ಬದಲಾವಣೆ ತರುವ ಸಾಮರ್ಥ್ಯ ಅಪಾರ. ಸರ್ಕಾರವೂ ಸಹಕಾರ ಸಂಘಗಳ ಅಭಿವೃದ್ಧಿಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳನ್ನು ಸರಿಯಾದ ರೀತಿಯಲ್ಲಿ ಬಳಸಿಕೊಳ್ಳಬೇಕು," ಎಂದು ತಿಳಿಸಿದರು.

ಸಹಕಾರ ಸಚಿವ ರಾಜಣ್ಣರವರು ಸಹಕಾರಿ ಕ್ಷೇತ್ರಕ್ಕೆ ಹೆಚ್ಚಿನ ಯೋಜನೆಗಳನ್ನು ಮೀಸಲು ಇಟ್ಟಿರುವುದನ್ನು ಅವರು ಮೆಚ್ಚುಗೆ ವ್ಯಕ್ತಪಡಿಸಿದರು.ಶಾಸಕರಾಗಿ ತಾವು ಪೂರ್ವಾವಧಿ ಯಲ್ಲಿ ಹರಿಹರದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ತರಲು ಯಶಸ್ವಿಯಾಗಿದ್ದು, ಈ ಅವಧಿಯಲ್ಲೂ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಒತ್ತು ನೀಡುತ್ತಿರುವುದಾಗಿ ಹೇಳಿದರು.

ರೈತರ ಸಮಸ್ಯೆಗಳ ಕುರಿತು ಮಾತನಾಡಿದ ಅವರು, ಕೃಷಿ ವೆಚ್ಚ ಹೆಚ್ಚುತ್ತಿರುವ ಮತ್ತು ಮೂಲಸೌಕರ್ಯಗಳ ಕೊರತೆಯಿಂದ ರೈತರು ಹೋರಾಟ ನಡೆಸುತ್ತಿರುವ ಪರಿಸ್ಥಿತಿಯಲ್ಲಿ, ಸಹಕಾರಿ ಸಂಘಗಳಲ್ಲಿ ಸಕ್ರಿಯ ಭಾಗವಹಿಸುವಿಕೆ ರೈತರ ಬಲವರ್ಧನೆಗೆ ಪ್ರಮುಖ ಎಂದು ಅಭಿಪ್ರಾಯ ಪಟ್ಟರು.ಈ ಹಿಂದೆ ಕೋಮಾರನಹಳ್ಳಿ ಪ್ರದೇಶದಲ್ಲಿ ವ್ಯಾಪಕವಾಗಿ ಮೆಣಸಿನ ಕಾಯಿ ಬೆಳೆ ಬೆಳೆಸಲಾಗುತ್ತಿತ್ತು. ಆದರೆ ಈಗ ಈ ಬೆಳೆಯ ಇಳುವರಿ ಕಡಿಮೆಯಾಗಿರುವುದು ಚಿಂತಾಜನಕ ಎಂದು ಹೇಳಿದರು.

ಅಚ್ಚುಕಟ್ಟಾಗಿ ನಡೆದ ಉತ್ತಮ ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ (ನಿ.) ಉಪಾಧ್ಯಕ್ಷ ಡಿ. ಕುಮಾರ ವಹಿಸಿದ್ದರು.

'ಸಹಕಾರಿ ಸಂಸ್ಥೆಗಳ ಮೂಲಕ ಗ್ರಾಮೀಣ ಅಭಿವೃದ್ಧಿಯ ಬಲವರ್ಧನೆ' ವಿಷಯದ ಕುರಿತು ನ್ಯಾಯವಾದಿ ಮಂಜುನಾಥ ಎಸ್. ದೊಡ್ಡಮನಿ ಉಪನ್ಯಾಸ ನೀಡಿದರು.ಸಹಕಾರಿ ವ್ಯವಸ್ಥೆಯ ಗ್ರಾಮೀಣ ಮಟ್ಟದ ಪರಿಣಾಮಕಾರಿ ಪ್ರಭಾವ ಹಾಗೂ ಸಮಷ್ಟಿ ಅಭಿವೃದ್ಧಿಯಲ್ಲಿ ಸಹಕಾರದ ಪಾತ್ರವನ್ನು ಅವರು ವಿವರಿಸಿದರು.

ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಿಗೆ ಗೌರವ : ಇದೇ ವೇಳೆ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಾದ ಡಾ. ಜೆ. ಆರ್. ಷಣ್ಮುಖಪ್ಪ,ಬಿ. ರಾಮಚಂದ್ರಪ್ಪ ಅವರಿಗೆ ಅಮೃತಭಾವದ ಗೌರವ ಸಲ್ಲಿಸಲಾಯಿತು.

ಈ ಸಮಯದಲ್ಲಿ ಪಿ.ಎಲ್.ಡಿ. ಬ್ಯಾಂಕ್ ಹಾಗೂ ಸಹಕಾರ ಒಕ್ಕೂಟದ ಅಧ್ಯಕ್ಷ ಸಿರಿಗೇರೆ ರಾಜಣ್ಣ, ಜಿಲ್ಲಾ ಸಹಕಾರ ಬ್ಯಾಂಕ್ ಮಾಜಿ ಅಧ್ಯಕ್ಷ ಬಿ. ಹಾಲೇಶಪ್ಪ, ಮಾಜಿ ಉಪಾಧ್ಯಕ್ಷ ಜಿ. ಆನಂದಪ್ಪ, ಹರಿಹರೇಶ್ವರ ಅರ್ಬನ್ ಕೋ–ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಜಿ.ಕೆ. ಮಲ್ಲಿಕಾರ್ಜುನ್, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ನಿಯ.) ಅಧ್ಯಕ್ಷ ಜಿ.ಬಿ. ಹಾಲೇಶ್ ಗೌಡ್ರು, ಸಿಬ್ಬಂದಿ ಒಕ್ಕೂಟ ಅಧ್ಯಕ್ಷ ಎಂ.ವಿ. ಮಹದೇವಪ್ಪ, ಎಸ್.ಆರ್. ಬಿರಾದಾರ್, ರಾಘವೇಂದ್ರಸಾ ಆರ್., ಅಂಬಾಸಾ ಮೆಹರ್ವಾಡೆ ಹಾಗೂ ಹಲವು ಸಹಕಾರಿ ಸಂಘಗಳ ಪದಾಧಿಕಾರಿಗಳು ಗಣ್ಯರುಗಳು ಸೇರಿದಂತೆ ಸಹಾಯಕ ನಿಬಂಧಕ ಗೋಪಾಲ್ ಸಿ., ಸಹಾಯಕ ನಿರ್ದೇಶಕ ಓ. ಮಂಜುನಾಥ ಸ್ವಾಮಿ, ಸಹಕಾರ ಅಭಿವೃದ್ಧಿ ಅಧಿಕಾರಿ ಸುನಿತಾ ಹೆಚ್., ಪ್ರಭಾರ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಚ್. ಸಂತೋಷ್ ಕುಮಾರ್, ಇಫ್ಕೊ ಸಂಸ್ಥೆಯ ವಿನಯ್ ಕುಮಾರ್ ಎನ್.ಎಸ್., ಕ್ರಿಬ್ಕೋ ಸಂಸ್ಥೆಯ ಜಿ.ಟಿ. ಪ್ರದೀಪ್ ಕುಮಾರ್,ಎಂ.ಸಿ. ಆನಂದಸ್ವಾಮಿ ಉಪಸ್ಥಿತರಿದ್ದರು.

## ಬಿಹಾರ ಚುನಾವಣೆಗೂ ಮುನ್ನ ಮಹಿಳೆಯರಿಗೆ ಹಣ ವರ್ಗಾವಣೆ ಮಾಡಿದ್ದರ ಬಗ್ಗೆ ಶರದ್ ಪವಾರ್ ಚರ್ಚೆ



**ಪುಣೆ:** ಎನ್ ಸಿಪಿ (ಎಸ್ ಪಿ) ಅಧ್ಯಕ್ಷ ಶರದ್ ಪವಾರ್ ಅವರು ಬಿಹಾರದಲ್ಲಿ ಚುನಾವಣೆಗೆ ಮುನ್ನ ಮಹಿಳೆಯರಿಗೆ ಸರ್ಕಾರಿ ಯೋಜನೆಯಡಿ ಹಣ ವರ್ಗಾವಣೆ ಮಾಡಿದ್ದರ ಬಗ್ಗೆ ವಿಪಕ್ಷ ನಾಯಕರ ಜೊತೆ ಚರ್ಚಿಸಲು ನಿರ್ಧರಿಸಿದ್ದಾರೆ.

ಈ ವಿಚಾರವನ್ನು ಅವರು ಸಂಸತ್ ಅಧಿವೇಶನದಲ್ಲಿ ಪ್ರಸ್ತಾಪಿಸಲಿದ್ದಾರೆ. ಇತ್ತೀಚೆಗೆ ನಡೆದ ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಆಡಳಿತಾರೂಢ ಎನ್ ಡಿಎ ಭರ್ಜರಿ ಗೆಲುವು ಸಾಧಿಸಿತ್ತು. ಈ ಹಿನ್ನೆಲೆಯಲ್ಲಿ ಪವಾರ್ ಅವರ ಈ ಹೇಳಿಕೆ ಮಹತ್ವ ಪಡೆದುಕೊಂಡಿದೆ.

ಶರದ್ ಪವಾರ್ ಸೊಲ್ಲಾಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, "ಚುನಾವಣಾ ಫಲಿತಾಂಶ ನಮ್ಮ ನಿರೀಕ್ಷೆಗೆ ವಿರುದ್ಧವಾಗಿ ಬಂದಿದೆ. ಆದರೂ, ಜನರ ತೀರ್ಪನ್ನು ನಾವು ಒಪ್ಪಿಕೊಳ್ಳಬೇಕು. ಮಹಾರಾಷ್ಟ್ರ ಮತ್ತು ಬಿಹಾರದಲ್ಲಿ ಚುನಾವಣೆಗೂ ಮುನ್ನ 'ಲಾಡ್ಕಿ ಬಹಿನ್' ಮತ್ತು ಮಹಿಳೆಯರಿಗೆ 10,000 ರೂ. ನೇರ ಲಾಭ ವರ್ಗಾವಣೆಯಂತಹ ಯೋಜನೆಗಳನ್ನು ಜಾರಿಗೆ ತಂದಿರುವುದನ್ನು ಎಲ್ಲರೂ ನೋಡಿದ್ದಾರೆ. ಇಂತಹ ಸಂಗತಿಗಳು ಹಿಂದೆಂದೂ ಕಂಡಿರಲಿಲ್ಲ" ಎಂದರು.

# ಸಚಿವರ ವಿರುದ್ಧ ಬಿಜೆಪಿ ಅವಹೇಳನ ಖಂಡಿಸಿ ಕಾಂಗ್ರೆಸ್ ಬೃಹತ್ ಪ್ರತಿಭಟನೆ

**ಚಿಕ್ಕಮಗಳೂರು:** ರಾಜ್ಯದ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಗೃಹಸಚಿವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡುವ ಬಿಜೆಪಿ ಕಾರ್ಯಕರ್ತರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ನಗರದ ಆಜಾದ್‌ಪಾರ್ಕ್ ವೃತ್ತದಲ್ಲಿ ಬ್ಲಾಕ್ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಈ ವೇಳೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಎಲ್.ಮೂರ್ತಿ ಮಾತನಾಡಿ, ರಾಷ್ಟ್ರದ ಪ್ರಜಾತಂತ್ರವು ಮೋದಿ ಆಡಳಿತದಲ್ಲಿ ಅಪಾಯದ ಸ್ಥಿತಿಯಲ್ಲಿದೆ. ಅಧಿಕಾರಕ್ಕಾಗಿ ಬಿಜೆಪಿ, ಸಂಘ–ಪರಿವಾರದ ಕಾರ್ಯಕರ್ತರು ಎಲ್ಲಾ ಮಟ್ಟಕ್ಕೂ ಇಳಿಯುತ್ತಿದೆ. ಅಲ್ಲದೇ ವಿಶ್ವ ಬ್ಯಾಂಕ್‌ನಲ್ಲಿ ಕೇಂದ್ರ ಸರ್ಕಾರ ಸಾಲ ಪಡೆದು, ಬಿಹಾರದಲ್ಲಿ ಹಂಚಿಕೆಗೊಳಿಸಿ ಚುನಾವಣೆ ಎದುರಿಸಿದೆ ಎಂದು ಆರೋಪಿಸಿದರು.

ಕ್ಷೇತ್ರದ ಮಾಜಿ ಶಾಸಕ ಸಿ.ಟಿ.ರವಿ, ಸಿದ್ದರಾಮಯ್ಯ ಬಗ್ಗೆ ಪದೇ ಪದೇ ಅವಮಾನಿಸಿದ ಕಾರಣ ಚಿಕ್ಕಮಗಳೂರು ಸೇರಿದಂತೆ ಪ್ರತಿ ತಾಲ್ಲೂಕಿನಲ್ಲಿ ಬಿಜೆಪಿ ದೂಳಿಪಟವಾಗಿದೆ. ಅವರದೇ ಪಕ್ಷದ ಮಾಜಿ ಮುಖ್ಯಮಂತ್ರಿ ಲೈಂಗಿಕ ಕಿರುಕುಳ, ಚಿತ್ರತಾರೆ ಕರೆದೊಯ್ದ ಪ್ರಕರಣ ಹಾಗೂ 15ಕ್ಕೂ ಮಂದಿ ಮುಂಬೈನಲ್ಲಿ ಅಶ್ಲೀಲ ವೀಡಿಯೋ ನಡೆಸಿದವರ ವಿರುದ್ಧ ಮಾತನಾಡುತ್ತಿಲ್ಲವೇಕೇ ಎಂದು ಪ್ರಶ್ನಿಸಿದರು.

ದೆಹಲಿ ಕೆಂಪುಕೋಟೆಯಲ್ಲಿ ಬಾಂಬ್ ಸ್ಫೋಟಿಸಿ ಕೆಲವು ಇಸ್ಲಾಂಕರಣಕ್ಕೆ ಭಯೋತ್ಪಾದಕರು ಮುಂದಾದರೆ, ರಾಷ್ಟ್ರದಲ್ಲಿ ಬಿಜೆಪಿ, ಆರ್‌ಎಸ್‌ಎಸ್ ಸಂಘಟನೆಗಳು ಮನಬಂದಂತೆ ಹೇಳಿಕೆ ನೀಡುವ ಮೂಲಕ ಹಿಂದೂ ಭಯೋತ್ಪಾದಕರಾಗಿ ಸನಾತನ ಧರ್ಮದ ಅಪಮಾನಿಸುವ ಜೊತೆಗೆ ಧರ್ಮದ ಅದೋಗತಿಗೆ ಕಾರಣೀಭೂತರಾಗಿದ್ದಾರೆ ಎಂದು ಹೇಳಿದರು.

ಇತ್ತೀಚೆಗೆ ಕ್ಷೇತ್ರದ ಮಾಜಿ ಶಾಸಕರು ಗೋಮಾಂಸ ಜಿಲ್ಲೆಯಲ್ಲಿ ವಿಪರೀತವಾಗಿದೆ ಎಂದು ಪ್ರತಿಭಟಿಸುತ್ತಾರೆ. ಕಳೆದ ಎರಡು ದಶಕಗಳಿಂದ ಶಾಸಕರಾಗಿದ್ದ ಸಿ.ಟಿ.ರವಿ ತಮ್ಮ ಅವಧಿಯಲ್ಲಿ ಗೋಮಾಂಸ ನಿಯಂತ್ರಣ–ಕ್ಕೆ ತರದೇ ಕಮೀಷನ್ ಪಡೆಯುತ್ತಿರೇ ಎಂದು ಪ್ರಶ್ನಿಸಿದ ಅವರು ಕೇವಲ ರಾಜಕೀಯ ಲಾಭಕ್ಕಾಗಿ ಇನ್ನೊಬ್ಬರ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ ಎಂದು ದೂರಿದರು.

ಕೆಪಿಸಿಸಿ ವಕ್ತಾರ ಹೆಚ್.ಹೆಚ್.ದೇವರಾಜ್ ಮಾತನಾಡಿ, ಆರ್‌ಎಸ್‌ಎಸ್ ದೇಶಭಕ್ತರು, ಸಂವಿಧಾನ ಸಂರಕ್ಷಕರು ಎಂಬುದನ್ನು ಮರೆತು. ಬಾಯಿಗೆ ಬಂದಂತೆ ಹೇಳಿಕೆ ನೀಡುವ ಹೀನಾಯ ಸಂಸ್ಕೃತಿ ಸಂಘ ಪರಿವಾರದಲ್ಲಿದೆ. ಗೃಹ ಸಚಿವರ ವೈಯಕ್ತಿಕ ಕುಟುಂಬದ ಬಗ್ಗೆ ಪರಿವಾರದ ಕಾರ್ಯಕರ್ತನ ಹೇಳಿಕೆಗೆ ಪೊಲೀಸರು ಬಂಧಿಸಿ ಕಾರಾಗೃಹ ಅತಿಥಿ ಮಾಡಿರುವುದು ಒಳ್ಳೆಯ ಕೆಲಸ ಎಂದರು.



ಸಿದ್ದರಾಮಯ್ಯ ಬಗ್ಗೆ ಸಿದ್ದರಾಮುಲ್ಲಾ ಖಾನ್ ಎಂದ ವ್ಯಕ್ತಿಯನ್ನು ಮನೆಗೆ ಕಳಿಸುವ ಕೆಲಸ ಕಾಂಗ್ರೆಸ್ ಮಾಡಿದೆ. ಬಿಜೆಪಿ ವಿ.ಪಕ್ಷದ ನಾಯಕ ಈಚೆಗೆ ಹೇಳಿಕೆ ನೀಡಿ ಸಿದ್ದರಾಮಯ್ಯ ಕಾಂಗ್ರೆಸ್‌ನಲ್ಲಿ ಇಲ್ಲದಿದ್ದರೆ ಪಕ್ಷವು ನಶಿಸಲಿದೆ ಎಂಬ ಆಧಾರವಿಲ್ಲದೇ ಹೇಳಿಕೆ ಅವರ ಮನಸ್ಥಿತಿಯನ್ನು ತೋರಿಸುತ್ತದೆ ಎಂದು ಹೇಳಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಪಿ.ಮಂಜೇಗೌಡ ಮಾತನಾಡಿ, ರಾಜ್ಯ ಕಾಂಗ್ರೆಸ್ ವರಿಷ್ಠರ ನಾಯಕರ ಬಗ್ಗೆ ಅವಾಚ್ಯ ಶಬ್ದಗಳ ಬಳಸಿ ನಿಂಧಿಸಿರುವ ಗೂಂಡಾಗಳನ್ನು ಜಿಲ್ಲೆಯಿಂದ ಗಡಿಪಾರು ಮಾಡಬೇಕು. ಸಂಸ್ಕೃತಿ, ಸಂಸ್ಕಾರ ಇಲ್ಲದ ಬಿಜೆಪಿ ಮುಖಂಡರು ರಾಜ್ಯ ಗೃಹಸಚಿವ ಪರಮೇಶ್ವರ್ ಹಾಗೂ ಮಕ್ಕಳ ಬಗ್ಗೆ ಮಾತ ನಾಡುವ ನೈತಿಕ ಯೋಗ್ಯತೆಯಿಲ್ಲ ಎಂದು ದೂರಿದರು.

ಉಪಮುಖ್ಯಮಂತ್ರಿ ಡಿ.ಕೆ.ಶಿ. ವಿರುದ್ಧ ಹಿಂಬದಿಯಲ್ಲಿ ನಿಂದಿಸುವ ಮುಖಂಡರುಗಳು, ನೇರವಾಗಿ ಡಿ.ಕೆ.ಶಿ. ಎದುರು ಹೇಳುವ ಸಾಮರ್ಥ್ಯವಿಲ್ಲ. ಮೂರ್ಖತನವನ್ನು ಬಿಟ್ಟು ಬಿಜೆಪಿ ಕಾರ್ಯಕರ್ತರು ಎಚ್ಚರಿಕೆ ವಹಿಸಬೇಕು. ಮುಂದೆ ಈ ರೀತಿ ಅವಾಚ್ಯ ಶಬ್ದಗಳ ಬಳಸಿದರೆ ಜಿಲ್ಲಾ ಬಿಜೆಪಿ ನಾಯಕರು ಮತ್ತು ಕಾರ್ಯಕರ್ತರ ಮನೆಗೆ ಮುತ್ತಿಗೆ ಹಾಕುತ್ತೇವೆ ಎಂದು ಎಚ್ಚರಿಸಿದರು.

ಜಿ.ಪಂ. ಮಾಜಿ ಅಧ್ಯಕ್ಷೆ ರೇಖಾ ಹುಲಿಯಪ್ಪಗೌಡ ಮಾತನಾಡಿ, ಜಿಲ್ಲೆಯ ಬಿಜೆಪಿ ಕಾರ್ಯಕರ್ತರದು ವಾರ್ತನೆ ನಡೆಯಿಂದ ಜನತೆ ಸೋಲುಣಿಸಿ, ಕಾಂಗ್ರೆಸ್ ಜೈಕಾರ ಹಾಕಿದರೂ, ಇನ್ನೂ ಬುದ್ದಿಹೀನರಾಗಿ ವರ್ತಿಸುತ್ತಿದ್ದಾರೆ. ಅಲ್ಲದೆ ಕಾಂಗ್ರೆಸ್ ವರಿಷ್ಠರ ನಾಯಕರನ್ನು ಅಪಮಾನಿಸುವ ಹೇಳಿಕೆ ಎಂದಿಗೂ ರಾಜ್ಯದ ಜನತೆ ಸಹಿಸುವುದಿಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ತಾಲ್ಲೂಕು ಅಧ್ಯಕ್ಷ ಮಲ್ಲೇಶ್, ಸಿಡಿಎ ಅಧ್ಯಕ್ಷ ಮೊಹಮ್ಮದ್ ನಯಾಜ್, ಕೆಪಿಸಿಸಿ ವಕ್ತಾರ ಅನಂತು, ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಮಹಮ್ಮದ್ ಹನೀಫ್, ತಾಲ್ಲೂಕು ಅಧ್ಯಕ್ಷ ಪ್ರವೀಣ್ ಬೆಟ್ಟಗೆರೆ, ನಗರಸಭಾ ಸದಸ್ಯರಾದ ಖಲಂಧರ್, ಜಾವೀದ್, ಶಾದಂಆಲಂಖಾನ್, ಮುಖಂಡರುಗಳಾದ ಕೆ.ವಿ.ಮಂಜುನಾಥ್, ಹಿರೇಗೌಜ ಶಿವು, ಪ್ರಸಾದ್ ಅಮೀನ್, ಬಸವರಾಜ್, ಪ್ರಕಾಶ್‌ರೈ, ಜಗದೀಶ್ ಮತ್ತಿತರರು ಹಾಜರಿದ್ದರು.

# ಮಕ್ಕಳ ಪ್ರತಿಭೆ ಹೊರತರಲು ಪ್ರತಿಭಾಕಾರಂಜಿ ಸಹಕಾರಿ : ತಿಮ್ಮಯ್ಯ

**ಕಡೂರು:** ಮಕ್ಕಳಲ್ಲಿರುವ ಸುಪ್ತವಾದ ಪ್ರತಿಭೆಗಳನ್ನು ಹೊರತರಲು ಪ್ರತಿಭಾಕಾರಂಜಿಯಂತಹ ವೇದಿಕೆಗಳು ಸಹಕಾರಿಯಾಗಲಿವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ತಿಮ್ಮಯ್ಯ ಹೇಳಿದರು.

ತಾಲೂಕಿನ ಬಿ.ಮಲ್ಲೇನಹಳ್ಳಿ ಗ್ರಾಮದ ಅಂಬೇಡ್ಕರ್ ವಸತಿ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಿಂಗಟಗೆ–ರೆ ಮತ್ತು ವೈ.ಮಲ್ಲಾಪುರ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರತಿಭೆ ಯಾರೊಬ್ಬರ ಸ್ವತ್ತಲ್ಲ, ಪ್ರತಿಯೊಬ್ಬರಲ್ಲು ಒಂದೊಂದು ರೀತಿಯ ಪ್ರತಿಭೆ ಅಡಗಿರುತ್ತದೆ, ಅದನ್ನು ಹೊರಹಾಕಲು ಸೂಕ್ತ ಅವಕಾಶಗಳಿಲ್ಲದೆ ವಂಚಿತವಾಗಿರುತ್ತಾರೆ. ಇದನ್ನು ಮನಗಂಡ ಸರ್ಕಾರ ಮಕ್ಕಳಲ್ಲಿರುವ ಪ್ರತಿಭೆಯನ್ನು ಬಾಲ್ಯದಿಂದಲೇ ಗುರುತಿಸಬೇಕು ಎನ್ನುವ ಕಾರಣಕ್ಕೆ ಪ್ರತಿಭಾಕಾರಂಜಿ ಕಾರ್ಯಕ್ರಮವನ್ನು ಜಾರಿಗೆ ತಂದಿದೆ. ಮಕ್ಕಳು ಈ ರೀತಿಯ ಕಾರ್ಯಕ್ರಮದ ಸದುಪಯೋಗ ಮಾಡಿಕೊಳ್ಳಬೇಕು. ತೀರ್ಪುಗಾರರು ಸೂಕ್ತ ಪ್ರತಿಭೆಯನ್ನು ಗುರುತಿಸಬೇಕು. ಯಾರಿಗೂ ಅನ್ಯಾಯವಾಗದಂತೆ ತೀರ್ಪು ನೀಡಬೇಕು ಎಂದರು.



ಕ್ರೈಸ್ ವಸತಿ ಶಿಕ್ಷಣ ಸಂಸ್ಥೆಯ ಜಿಲ್ಲಾ ಸಂಯೋಜಕಿ ಶೈಲಾ ಮಾತನಾಡಿ, ಕ್ಲಸ್ಟರ್‌ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ವಿಜೇತರಾಗುವ ವಿದ್ಯಾರ್ಥಿಗಳು ತಾಲೂಕು ಮಟ್ಟದಲ್ಲಿ ಭಾಗವಹಿಸಲು ಅವಕಾಶ ಲಭಿಸಲಿದೆ. ಮಕ್ಕಳು ತಮ್ಮ ಪ್ರತಿಭೆಯನ್ನು ಹೆಚ್ಚಿಸಿಕೊಳ್ಳಲು ಹಂತ ಹಂತವಾಗಿ ತರಬೇತಿಯನ್ನು ಪಡೆಯಬೇಕು. ತಿರ್ಪುಗಾರರು ನ್ಯಾಯಸಮ್ಮತ ತೀರ್ಪು ನೀಡಬೇಕು ಎಂದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಕೆ.ಹರೀಶ್ ಅಗ್ನಿ ಮಾತನಾಡಿ, ಕಾಫಿನಾಡಿನ ಜಿಲ್ಲೆಯವರಾದ ಗೋವಿಂದೇಗೌಡರು ಶಿಕ್ಷಣ ಸಚಿವರಾಗಿದ್ದ ಸಂದರ್ಭದಲ್ಲಿ ಮಕ್ಕಳಮೇಳದ ಮೂಲಕ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಜಾರಿಗೆ ತಂದರು. ಪ್ರತಿಭಾಕಾರಂಜಿಯಲ್ಲಿ ಭಾಗವಹಿಸಿದ ಅನೇಕ ಮಕ್ಕಳು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಹೆಸರು ಗಳಿಸಿದ್ದಾರೆ. ತಮ್ಮಲ್ಲಿ ಸುಪ್ತವಾಗಿರುವ ಪ್ರತಿಭೆಯನ್ನು ಹೊರಹಾಕಲು ವಿದ್ಯಾರ್ಥಿಗಳಿಗೆ ಪ್ರತಿಭಾ ಕಾರಂಜಿ ವೇದಿಕೆ ಅಗಲಿದೆ ಎಂದರು.

ಕೆ.ಬಿದರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಚನಾ ಬಸವರಾಜ್ ಕಾರ್ಯಕ್ರಮ ಉದ್ಘಾಟಿಸಿದರು. ಶಿಕ್ಷಕರ ಸಂಘದ ಕಾರ್ಯದರ್ಶಿ ಪಿ.ಗೀತಾ, ಗಿರೀಶಾರಾಧ್ಯ, ಚಂದ್ರಪ್ಪ, ವಸತಿ ಶಾಲೆಯ ಪ್ರಾಚಾರ್ಯ ಯುವರಾಜ್, ರಮೇಶ್, ಸಿಆರ್‌ಪಿಗಳಾದ ಪ್ರಿಯಾ, ಯಗಟಿ ಸತೀಶ್ ಮತ್ತಿತರಿದ್ದರು.

## ನಾಳೆ ನಗರದಲ್ಲಿ ನೂತನ ಬಸ್ ನಿಲ್ದಾಣಕ್ಕೆ ಶಂಕುಸ್ಥಾಪನೆ

**ಚಿಕ್ಕಮಗಳೂರು, ನ.17:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ನಗರದ ಗ್ರಾಮಾಂತರ ಬಸ್ ನಿಲ್ದಾಣದ ಆವರಣದಲ್ಲಿ ನವೆಂಬರ್ 18 ರಂದು ಬೆಳಿಗ್ಗೆ 11.30ಕ್ಕೆ ನೂತನವಾಗಿ ನಿರ್ಮಿಸಲಿರುವ ಬಸ್ ನಿಲ್ದಾಣದ ಶಂಕುಸ್ಥಾಪನಾ ಸಮಾರಂಭ ಹಾಗೂ ನೂತನ ವಸತಿ ಗೃಹಗಳ ಉದ್ಘಾಟನಾ ಸಮಾರಂಭ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಬಸ್ ನಿಲ್ದಾಣಕ್ಕೆ ಶಂಕುಸ್ಥಾಪನೆ ನೆರವೇರಿಸಲಿದ್ದು, ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವ ಶ್ರೀ ರಾಮಲಿಂಗಾರೆಡ್ಡಿ ವಸತಿ ಗೃಹಗಳನ್ನು ಉದ್ಘಾಟಿಸುವರು. ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನಾ ಇಲಾಖೆ ಸಚಿವರಾದ ಶ್ರೀಭೈರತಿ ಸುರೇಶ್, ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿಗಳಾದ ಎಂ. ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ ಭಾಗವಹಿಸುವರು.

ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರು ಹಾಗೂ ಶಾಸಕರು ಎಂ.ಶ್ರೀನಿವಾಸ್ ಜ್ಯೋತಿ ಬೆಳಗುವರು.

ಶಾಸಕರಾದ ಹೆಚ್.ಡಿತಮ್ಮಯ್ಯ ಅಧ್ಯಕ್ಷತೆ ವಹಿಸಲಿದ್ದು, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್, ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಕೆ.ಎಸ್.ಆನಂದ್, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಡಾ.ಆರತಿ ಕೃಷ್ಣ, ಭದ್ರಾ ಕಾಡಾ ಅಧ್ಯಕ್ಷರಾದ ಡಾ. ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷೆ ಬಿ.ಶೀಲಾ ದಿನೇಶ್, ರಾಜ್ಯ ರಸ್ತೆ ಸಾರಿಗೆ ನಿಗಮದ ಉಪಾಧ್ಯಕ್ಷ ಮೊಹಮ್ಮದ್ ರಿಜ್ವಾನ್ ನವಾಬ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷ ಎಂ.ಮಲ್ಲೇಶ್ ಪಾಲ್ಗೊಳ್ಳುವರು.

# ದೆಹಲಿ ವಿಧ್ವಂಸಕ ಕೃತ್ಯ ಖಂಡನೀಯ : ರಂಭಾಪುರಿ ಶ್ರೀ

**ಬೀದರ್:** ಇತ್ತೀಚೆಗೆ ದೆಹಲಿಯ ಕೆಂಪುಕೋಟೆಯ ಸಮೀಪ ನಡೆದ ಬ್ಲಾಸ್ಟ್‌ನಂತಹ ವಿಧ್ವಂಸಕ ಕೃತ್ಯವನ್ನು ತಾವು ತೀವ್ರವಾಗಿ ಖಂಡಿಸುವುದಾಗಿ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತಿಳಿಸಿದರು.



ಬೀದರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದ ಅವರು ಜೀವಗಳನ್ನು ಉಳಿಸಬೇಕಾದ ವೈದ್ಯರೇ ಜೀವಿಗಳನ್ನು ವಿದ್ವಂಸಕ ಕೃತ್ಯಗಳಿಂದ ಹಲವಾರು ಬಲಿ ತೆಗೆದುಕೊಂಡಿರುವುದು ಅಮಾನವೀಯ ಘಟನೆ ಎಂದು ಖಂಡಿಸಿದ ಜಗದ್ಗುರುಗಳು ಪ್ರಜ್ಞಾವಂತ ಜನರು ಈ ಜೀವ ಸಂಕುಲವನ್ನು ನಾಶಮಾಡುವ ಕೃತ್ಯದಲ್ಲಿ ಭಾಗಿಯಾಗಿರುವುದು ನೋವಿನ ಸಂಗತಿ. ಯಾರೇ ಆಗಿರಲಿ ಈ ರಾಷ್ಟ್ರ ವಿಘಾತಕ ನೀಚ ಕೃತ್ಯವನ್ನು ಜಾತ್ಯಾತೀತವಾಗಿ ಪಕ್ಷಾತೀತವಾಗಿ ಖಂಡಿಸಬೇಕಾದ ಅವಶ್ಯಕತೆ ಇದೆ. ಶ್ರೀ ರಂಭಾಪುರಿ ಜಗದ್ಗುರುಗಳು ನಾಡಿನಾದ್ಯಂತ ನಡೆಸುವ ಕಾರ್ಯಕ್ರಮಗಳಲ್ಲಿ ಜನತೆಗೆ ಈ ಕುರಿತು ಜನಜಾಗೃತಿ ಮೂಡಿಸುವುದರ ಜೊತೆಗೆ ಜನತೆ ಸೌಹಾರ್ದಯುತವಾಗಿ ಬಾಳಬೇಕು. ತಾತ್ವಿಕ ತಳಹದಿಯ ಮೇಲೆ ನಡೆಯಬೇಕೆಂಬ ಬೋಧನೆಯನ್ನು ಮಾಡುತ್ತಿದ್ದೇವೆ. ಕೇಂದ್ರ ಸರ್ಕಾರ ಈ ಭಯೋತ್ಪಾದಕ ಕೃತ್ಯದಲ್ಲಿ ಭಾಗಿಯಾದವರನ್ನು ಹುಡುಕಿ ಸೆದೆಬಡಿಯಬೇಕು. ಇಂತಹ ಕೃತ್ಯಗಳು ಮತ್ತೆ ನಡೆಯದಂತೆ ಕಟ್ಟುನಿಟ್ಟಿನ ಬಿಗಿ ಕ್ರಮ ಕೈಗೊಳ್ಳಬೇಕೆಂದ ಅವರು ಇಂತಹ ಕೃತ್ಯಗಳನ್ನು ಧರ್ಮಪೀಠಗಳು ಸದಾ ಖಂಡಿಸುತ್ತವೆ ಎಂದು ತಿಳಿಸಿದರು.

## ಶ್ರೀಗಂಧದ ಮರ ಕಳಿವಿಗೆ ಯತ್ನ

## ಮರ ಬಿಟ್ಟು ಪರಾರಿಯಾದ ಕಳ್ಳರು



**ಚಿಕ್ಕಮಗಳೂರು:** ನಗರದ ಬಸವನಹಳ್ಳಿ ಬಡಾವಣೆಯ ನರಸಿಂಗರಾವ್ ರಸ್ತೆಯ ಮನೆಯ ಹಿಂಭಾಗದಲ್ಲಿದ್ದ ಶ್ರೀಗಂಧದ ಮರವನ್ನು ಬುಡದ ಸಮೇತ ಕತ್ತರಿಸಿದ ಕಳ್ಳರು ತೆಗೆದುಕೊಂಡು ಹೋಗಲು ಆಗದೆ ಅಲ್ಲಿಯೇ ಬಿಟ್ಟು ಪರಾ–ರಿಯಾದ ಘಟನೆ ನಡೆದಿದೆ.

ನಿವೃತ ಶಿಕ್ಷಕಿ ಉಮಾದೇವಿರವರಿಗೆ ಸೇರಿದ ಬಸವನಹಳ್ಳಿ ಬಡಾವಣೆಯ ನರಸಿಂಗರಾವ್ ರಸ್ತೆಯಲ್ಲಿರುವ ಮನೆಯ ಹಿಂಭಾಗದಲ್ಲಿ ಬೆಳೆಸಿದ ಶ್ರೀಗಂಧದ ಮರವನ್ನು ರಾತ್ರಿ ಸಮಯದಲ್ಲಿ ಕಳ್ಳರು ಶಬ್ದರಹಿತ ಕಟಿಂಗ್ ಮಷೀನ್ ಬಳಸಿ ಶ್ರೀಗಂಧದ ಮರವನ್ನ ಕಡಿದು ಸಾಗಿಸಲು ಪ್ರಯತ್ನಿಸಿದಾಗ ಎರಡು ಗಂಟೆ ಸಂದರ್ಭದಲ್ಲಿ ಪಕ್ಕದ ಮನೆಯ ನಿವಾಸಿ ಮಹೇಶ್ ಎಂಬುವರಿಗೆ ಎಚ್ಚರವಾಗಿ ವಿದ್ಯುತ್‌ದೀಪ ಹಾಕಿ ಯಾರು ಎಂದು ಕೂಗಿಕೊಂಡಾಗ ಶ್ರೀಗಂಧದ ಮರದ ತುಂಡುಗಳನ್ನು ಹಾಗೂ ಕತ್ತರಿಸಿದ ಒಂದು ದೊಡ್ಡ ಮರವನ್ನು ಗೋಡೆಗೆ ಹೊರಗಿಸಿ ಬಿಟ್ಟು ಪರಾರಿಯಾಗಿದ್ದಾರೆ.

# ನ. 20 ರಂದು ಪಾಟ್ನಾದ ಗಾಂಧಿ ಮೈದಾನದಲ್ಲಿ ಹೊಸ ಎನ್‌ಡಿಎ ಸರ್ಕಾರ ಪ್ರಮಾಣವಚನ ಸ್ವೀಕಾರ

**ಪಾಟ್ನಾ:** ಬಿಹಾರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟವು ಭರ್ಜರಿ ಗೆಲುವು ಸಾಧಿಸಿದ್ದು, ನವೆಂಬರ್ 20 ರಂದು ಪಾಟ್ನಾದ ಐತಿಹಾಸಿಕ ಗಾಂಧಿ ಮೈದಾನದಲ್ಲಿ ಹೊಸ ಎನ್‌ಡಿಎ ಸರ್ಕಾರ ಪ್ರಮಾಣವಚನ ಸ್ವೀಕರಿಸಲಿದೆ.

ಈ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸುವ ನಿರೀಕ್ಷೆಯಿದೆ. ನಿತೀಶ್ ಕುಮಾರ್ ಅವರು ದಾಖಲೆಯ ಹತ್ತನೇ ಬಾರಿಗೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುತ್ತಾರೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಪ್ರಮಾಣವಚನ ಸ್ವೀಕಾರ ಸಮಾರಂಭಕ್ಕೆ ಸಿದ್ಧತೆಗಳು ಭರದಿಂದ ಸಾಗಿವೆ.



ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿಕೂಟವು 243 ಸ್ಥಾನಗಳ ಪೈಕಿ 202 ಸ್ಥಾನಗಳನ್ನು ಗೆದ್ದು ಭರ್ಜರಿ ಬಹುಮತ ಸಾಧಿಸಿದೆ. ಬಿಜೆಪಿ 89 ಸ್ಥಾನಗಳೊಂದಿಗೆ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ, ಜೆಡಿಯು 85 ಸ್ಥಾನಗಳನ್ನು ಪಡೆದುಕೊಂಡಿದೆ. ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ ಅವರ ಎಲ್‌ಜೆಪಿ(ಆರ್‌ವಿ) 19 ಸ್ಥಾನಗಳನ್ನು ಗೆದ್ದಿದ್ದರೆ, ಹಿಂದೂಸ್ತಾನಿ ಅವಾಮ್ ಮೋರ್ಚಾ (HAM) ಮತ್ತು ರಾಷ್ಟ್ರೀಯ ಲೋಕ್ ಮೋರ್ಚಾ (RLM) ತಲಾ ಒಂಬತ್ತು ಸ್ಥಾನಗಳನ್ನು ಪಡೆದುಕೊಂಡಿವೆ. ಇತ್ತ, ಆರ್‌ಜೆಡಿ ನೇತೃತ್ವದ ಮಹಾಗಟಬಂಧನ್ ಕೇವಲ 35 ಸ್ಥಾನಗಳನ್ನು ಮಾತ್ರ ಗೆಲ್ಲಲು ಶಕ್ತವಾಯಿತು. ಹೊಸ ಸರ್ಕಾರ ರಚನೆಗೆ ಸಂಬಂಧಿಸಿದಂತೆ, ನಿತೀಶ್ ಕುಮಾರ್ ಅವರು ತಮ್ಮ ಕೊನೆಯ ಸಂಪುಟ ಸಭೆಯನ್ನು ಬೆಳಿಗ್ಗೆ 11:30 ಕ್ಕೆ ನಡೆಸಲಿದ್ದಾರೆ. ಈ ಸಭೆಯಲ್ಲಿ ಸಂಪುಟವನ್ನು ವಿಸರ್ಜಿಸುವ ನಿರ್ಣಯವನ್ನು ಅಂಗೀಕರಿಸಲಾಗುತ್ತದೆ. ನಂತರ, ನಿತೀಶ್ ಕುಮಾರ್ ಅವರು ರಾಜ್ಯಪಾಲ ಅರಿಫ್ ಮೊಹಮ್ಮದ್ ಖಾನ್ ಅವರಿಗೆ ತಮ್ಮ ರಾಜೀನಾಮೆಯನ್ನು ಸಲ್ಲಿಸಲಿದ್ದಾರೆ. ಹಿರಿಯ ಜೆಡಿಯು ನಾಯಕರೊಬ್ಬರ ಪ್ರಕಾರ, ಪ್ರಸ್ತುತ ಅಸ್ತಿತ್ವದಲ್ಲಿರುವ ವಿಧಾನಸಭೆಯನ್ನು ವಿಸರ್ಜಿಸುವ ಪ್ರಸ್ತಾವನೆಯೊಂದಿಗೆ ರಾಜ್ಯಪಾಲರನ್ನು ಭೇಟಿ ಮಾಡಲು ನಿತೀಶ್ ಕುಮಾರ್ ಅವರಿಗೆ ಅಧಿಕಾರ ನೀಡುವ ನಿರ್ಣಯವನ್ನು ಅಂಗೀಕರಿಸಲಾಗುತ್ತದೆ.

ಈ ಬೆಳವಣಿಗೆಯು, ಇತ್ತೀಚೆಗೆ ನಡೆದ ವಿಧಾನಸಭಾ ಚುನಾವಣೆಯಲ್ಲಿ ಎನ್‌ಡಿಎ ಭರ್ಜರಿ ಗೆಲುವು ಸಾಧಿಸಿದ ನಂತರ, ಮುಖ್ಯ ಚುನಾವಣಾ ಅಧಿಕಾರಿ ವಿನೋದ್ ಸಿಂಗ್ ಗುಂಜಿಯಲ್ ಅವರು ಚುನಾಯಿತ ಸದಸ್ಯರ ಪಟ್ಟಿಯೊಂದಿಗೆ ಭಾನುವಾರ ರಾಜ್ಯಪಾಲರನ್ನು ಭೇಟಿ ಮಾಡಿದ ನಂತರ ನಡೆದಿದೆ.

## ದೆಹಲಿ ಸ್ಫೋಟ ಬೆಂಬಲಿಸಿದ ಮತ್ತೊಬ್ಬನ ಬಂಧನ

**ಗುವಾಹಟಿ:** ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ನಡೆದ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಬಂಧಿಸಿದಂತೆ ದೆಹಲಿ ಸ್ಫೋಟವನ್ನು ಬೆಂಬಲಿಸಿ ಸಾಮಾಜಿಕ ಮಾಧ್ಯಮ_ಪೋಸ್ಟ್ ಮಾಡಿದ್ದ ಹಿನ್ನೆಲೆಯಲ್ಲಿ ಅಸ್ಸಾಂನಲ್ಲಿ ಮತ್ತೊಬ್ಬ ವ್ಯಕ್ತಿಯನ್ನು ಬಂಧಿಸಲಾಗಿದ್ದು, ಈವರೆಗೆ ಬಂಧಿತರ ಸಂಖ್ಯೆ 21ಕ್ಕೆ ಏರಿ–ಕೆಯಾಗಿದೆ. ಈ ಕುರಿತು ಮಾಹಿತಿ ನೀಡಿರುವ ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಶರ್ಮಾ ಭಯೋತ್ಪಾದಕರಿಗೆ ಆನ್‌ಲೈನ್‌ನಲ್ಲಿ ಬೆಂಬಲ ನೀಡುವ ಯಾವುದೇ ವ್ಯಕ್ತಿಯನ್ನು ಬಿಡಲಾಗುವುದಿಲ್ಲ , ಜೊತೆಗೆ ಉಗ್ರ ಚಟುಚಟಿಕೆಗಳನ್ನು ಬೆಂಬಲಿಸುವ ಯಾರೇ ಆದರೂ ಅವರ ವಿರುದ್ಧ ನಿರ್ಧಾಕ್ಷ್ಯವಾಗಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**